RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 91 ಪುಟ: 06 ಬುಧವಾರ 05-03-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu



ಉಪವಾಸ ಮುರಿದ ಮೊಹಮ್ಮದ್ ಶಮಿ

ವಿರಾಟ್ ದಾಖಲೆಗಳ ಸುರಿಮಳೆ

ಅನುಶ್ರೀ ನಿರೂಪಣೆಗೆ ವಿರೋಧ ಪುಟ 6



Honourary Editor: Venkatesh

# ಸಾವಿರ ಕೋಟಿ ಸಾಲ!

## ಸಿದ್ದರಾಮಯ್ಯ ಸರ್ಕಾರ ಸಾಲದ ಚಾಂಪಿಯನ್: ಬಿಜೆಪಿ ವಾಗ್ದಾಳಿ

**ಬೆಂಗಳೂರು:** ಗ್ಯಾರಂಟಿ ಯೋಜನೆಗಳಿಗಾಗಿ ಸರ್ಕಾರ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣವನ್ನು ದುರುಪಯೋಗ ಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿ ಭಾರತೀಯ ಜನತಾ ಪಕ್ಷ ಬುಧವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷರಾದಿಯಾಗಿ ವಿಧಾನಸಭೆ ಶಾಸಕರು, ಪರಿಷತ್ ಸದಸ್ಯರುಗಳೆಲ್ಲರೂ ಇಂದು ಅಧಿವೇಶನವನ್ನು ಬದಿಗಿಟ್ಟು ಪ್ರತಿಭಟನೆ ನಡೆಸಿದರು.

ಪ್ರತಿಪಕ್ಷ ನಾಯಕ ಆರ್.ಅಶೋಕ್, ಶಾಸಕರಾದ ಡಾ.ಅಶ್ವತ್ಥನಾರಾಯಣ್, ಬೈರತಿ ಬಸವರಾಜ್, ಎಸ್. ಆರ್.ವಿಶ್ವನಾಥ್‌ಸೇರಿದಂತೆ ಬಹುತೇಕ ಶಾಸಕರುಗಳು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಹರಿಹಾಯ್ದರು.

ಸರ್ಕಾರ 'ಎಸ್‌ಸಿಪಿ-ಟಿಎಸ್‌ಪಿ ಹಣ ದುರ್ಬಳಕೆ' ಮಾಡಿಕೊಂಡು ದಲಿತ ವಿರೋಧಿ ನಡೆ ಅನುಸರಿಸುತ್ತಿದೆಎಂದು ಆರೋಪಿಸಿ ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ವಿಪಕ್ಷ ನಾಯಕ ಆರ್.ಅಶೋಕ್, ಸಿಎಂ ಸಿದ್ದರಾಮಯ್ಯ 1 ಸಾವಿರ ಕೋಟಿ ಸಾಲ ಮಾಡಿದೆ. ಸಿದ್ದರಾಮಯ್ಯ ಸಾಲದ ಚಾಂಪಿಯನ್ ಆಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಸಿದ್ದರಾಮಯ್ಯ ಸರ್ಕಾರ ದಲಿತರ ಹಣ ಲೂಟಿ ಮಾಡಿದೆ. ಗ್ಯಾರಂಟಿಗಾಗಿ ದಲಿತರ ಹಣ ಬಳಸಲಾಗಿದೆ. ನಾನು ಸಿದ್ದಣ್ಣ, "ಲೂಟಿ ಗ್ಯಾರಂಟಿಯ ಅಣ್ಣ" ಎಂಬಂತಾಗಿದೆ. ಭಿಕ್ಷೆ ಬೇಡೋ ಸ್ಥಿತಿಗೆ ಸಿಎಂ ಸಿದ್ದರಾಮಯ್ಯ ಸರ್ಕಾರ ಬಂದಿದೆ ಎಂದು ಲೇವಡಿ ಮಾಡಿದರು.

ಎಲ್ಲ ನಿಗಮ, ತಾಂಡಾ ಅಭಿವೃದ್ಧಿ ನಿಗಮಗಳಿಗೆ ಕನಿಷ್ಠ ಮೊತ್ತವನ್ನು ಈ ಸರ್ಕಾರ ನೀಡದೇ ಅನ್ಯಾಯವೆಸಗಿದೆ ಎಂದು ಆರೋಪಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಮಾತನಾಡಿ, ಗ್ಯಾರಂಟಿಗಳನ್ನು ಸರಿಯಾಗಿ ಅನುಷ್ಠಾನ ಮಾಡಲು ಸಾಧ್ಯವಾಗದೆ ಪರಿಶಿಷ್ಟ ಜಾತಿ, ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣವನ್ನು ದುರುಪಯೋಗ



ಪಡಿಸಿಕೊಂಡು ಸರ್ಕಾರ ಆಡಳಿತ ನಡೆಸುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ದುಷ್ಟ, ದಲಿತ ವಿರೋಧಿ ಕಾಂಗ್ರೆಸ್ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕಾಗಿದೆ. ನಮ್ಮ ಹೋರಾಟ ನಿರಂತರವಾಗಿರಲು ಕೈಜೋಡಿಸಿ ಎಂದು ಕರೆ ನೀಡಿದರು. ಗುರುವಾರ ಕೂಡ ಇದೇ ಜಾಗದಲ್ಲಿ ಬೃಹತ್ ಹೋರಾಟ ನಡೆಯಲಿದೆ. ಎಲ್ಲರೂ ಭಾಗವಹಿಸಿ ಎಂದು ಮನವಿ ಮಾಡಿದರು.

ಬಿಜೆಪಿ ಸರಕಾರಗಳು ಪರಿಶಿಷ್ಟ ಜಾತಿ, ಪಂಗಡದ ಹಣ ದುರ್ಬಳಕೆ ಮಾಡಿಲ್ಲ; ಮಾಡುವುದೂ ಇಲ್ಲ ಎಂದು ಹೇಳಿದರು.

ಈ ದಲಿತ ವಿರೋಧಿ ಕಾಂಗ್ರೆಸ್ ಸರಕಾರದ ವಿರುದ್ಧ ಬಿಜೆಪಿ ನಿರಂತರ ಹೋರಾಟ ಮಾಡುತ್ತ ಬಂದಿದೆ ಎಂದು ಅವರು ನುಡಿದರು. ಬಿಜೆಪಿ ಯಾವತ್ತೂ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗಗಳ ಪರವಾಗಿದೆ ಎಂದು ವಿವರಿಸಿದರು. ಸಚಿವರೊಬ್ಬರು ಬಿಜೆಪಿ ಆಡಳಿತದ ಇತರ ರಾಜ್ಯಗಳ ಸರಕಾರಗಳ ಕುರಿತು ತಪ್ಪು ಮಾಹಿತಿ ಪುಟ 2



2024-25 ನೇ ಸಾಲಿನಲ್ಲಿ ನಡೆದ 139 ಕರಗ ಉತ್ಸವಗಳಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹೇರಳ ಅನುದಾನ ನೀಡಿದ್ದಕ್ಕಾಗಿ ಕರಗ ಉತ್ಸವ ಸಮಿತಿಗಳು ಒಟ್ಟಾಗಿ ಬುಧವಾರ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿದರು.

## ವಿಧಾನಸೌಧ, ರಾಜಭವನಕ್ಕೆ ನೋಟಿಸ್ ಜಾರಿ..!

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಕರ್ನಾಟಕ ವಿಧಾನಸಭೆ, ವಿಧಾನಸೌಧ, ರಾಜ್ಯಪಾಲರ ನಿವಾಸ( ರಾಜಭವನ) ಮತ್ತು ವಿಕಾಸಸೌಧ ಸೇರಿದಂತೆ 258 ಸರ್ಕಾರಿ ಕಟ್ಟಡಗಳಿಗೆ ಆಸ್ತಿ ತೆರಿಗೆ ಪಾವತಿಸದ ಕಾರಣ ನೋಟಿಸ್ ನೀಡಿದೆ.




ಕೆಲವು ಇಲಾಖೆಗಳು ಸುಮಾರು 17 ವರ್ಷಗಳಿಂದ ಸುಸ್ತಿದಾರರಾಗಿದ್ದಾರೆ ಎಂದು ವರದಿಯಾಗಿದೆ, ತೆರಿಗೆ ಬಾಕಿ ಹಣ ಕೋಟಿಗಳಷ್ಟಿದೆ. ಪುಟ 2

## ಮುಸ್ಲಿಮರ ಓಲೈಕೆ, ಇತರರಿಗೆ ಅನ್ಯಾಯ

**ಬೆಂಗಳೂರು:** ಸಿದ್ದರಾಮಯ್ಯರ ನೇತೃತ್ವದ ಕಾಂಗ್ರೆಸ್ ಸರಕಾರದಲ್ಲಿ ಕಾಯಕ ಸಮುದಾಯಗಳಿಗೆ ಆರ್ಥಿಕ ಶಕ್ತಿ ಕೊಟ್ಟು ಅವರನ್ನು ಮುಂದಕ್ಕೆ ತರುವ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಇಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಮುಸ್ಲಿಮರನ್ನು ಓಲೈಸಲು ಹೊರಟ ಕಾಂಗ್ರೆಸ್ ಸರಕಾರವು, ಇತರರೆಲ್ಲರಿಗೂ ಅನ್ಯಾಯ ಮಾಡಲು ಹೊರಟಿದೆ ಎಂದು ಆಕ್ಷೇಪಿಸಿದರು.

ಸಿದ್ದರಾಮಯ್ಯನವರು ನಿಜವಾಗಿಯೂ ಅಹಿಂದ ನಾಯಕರೇ ಆಗಿದ್ದರೆ ಇಷ್ಟೊತ್ತಿಗೆ ಅನೇಕ ಹಿಂದುಳಿದ ಸಮಾಜಗಳಿಗೆ ಆರ್ಥಿಕ ಶಕ್ತಿ ತುಂಬಬೇಕಿತ್ತು. ಗುಡಿ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ನೀವು ಕೈ ಜೋಡಿಸಬೇಕಿತ್ತು ಎಂದು ತಿಳಿಸಿದರು. ಮಡಿವಾಳರು, ಸವಿತಾ ಸಮಾಜ ಸೇರಿ ಅನೇಕ ಕಾಯಕ ಸಮುದಾಯಗಳು ನಾಡಿನಲ್ಲಿವೆ. ಅಲ್ಪಸಂಖ್ಯಾತರಿಗೆ ಶೇ 4ರಷ್ಟು ಮೀಸಲಾತಿಯ ನಿರ್ಧಾರ ತೆಗೆದುಕೊಳ್ಳಲು ಹೊರಟಿದ್ದಾರೆ. ಅಲ್ಪಸಂಖ್ಯಾತರು ಎಂದರೆ ಮುಸ್ಲಿಮರು ಮಾತ್ರವೇ? ಬೇರೆ ಯಾರೂ



ಇಲ್ಲವೇ ಎಂದು ಕೇಳಿದರು. ಈ ಕಾಂಗ್ರೆಸ್ ಸರಕಾರದ ಅಲ್ಪಸಂಖ್ಯಾತರ ತುಷ್ಟೀಕರಣದ ನೀತಿಯಿಂದ ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ಮಾಡಲು ಹೊರಟಿದ್ದಾರೆ ಎಂದು ಆಕ್ಷೇಪಿಸಿದರು.

ರಾಜ್ಯ ಸರಕಾರವು ಮುಸ್ಲಿಮರ ಓಲೈಕೆ ಮಾಡಲು ಹೊರಟಿದೆ. ಜನರೇ ಇವರಿಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ತಿಳಿಸಿದರು. ಅವರು ಭಂಡರಿದ್ದಾರೆ. ದಪ್ಪ ಚರ್ಮ ಬೆಳೆಸಿಕೊಂಡಿದ್ದಾರೆ. ಪುಟ 2

## ಹಕ್ಕಿಜ್ವರ ಆತಂಕ ಬೇಡ, ಎಚ್ಚರಿಕೆ ವಹಿಸಿ

**ಬೆಂಗಳೂರು:** ಹಕ್ಕಿಜ್ವರ ಸಾಂಕ್ರಾಮಿಕ ರೋಗವಾಗಿದ್ದರೂ ಅದು ಹಕ್ಕಿಗಳಿಂದ ಮನುಷ್ಯರಿಗೆ ಹರಡುವುದು ಅಪರೂಪ,ಆದ್ದರಿಂದ ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಅಭಯ ನೀಡಿದ್ದಾರೆ. ಹಕ್ಕಿಜ್ವರದ ಬಗ್ಗೆ ಆತಂಕಪಡದೆ ಎಚ್ಚರಿಕೆ ವಹಿಸಬೇಕೆಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಪುಟ 2

## ನೇರಪ್ರಸಾರ: ಲೋಪವೆಸಗಿದ ಅಧಿಕಾರಿ ಅಮಾನತು

**ಬೆಂಗಳೂರು:** ವಿಧಾನಸಭೆ ಕಾರ್ಯ ಕಲಾಪಗಳ ನೇರಪ್ರಸಾರದಲ್ಲಿ ಪ್ರತಿಪಕ್ಷ ಸದಸ್ಯರ ತೋರಿಸದೆ ಲೋಪವೆಸಗಲಾಗುತ್ತಿದೆ ಎಂದು ತೀವ್ರ ಆಕ್ಷೇಪ ವ್ಯಕ್ತವಾದ ಬೆನ್ನಲ್ಲೇ ಅಧಿಕಾರಿಯನ್ನು ಅಮಾನತು ಮಾಡಲಾಗಿದೆ. ಸದನದ ಕಲಾಪದ ನೇರ ಪ್ರಸಾರದಲ್ಲಿ ವಿರೋಧ ಪಕ್ಷದ ಸದಸ್ಯರನ್ನು ತೋರಿಸದೇ, ಕೇವಲ ಆಡಳಿತ ಪಕ್ಷದವರನ್ನು ತೋರಿಸಲಾಗುತ್ತಿತ್ತು. ಪುಟ 2

## ಕೇಂದ್ರ ತಮಿಳು ವಿರೋಧಿಯಾಗಿದೆ

**ತಮಿಳುನಾಡು:** ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ತಮಿಳು ವಿರೋಧಿಯಾಗಿದೆ ಎಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಆರೋಪಿಸಿದ್ದಾರೆ. ಹಿಂದಿ ಹೇರಿಕೆಗೆ ಸಾರ್ವಕಾಲಿಕ ವಿರೋಧ ಎಂಬ ವಿಷಯದ ಬಗ್ಗೆ ತಮ್ಮ ಸರಣಿಯ ಭಾಗವಾಗಿ ಪಕ್ಷದ ಕಾರ್ಯ ಪುಟ 2

## ಅರಣ್ಯಭೂಮಿ ಮರುವಶಕ್ಕೆ ಸೂಚನೆ

ಬೆಂಗಳೂರು : ಬೆಂಗಳೂರಿನ ಪೀಣ್ಯ ಪ್ಲಾಂಟೇಷನ್ ಮತ್ತು ಜಾರಕಬಂಡೆ ಕಾವಲು ಪ್ರದೇಶದಲ್ಲಿ ಪ್ರಸ್ತುತ ಭಾರತೀಯ ವಾಯುಪಡೆ ವಶದಲ್ಲಿರುವ 444.12 ಎಕರೆ ಅರಣ್ಯ ಭೂಮಿಯನ್ನು ನಿಯಮಾನುಸಾರ ಮರು ವಶಕ್ಕೆ ಪಡೆಯುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ವಾಯುಪಡೆಗೆ 1987ರಲ್ಲಿ ಮಂಜೂರು ಮಾಡಲಾಗಿದ್ದ 570 ಎಕರೆ ಭೂಮಿಯ ಪೈಕಿ ಅರಣ್ಯ ಎಂದು ಅಧಿಸೂಚನೆ ಆಗಿರುವ 452 ಎಕರೆ ಮಂಜೂರಾತಿ ರದ್ದುಪಡಿಸಿ, 2017ರಲ್ಲಿ ಸರ್ಕಾರ ಆದೇಶ ಹೊರಡಿಸಿದೆ. ಆದರೂ ಭಾರತೀಯ ವಾಯು ಪಡೆ ಮಾ. 1ರಂದು ಎಫ್.ಸಿ. (ಅರಣ್ಯ ತೀರುವಳಿ) ಅನುಮತಿ ಪಡೆಯದೆ ಅಕ್ರಮವಾಗಿ ನಿರ್ಮಾಣ ಕಾಮಗಾರಿ ಆರಂಭಿಸಿತ್ತು. ಇದನ್ನು ತಡೆಯಲಾಗಿದೆ ಎಂದು ಅರಣ್ಯಾಧಿಕಾರಿಗಳು ಇಂದು ತಿಳಿಸಿದ ಹಿನ್ನೆಲೆಯಲ್ಲಿ ಅರಣ್ಯ ಸಚಿವರು ಈ ಸೂಚನೆ ನೀಡಿದ್ದಾರೆ ಎಂದು ವರದಿಯಾಗಿದೆ.

ಸರ್ಕಾರದ 2017ರ ಆದೇಶದನ್ವಯ ಮ್ಯುಟೇಷನ್ ಆಗಿದ್ದು, ಪ್ರಸ್ತುತ ಈ ಜಮೀನಿನ ಪಹಣಿಯಲ್ಲಿ ಮೀಸಲು ಅರಣ್ಯ ಎಂದು ನಮೂದಾಗಿದೆ. ಅರಣ್ಯ ಇಲಾಖೆ ಈ ವಿಷಯವನ್ನು ವಾಯುಪಡೆಯ ಅಧಿಕಾರಿಗಳ ಗಮನಕ್ಕೆ ತಂದು ಸದರಿ ಜಮೀನು, ಮೀಸಲು ಅರಣ್ಯ ಎಂಬ ಫಲಕವನ್ನೂ ಹಾಕಿದೆ. ಈ ಅರಣ್ಯ ಭೂಮಿ ತೆರವು ಮಾಡುವಂತೆ ರಕ್ಷಣಾ ಸಚಿವಾಲಯಕ್ಕೆ ಪತ್ರವನ್ನೂ ಬರೆಯಲಾಗಿದೆ. ಸಂಪೂರ್ಣ ಮಾಹಿತಿ ಇದ್ದರೂ ವಾಯುಪಡೆ ಅನಧಿಕೃತವಾಗಿ, ನಿಯಮ ಮೀರಿ ನಿರ್ಮಾಣ ಕಾಮಗಾರಿ ನಡೆಸುತ್ತಿತ್ತು. ಪ್ರಸ್ತುತ ಕಾಮಗಾರಿ ನಿಲ್ಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಸ್ತುತ 444 ಎಕರೆ ಜಮೀನಿನ ಪೈಕಿ ಸುಮಾರು 15 ಎಕರೆ ಪ್ರದೇಶದಲ್ಲಿ ವಾಯುಪಡೆ ಶೂಟಿಂಗ್ ರೇಂಜ್ ನಿರ್ಮಿಸಿಕೊಂಡು ತರಬೇತಿ ನೀಡುತ್ತಿದೆ. ಸ್ವಲ್ಪ ಜಮೀನಿನಲ್ಲಿ ವಾಯುಪಡೆಯ ಕಚೇರಿ ಇತ್ಯಾದಿ ನಿರ್ಮಿಸಿದೆ. ಉಳಿದ ಭೂಮಿ ಅರಣ್ಯ ಸ್ವರೂಪದಲ್ಲೇ ಇದ್ದು, ಮರ, ಗಿಡಗಳಿಂದ ಸಮೃದ್ಧವಾಗಿದೆ ಎಂದು ಅಧಿಕಾರಿಗಳು ವಿವರಿಸಿದರು. ಪುಟ 2

## ಏಕದಿನ ಕ್ರಿಕೆಟ್‌ಗೆ ಸ್ಟೀವ್ ಸ್ಮಿತ್ ವಿದಾಯ

**ದುಬೈ:** ಚಾಂಪಿಯನ್ಸ್ ಟ್ರೋಫಿ ಸೆಮಿಫೈನಲ್ ಪಂದ್ಯದಲ್ಲಿ ಭಾರತದ ವಿರುದ್ಧ ಆಸ್ಟ್ರೇಲಿಯಾ ಸೋತ ಬೆನ್ನಲ್ಲೇ ಇದೀಗ ಆಸ್ಟ್ರೇಲಿಯಾ ತಂಡದ ಕ್ಯಾಪ್ಟನ್ ಆಗಿದ್ದ ಸ್ಟೀವ್ ಸ್ಮಿತ್ ಏಕದಿನ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ.



ಮಂಗಳವಾರ ನಡೆದ ಚಾಂಪಿಯನ್ಸ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ಎದುರಾಗಿದ್ದವು. ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡವು ಆಸ್ಟ್ರೇಲಿಯಾವನ್ನು ಬಗ್ಗು ಬಡಿದು ಫೈನಲ್ ಗೇರಿದೆ.

ಈ ಮಧ್ಯೆ ಪಂದ್ಯದ ಮುಗಿದ ಬಳಿಕ ಆಸ್ಟ್ರೇಲಿಯಾ ಕ್ಯಾಪ್ಟನ್ ಸ್ಟೀವ್ ಸ್ಮಿತ್ ಅವರು ಏಕದಿನ ಕ್ರಿಕೆಟ್ ನಿಂದ ನಿವೃತ್ತರಾಗುವುದಾಗಿ ತಿಳಿಸಿದ್ದಾರೆ. ಸ್ಟೀವ್ ಸ್ಮಿತ್ ಅವರು ಟೆಸ್ಟ್ ಮತ್ತು ಟಿ 20 ಅಂತರರಾಷ್ಟ್ರೀಯ ಪಂದ್ಯಗಳಿಗೆ ಲಭ್ಯವಿರಲಿದ್ದಾರೆ.

ಲೆಗ್ ಸ್ಪಿನ್ ಆಲ್ ರೌಂಡರ್ ಆಗಿ 2010 ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಪಾದಾರ್ಪಣೆ ಮಾಡಿದ ಸ್ಟೀವ್ ಸ್ಮಿತ್ 170 ಏಕದಿನ ಪಂದ್ಯಗಳಲ್ಲಿ 43.28 ಸರಾಸರಿಯಲ್ಲಿ 5800 ರನ್ ಗಳಿಸಿದ್ದಾರೆ ಮತ್ತು 12 ಶತಕಗಳು ಮತ್ತು 35 ಅರ್ಧಶತಕಗಳು ಮತ್ತು 28 ವಿಕೆಟ್ ಗಳನ್ನು ಪಡೆದಿದ್ದಾರೆ.ಸ್ಟೀವ್ ಸ್ಮಿತ್ ಆಸ್ಟ್ರೇಲಿಯಾದ 2015 ಮತ್ತು 2023 ರ ಐಸಿಸಿ ವಿಶ್ವಕಪ್ ಪುಟ 2

## ನಿಂತಿದ್ದ ಟ್ರಕ್‌ಗೆ ಲಾರಿ ಡಿಕ್ಕಿ: ಮೂವರ ಸಾವು

**ಚಿತ್ರದುರ್ಗ:** ತಾಲ್ಲೂಕಿನ ಸಿಬಾರ ಗ್ರಾಮದ ಬಳಿ ರಸ್ತೆ ಬದಿ ನಿಂತಿದ್ದ ಟ್ರಕ್‌ಗೆ ಹಿಂದಿನಿಂದ ಬಂದ ಲಾರಿ ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಮೃತಪಟ್ಟಿರುವ ಘಟನೆ ಬುಧವಾರ ಬೆಳ್ಳಂಬೆಳಗ್ಗೆ ಸಂಭವಿಸಿದೆ.

ಲಾರಿ ಚಾಲಕ ಹಾಗೂ ಟ್ರಕ್‌ನಲ್ಲಿ ಕಲ್ಲಂಗಡಿ ಸಾಗಿಸುತ್ತಿದ್ದ ಇಬ್ಬರು ವ್ಯಕ್ತಿಗಳು ಸಾವಿಗೀಡಾಗಿದ್ದಾರೆ. ಭತ್ತ ತುಂಬಿದ್ದ ಲಾರಿ ದಾವಣಗೆರೆ ಕಡೆಗೆ ಹೊರಟಿದ್ದರೆ ಹರಿಯಾಣ ಮೂಲದ ಟ್ರಕ್ ರಸ್ತೆ ಬದಿ ನಿಂತಿತ್ತು. ನಿದ್ದೆ ಮಂಪರಿನಲ್ಲಿದ್ದ ಲಾರಿ ಚಾಲಕ ರಸ್ತೆ ಬದಿ ನಿಂತಿದ್ದ ಟ್ರಕ್‌ಗೆ ಗುದ್ದಿದ್ದಾನೆಂದು ಶಂಕಿಸಲಾಗಿದೆ.ಮೃತರನ್ನು ಲಾರಿ ಚಾಲಕ ಶೇಖರ್ ಹಾಗೂ ಟ್ರಕ್‌ನ ಚಾಲಕ ಉತ್ತರ ಪ್ರದೇಶ ಅಲಿಗಡ ಜಲ್ಲೆಯ ಉದಲ ಇಲಿಯಾಸ್ ಪುರದ ನಿವಾಸಿ ಜುಬುರುದ್ದೀನ್ (52) ಮತ್ತು ಕ್ಲಿನರ್ ಮಹಮ್ಮದ್ ಖೈಫ್ ಮೃತಪಟ್ಟ ದುರ್ದೈವಿಗಳಾಗಿದ್ದಾರೆ. ಈ ಟ್ರಕ್ ಬೆಂಗಳೂರಿನಿಂದ ಮುಂಬೈಗೆ ಹೋಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಪುಟ 2

## 'ಭಾರತ ನಮಗೆ ಶೇ 100ಕ್ಕಿಂತ ಹೆಚ್ಚು ಆಟೋ ಸುಂಕ ವಿಧಿಸುತ್ತಿದೆ'

# ಏ.2ರಿಂದ ಪ್ರತಿ ಸುಂಕ ಜಾರಿ: ಟ್ರಂಪ್

**ನ್ಯೂಯಾರ್ಕ್(ಯುಎಸ್‌ಎ):** "ಭಾರತ, ಚೀನಾ ಸೇರಿದಂತೆ ಇತರೆ ದೇಶಗಳು ನಮ್ಮ ಉತ್ಪನ್ನಗಳಿಗೆ ಹೆಚ್ಚು ಸುಂಕ ವಿಧಿಸುತ್ತಿರುವುದು ನ್ಯಾಯವಲ್ಲ" ಎಂದು ಟೀಕಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇದೀಗ ಇದಕ್ಕೆ ಪ್ರತಿ ಸುಂಕ ವಿಧಿಸುವ ಕುರಿತು ಮಹತ್ವದ ಘೋಷಣೆ ಮಾಡಿದ್ದಾರೆ. ಈ ಸುಂಕಗಳು ಏಪ್ರಿಲ್ 2ರಿಂದ ಜಾರಿಗೆ ಬರಲಿವೆ ಎಂದು ತಿಳಿಸಿದ್ದಾರೆ.


ಮಂಗಳವಾರ ರಾತ್ರಿ ಅಮೆರಿಕದ ಸಂಸತ್ತು ಕಾಂಗ್ರೆಸ್‌ನ ಜಂಟಿ ಅಧಿವೇಶನ ಉದ್ದೇಶಿಸಿ ಅವರು ಮಾತನಾಡಿದರು.

"ನಮ್ಮಿಂದ ಆಮದು ಮಾಡಿಕೊಳ್ಳುತ್ತಿರುವ ಸರಕುಗಳಿಗೆ ವಿದೇಶಗಳು ಹಾಕುತ್ತಿರುವ ಸುಂಕಗಳಿಗೆ ಅನುಗುಣವಾಗಿ ನಾವು ಅವರಿಂದ ಆಮದು ಮಾಡಿಕೊಳ್ಳುವ ಸರಕುಗಳಿಗೆ ಪ್ರತಿ ಸುಂಕು ವಿಧಿಸುತ್ತೇವೆ" ಎಂದು ಅವರು ಹೇಳಿದ್ದಾರೆ. "ಇತರೆ ದೇಶಗಳು ನಮ್ಮ ಮೇಲೆ ದಶಕಗಳಿಂದ ಸುಂಕ ಹಾಕುತ್ತಿವೆ. ಈಗ ನಾವು ಅವರ ಮೇಲೆ ಸುಂಕು ಹಾಕುವ ಸರದಿ ಬಂದಿದೆ. ಯುರೋಪಿಯನ್ ಯೂನಿಯನ್, ಚೀನಾ, ಬ್ರೆಜಿಲ್, ಭಾರತ, ಮೆಕ್ಸಿಕೋ ಮತ್ತು ಕೆನಡಾ ಸೇರಿದಂತೆ ಹಲವು ದೇಶಗಳು ನಾವು ಅವರಿಗೆ ವಿಧಿಸುವ ತೆರಿಗೆಗಿಂತಲೂ ಅದೆಷ್ಟೋ ಹೆಚ್ಚಿನ ಪ್ರಮಾಣದಲ್ಲಿ ಸುಂಕ ಹಾಕುತ್ತಿದ್ದಾರೆ. ಇದು ನ್ಯಾಯವಲ್ಲ" ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ಭಾರತ ನಮ್ಮ ವಾಹನಗಳಿಗೆ ಶೇ.100ಕ್ಕೂ ಹೆಚ್ಚು ಸುಂಕ ವಿಧಿಸುತ್ತದೆ" ಎಂದು ಅವರು ಇದೇ ವೇಳೆ ತಿಳಿಸಿದರು. ಕಳೆದ ಫೆಬ್ರವರಿಯಲ್ಲಿ, ಅಧ್ಯಕ್ಷ ಟ್ರಂಪ್ ಮಾತನಾಡುತ್ತಾ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಭಾರತ ಮತ್ತು ಚೀನಾ ವಿರುದ್ಧ ಪ್ರತಿ ಸುಂಕ ಹೇರಲಿದೆ ಎಂದಿದ್ದರು. ಪುಟ 2

## ವಿಪಕ್ಷ ನಾಯಕರಾಗಿ ಭಾಸ್ಕರ್ ನೇಮಕ


**ಮುಂಬೈ:** ಮಹಾರಾಷ್ಟ್ರ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿ ಸೇನಾ-ಯುಬಿಟಿ ಶಾಸಕ ಭಾಸ್ಕರ್ ಜಾಧವ್ ಅವರು ನೇಮಕವಾಗಿದ್ದಾರೆ.



ಮಹಾರಾಷ್ಟ್ರ ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ(ಎಲ್‌ಒಪಿ) ಸ್ಥಾನಕ್ಕೆ ಹಕ್ಕು ಮಂಡಿಸಿದ್ದು, ಹಿರಿಯ ಶಾಸಕ ಭಾಸ್ಕರ್ ಜಾಧವ್ ಅವರನ್ನು ಕ್ಯಾಬಿನೆಟ್ ಮಟ್ಟದ ಸ್ಥಾನಕ್ಕೆ ನೇಮಕ ಮಾಡಲಾಗಿದೆ ಎಂದು ಪುಟ 2

# ಬಜೆಟ್‌ನಲ್ಲಿ ಉತ್ತರ ಕರ್ನಾಟಕ ಭಾಗದ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡಲು ಮುಖ್ಯಮಂತ್ರಿಗೆ ಮನವಿ

**ಬೆಂಗಳೂರು:** ಬಜೆಟ್ ನಲ್ಲಿ ಉತ್ತರ ಕರ್ನಾಟಕ ಭಾಗದ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾಸಂಸ್ಥೆ ಅಧ್ಯಕ್ಷ ಶಿವಕುಮಾರ ಮೇಟಿ ಮನವಿ ಮಾಡಿದ್ದಾರೆ.




ಮಹಾ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶಂಕರ ಪಾಗೋಜಿ ಹಾಗೂ ಅಧ್ಯಕ್ಷರಾದ ಶಿವಕುಮಾರ ಮೇಟಿಯವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರದ ಮೂಲಕ ಮನವಿ ಮಾಡಿದ್ದು, ಉತ್ತರ ಕರ್ನಾಟಕ ಭಾಗದ ಜನರು ವಿವಿಧ ಉದ್ಯೋಗ ಅರಸಿ ಹಾಗೂ ವಿದ್ಯಾಭ್ಯಾಸ, ವ್ಯಾಪಾರ ವಹಿವಾಟು ನಡೆಸಲು ರಾಜ್ಯದ ರಾಜಧಾನಿ ಬೆಂಗಳೂರಿಗೆ ಆಗಮಿಸಿ, ಇಲ್ಲಿಯೇ ನೆಲೆಸಿ ಜೀವನ ಕಂಡುಕೊಂಡಿದ್ದು, ಬೆಂಗಳೂರಿನಲ್ಲಿ ಉತ್ತರ ಕರ್ನಾಟಕ ಭಾಗದ ಸುಮಾರು 25 ಲಕ್ಷಕ್ಕೂ ಹೆಚ್ಚು ಜನರು ನೆಲೆಸಿದ್ದಾರೆ.

ಉತ್ತರ ಕರ್ನಾಟಕ ಭಾಗದ ಜನರು ಬೆಂಗಳೂರಿನ ವಿವಿಧ ಭಾಗಗಳಲ್ಲಿ ಸಂಘಗಳನ್ನು ಕಟ್ಟಿಕೊಂಡಿದ್ದು, ಎಲ್ಲ ಉತ್ತರ ಕರ್ನಾಟಕ ಸಂಘಗಳು ಸೇರಿಕೊಂಡು ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆ ಕಟ್ಟಿಕೊಂಡಿದ್ದು ಇದೊಂದು ಲಾಭದಾಯಕವಲ್ಲದ ಸಂಸ್ಥೆಯಾಗಿದ್ದು, ಆ ಭಾಗದ ಸಂಸ್ಕೃತಿ ಪರಂಪರೆ, ಉಳಿಸಿಕೊಂಡು ಹೋಗುವ ಕೆಲಸ ಮಾಡುತ್ತಿದೆ. ಅಲ್ಲದೇ ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿದೆ. ತಾವು ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರಾಗಿ ದಾಖಲೆಯ ಬಜೆಟ್ ಮಂಡನೆ ಮಾಡುತ್ತಿರುವುದು ಸಂತಸದ ವಿಷಯವಾಗಿದ್ದು, ತಮ್ಮ ಈ ಬಜೆಟ್ ನಲ್ಲಿ ಹಿಂದುಳಿದ ಉತ್ತರ ಕರ್ನಾಟಕ ( ಕಲ್ಯಾಣ ಹಾಗೂ ಕಿತ್ತೂರು ಕರ್ನಾಟಕ) ಭಾಗದ ಅಗತ್ಯ ಮೂಲ ಸೌಕರ್ಯಗಳಾದ ಕುಡಿಯುವ ನೀರು, ರಸ್ತೆ, ಆಸ್ಪತ್ರೆ, ಪ್ರಾಥಮಿಕ ಶಾಲಾ ಕೊಠಡಿ ನಿರ್ಮಾಣದಂತ ಅಗತ್ಯ ಸೌಲಭ್ಯ ಕಲ್ಪಿಸಲು ಹೆಚ್ಚಿನ ಅನುದಾನ ಮೀಸಲಿಟ್ಟು, ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಯ ಜೊತೆಗೆ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು ಸಾಧಿಸುವಂತಾಗಲು ಆ ಭಾಗದ ಈ ಕೆಳಗಿನ ಬೇಡಿಕೆಗಳಿಗೆ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ಮೀಸಲಿಡುವಂತೆ ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇವೆ ಎಂದು ಮನವಿ ಮಾಡಿದ್ದಾರೆ.

ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೆ ಹಂತದ ಕಾಮಗಾರಿ ಪೂರ್ಣಗೊಳಿಸಲು ಬಜೆಟ್ ನಲ್ಲಿ ವಾರ್ಷಿಕ 25 ಸಾವಿರ ಕೋಟ ರೂ. ಮೀಸಲಿಡಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಶಿಕ್ಷಕರು ಸೇರಿದಂತೆ ಸರ್ಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಿ ಅದಕ್ಕೆ ಅಗತ್ಯ ಅನುದಾನ ಮೀಸಲಿಡಬೇಕು. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ವಾರ್ಷಿಕ 10 ಸಾವಿರ ಕೋಟಿ ರೂ. ಮೀಸಲಿಡಬೇಕು ಎಂದು ಮನವಿ ಮಾಡಿದ್ದಾರೆ.

ಕಲ್ಯಾಣ ಕರ್ನಾಟಕ ಮಾದರಿಯಲ್ಲಿ ಕಿತ್ತೂರು ಕರ್ನಾಟಕ ಅಭಿವೃದ್ಧಿ ಮಂಡಳಿ ಸ್ಥಾಪನೆ ಮಾಡಬೇಕು. ತುಂಗಭದ್ರಾ ಜಲಾಶಯಕ್ಕೆ ಪರ್ಯಾಯವಾಗಿ ಕೊಪ್ಪಳ ಜಿಲ್ಲೆಯ ನವಲಿ ಬಳಿ ಸಮಾನಾಂತರ ಜಲಾಶಯ ನಿರ್ಮಾಣ ಮಾಡಲು ಆಂಧ್ರ ಹಾಗೂ ತೆಲಂಗಾಣ ರಾಜ್ಯಗಳೊಂದಿಗೆ ಮಾತುಕತೆ ನಡೆಸಿ, ಯೋಜನೆ ಆರಂಭಿಸಲು ಅಗತ್ಯ ಅನುದಾನ ಮೀಸಲಿಡಬೇಕು. ಮಹಾದಾಯಿ ಯೋಜನೆ ಜಾರಿಗೆ ಕೇಂದ್ರ ಸರ್ಕಾರದಿಂದ ಪರಿಸರ ಇಲಾಖೆ ಅನುಮತಿ ಪಡೆದು ಯೋಜನೆ ಕಾರ್ಯಾರಂಭ ಮಾಡಲು ಘೋಷಿಸಿ ಅನುದಾನ ಮೀಸಲಿಡಬೇಕು. ವರದಾ ಬೆಡ್ತಿ ನದಿ ಜೋಡಣೆ ಮಾಡುವ ಕುರಿತು ಘೋಷಣೆ ಮಾಡಿ ಯೋಜನೆಯ ಕಾರ್ಯ ಸಾಧ್ಯತೆ ತಿಳಿಯಲು ಅಗತ್ಯ ಅನುದಾನ ಮೀಸಲಿಡಬೇಕು. ಹುಬ್ಬಳ್ಳಿ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವಾಗಿ ಮೇಲ್ದರ್ಜೆಗೇರಿಸಲು ಅಗತ್ಯ ಹಣ ಬಜೆಟ್ ನಲ್ಲಿ ಘೋಷಿಸಬೇಕು. ಉತ್ತರ ಕನ್ನಡ ಜಿಲ್ಲೆಯ ಪ್ರಮುಖ ಧಾರ್ಮಿಕ ಕೇಂದ್ರ ಚನ್ನಬಸವಣ್ಣನವರ ಐಕ್ಯ ಸ್ಥಳ ಉಳವಿ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಅಲ್ಲದೇ ಬೆಂಗಳೂರಿನಲ್ಲಿರುವ ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆಗೆ ಹಿಂದಿನ ಸರ್ಕಾರ ಬೆಂಗಳೂರು ಉತ್ತರ ತಾಲೂಕು ದಾಸನಪುರ ಹೋಬಳಿ ಕಮ್ಮಸಂದ್ರ ಗ್ರಾಮದಲ್ಲಿ 3 ಎಕರೆ 24 ಗುಂಟೆ ವಿಸ್ತೀರ್ಣದ ಜಮೀನು ಮಂಜೂರು ಮಾಡಿದೆ. ಇಲ್ಲಿ ಅಲ್ಲಿ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು, ಉತ್ತರ ಕರ್ನಾಟಕ ಭಾಗದಿಂದ ಉದ್ಯೋಗ ಹಾಗೂ ಶಿಕ್ಷಣ ಹಾಗೂ ಇನ್ನಿತರ ಕೆಲಸಗಳಿಗೆ ಬೆಂಗಳೂರಿಗೆ ಆಗಮಿಸುವವರಿಗೆ ವಸತಿ ನಿಲಯ ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಲು ಯೋಜಿಸಲಾಗಿದೆ. ಅದಕ್ಕಾಗಿ ಬಜೆಟ್ ನಲ್ಲಿ 10 ಕೋಟಿ ರೂ. ಮಂಜೂರು ಮಾಡುವಂತೆ ಮನವಿ ಮಾಡಿದ್ದಾರೆ.

# ರಾಜಣ್ಣ ಮಾರ್ಗದರ್ಶನದಲ್ಲಿಯೇ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಚುನಾವಣೆ

ಬೆಂಗಳೂರು: "ಸಚಿವ ಕೆ.ಎನ್.ರಾಜಣ್ಣ ಅವರು ನಮ್ಮ ಪಕ್ಷದ ಹಿರಿಯ ನಾಯಕರು. ಅವರ ಮಾರ್ಗದರ್ಶನದಲ್ಲಿಯೇ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಚುನಾವಣೆ ನಡೆಸಲಾಗುವುದು. ಅಪೆಕ್ಸ್ ಬ್ಯಾಂಕ್ ಉಳಿಸುವುದು ನಮ್ಮ ಉದ್ದೇಶ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಚುನಾವಣೆ ಸಂಬಂಧ ವಿಧಾನ ಸೌಧದಲ್ಲಿ ಮಂಗಳವಾರ ಸಂಜೆ ಕೆಲವು ಮಂತ್ರಿಗಳು ಹಾಗೂ ಶಾಸಕರ ಸಭೆ ನಂತರ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಉತ್ತರಿಸಿದರು.

ರಾಜಣ್ಣ ಅವರು ವಿಧಾನಸಭೆ ಕಲಾಪದಲ್ಲಿ ಭಾಗವಹಿಸಿದ್ದು, ಸಭೆಗೆ ಗೈರು ಹಾಜರಾಗಿದ್ದರಲ್ಲಾ ಎಂಬ ಪ್ರಶ್ನೆಗೆ ಉತ್ತರಿಸಿದ ಶಿವಕುಮಾರ್ ಅವರು, "ಕೆ.ಎನ್.ರಾಜಣ್ಣ ಅವರಿಗೆ ಅನಾರೋಗ್ಯದ ಕಾರಣಕ್ಕೆ ಸಭೆಗೆ ಬರಲು ಆಗಲಿಲ್ಲ. ವಿಧಾನಸಭೆಯಲ್ಲಿ ಅವರು ಇದ್ದರು ಎಂದು ಕೇಳಲ್ಪಟ್ಟೆ. ನಮಗೆಲ್ಲಾ ವಯಸ್ಸಾಗಿದೆ, ನನಗೂ ಕತ್ತು ನೋವು ಬಂದಿದೆ. ಇದೆಲ್ಲಾ ಈ ವಯಸ್ಸಿನಲ್ಲಿ ಸರ್ವೇ ಸಾಮಾನ್ಯ." ಎಂದರು.

ಮುಖ್ಯಮಂತ್ರಿಗಳು, ನಾನು ಹಾಗೂ ಕೆಲವು ಸಚಿವರು ಸೇರಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಚುನಾವಣೆ ಬಗ್ಗೆ ಚರ್ಚೆ ಮಾಡಿದ್ದೇವೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಅಧ್ಯಕ್ಷ ಸ್ಥಾನಕ್ಕೆ ನಿಲ್ಲಿಸಬೇಕು ಎಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ತೀರ್ಮಾನ ಮಾಡಲಾಗಿದೆ" ಎಂದರು.



# ಮೂವರು ಮಕ್ಕಳೊಂದಿಗೆ ತಾಯಿ ಆತ್ಮಹತ್ಯೆ

**ಚಿಕ್ಕೋಡಿ:** ತಾಯಿಯೊಬ್ಬಳು ತನ್ನ ಮೂವರು ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿಂಚಲಿ ಪಟ್ಟಣದಲ್ಲಿ ಬುಧವಾರ ಬೆಳಗಿನ ಜಾವ ನಡೆದಿದೆ.

ಮೃತರನ್ನು ಶಾರದಾ ಥಾಲೆ (38) ಹಾಗೂ 8, 10 ಮತ್ತು, 14 ವರ್ಷ ವಯಸ್ಸಿನ ಮಕ್ಕಳು ಎಂದು ಗುರುತಿಸಲಾಗಿದೆ.

ದಿನನಿತ್ಯ ಗಂಡ ಗಲಾಟೆ ಮಾಡುತ್ತಿದ್ದ ಕಾರಣಕ್ಕೆ ಮಹಿಳೆ ತನ್ನ ಮೂವರು ಮಕ್ಕಳ ಜೊತೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ತಿಳಿದು ಬಂದಿದೆ. ಗಂಡ ಅಶೋಕ್ ಥಾಲೆಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಕುಡಚಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಬೆಳಗಾವಿ ಎಸ್‌ಪಿ ಭೀಮಾಶಂಕರ್ ಗುಳೇದ ಈಟಿವಿ ಭಾರತ ಜೊತೆ ದೂರವಾಣಿ ಮುಖಾಂತರ ಮಾತನಾಡಿ, "ಪ್ರಕರಣ ನಡೆದ ಸ್ಥಳಕ್ಕೆ ನಮ್ಮ ಸ್ಥಳೀಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ನನಗೆ ಬೆಳಗಾವಿಯಲ್ಲಿ ಮೀಟಿಂಗ್ ಇರುವುದರಿಂದ ಡಿವೈಎಸ್ಪಿ ಅವರಿಗೆ ಭೇಟಿ ನೀಡುವಂತೆ ತಿಳಿಸಿದ್ದೇನೆ. ಸದ್ಯಕ್ಕೆ ಯಾವ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದು ತಿಳಿದು ಬಂದಿಲ್ಲ. ತನಿಖೆ ನಂತರವಷ್ಟೇ ಸತ್ಯಾಸತ್ಯತೆ ಗೊತ್ತಾಗಲಿದೆ" ಎಂದು ತಿಳಿಸಿದರು.

# ಕುಂಭಮೇಳದ ಆಯೋಜನೆ: ಡಿಕೆಶಿ ಹೊಗಳಿದ್ದನ್ನು ಪ್ರಸ್ತಾಪಿಸಿದ ಯೋಗಿ

ಲಕ್ನೋ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಹಾಕುಂಭ ಆಯೋಜನೆಯನ್ನು ಪ್ರಶಂಸಿರುವುದನ್ನು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಲ್ಲಿನ ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ್ದಾರೆ.

ಮಹಾಕುಂಭ ಆಯೋಜನೆಯ ಕುರಿತು ಸಮಾಜವಾದಿ ಪಕ್ಷದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿ ಮಾತನಾಡಿದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ಕರ್ನಾಟಕದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆಯನ್ನು ಉಲ್ಲೇಖಿಸಿ ಅಖಿಲೇಶ್ ಯಾದವ್ ಅವರನ್ನು ತೀವ್ರ ತರಾಟೆಗೆ ತಗೆದುಕೊಂಡಿದ್ದಾರೆ. ಡಿ.ಕೆ. ಶಿವಕುಮಾರ್ ಅವರಂತಹ ಅನೇಕ ನಾಯಕರು ಮಹಾಕುಂಭ ಮೇಳದಲ್ಲಿ ಭಾಗವಹಿಸಿ ಪುಣ್ಯ ಸ್ನಾನ ಮಾಡಿ, ಅದರ ಆಯೋಜನೆಯ ಕುರಿತು ಶ್ಲಾಘಿಸಿ ಮಾತನಾಡಿದ್ದಾರೆ. ಆದರೆ, ನೀವೂ ಅಖಿಲೇಶ್ ಯಾದವ್ ಸಹ ಅಲ್ಲಿಗೆ ಹೋಗಿದ್ದೀರಿ. ಅದು ನಿಮ್ಮ ನಂಬಿಕೆ. ಆದರೆ ನಿಮ್ಮ ಚಿಕ್ಕಪ್ಪ ಹೋಗಲು ಸಾಧ್ಯವಾಗಲಿಲ್ಲ.

ಆದ್ದರಿಂದ ನೀವು ನಿಮ್ಮ ಚಿಕ್ಕಪ್ಪ ಶಿವಪಾಲ್ ಸಿಂಗ್ ಯಾದವ್ ಅವರನ್ನು ಮೆಚ್ಚಿಸಲು ಈ ರೀತಿಯ ಹೇಳಿಕೆ ನೀಡಿದ್ದೀರಾ ಎಂದು ಕಿಚಾಯಿಸಿದ್ದಾರೆ. 45 ದಿನದಲ್ಲಿ 66.30 ಕೋಟಿ ಭಕ್ತರು ತ್ರಿವೇಣಿ ಸಂಗಮದಲ್ಲಿ ಮಿಂದೆದಿದ್ದಾರೆ. ಮಹಾಕುಂಭಮೇಳದಲ್ಲಿ ಮೂರೂವರೆ ಲಕ್ಷ ಕೋಟಿ ರೂಪಾಯಿಯ ವಹಿವಾಟು ನಡೆದಿದೆ. 130 ದೋಣಿಗಳ ನಾವಿಕರು 30 ಕೋಟಿ ರೂಪಾಯಿ ಆದಾಯ ಗಳಿಸಿದ್ದಾರೆ. ಕುಂಭಮೇಳದ ಅಚ್ಚುಕಟ್ಟು ವ್ಯವಸ್ಥೆ ಬಗ್ಗೆ ಕರ್ನಾಟಕ ಡಿಸಿಎಂ ಡಿಕೆ ಶಿವಕುಮಾರ್ ನನಗೆ ಕರೆ ಮಾಡಿ ಶ್ಲಾಘಿಸಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

# ಕಾಡ್ಗಿಚ್ಚಿಗೆ ಚಿರತೆ ಬಲಿ

ತುಮಕೂರು: ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಬಿದ್ದಿದ್ದ ಚಿರತೆಯೊಂದು ಕಾಡ್ಗಿಚ್ಚಿಗೆ ಬಲಿಯಾಗಿರುವ ಘಟನೆ ಜಿಲ್ಲೆಯ ತಿಪಟೂರು ತಾಲೂಕಿನ ಕಿಬ್ಬನಹಳ್ಳಿ ಹೋಬಳಿ ಮದ್ಲೇಹಳ್ಳಿ ಗ್ರಾಮದಲ್ಲಿ ನಡೆದಿದೆ.

ತಿಪಟೂರು ತಾಲೂಕಿನ ಕಿಬ್ಬನಹಳ್ಳಿ ಹೋಬಳಿ ಮದ್ಲೇಹಳ್ಳಿ ಸುತ್ತಮುತ್ತ ಚಿರತೆ ಹಾವಳಿ ಹೆಚ್ಚಾದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯಿಂದ ಬೋನ್ ಇರಿಸಲಾಗಿತ್ತು. ಮದ್ಲೇಹಳ್ಳಿ ಗ್ರಾಮದ ಸರ್ವೆ ನಂಬರ್ 10ರಲ್ಲಿ ನಾರಾಯಣಪ್ಪ ಎಂಬವರ ಜಮೀನಿನಲ್ಲಿ ಚಿರತೆ ಸೆರೆ ಹಿಡಿಯಲು ಅಧಿಕಾರಿಗಳು ಬೋನ್ ಇರಿಸಿದ್ದರು. ಅರಣ್ಯ ಇಲಾಖೆ ಇಟ್ಟಿದ್ದ ಬೋನಿನಲ್ಲಿ ಚಿರತೆ ಸೆರೆಯಾಗಿದ್ದು, ಆದರೆ ಈ ಪ್ರದೇಶದಲ್ಲಿ ಆಕಸ್ಮಿಕ ಅಗ್ನಿ ಅವಘಡ ಉಂಟಾಗಿದೆ. ಈ ವೇಳೆ ಬೋನಿಗೆ ಬಿದ್ದ ಚಿರತೆ ಹೊರಬರಲಾಗದೆ ಬೆಂಕಿಯಿಂದ ಉಸಿರುಗಟ್ಟಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ.

ಚಿರತೆಯು ಬೋನಿಗೆ ಬಿದ್ದಿರುವ ಬಗ್ಗೆ ಇಲಾಖೆಯ ಸಿಬ್ಬಂದಿಗೆ ಮಾಹಿತಿ ಲಭ್ಯವಾಗಿರಲಿಲ್ಲ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕೆ.ಬಿ.ಕ್ರಾಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಿರತೆಯ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

# ಸಿದ್ದರಾಮಯ್ಯ ವಿರುದ್ಧ ಸಿಬಿಐ ತನಿಖೆಗೆ ಕೋರಿ ವಿಭಾಗೀಯ ಪೀಠಕ್ಕೆ ಮೇಲ್ಮನವಿ




**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ(ಮುಡಾ) ಅಕ್ರಮವಾಗಿ ನಿವೇಶನ ಪಡೆದ ಆರೋಪ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಪ್ರಕರಣದ ತನಿಖೆಯನ್ನು ಕೇಂದ್ರೀಯ ತನಿಖಾ ದಳಕ್ಕೆ (ಸಿಬಿಐ) ವಹಿಸಲು ನಿರಾಕರಿಸಿರುವ ಹೈಕೋರ್ಟ್‌ನ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ, ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ.

ಪ್ರಕರಣದ ದೂರುದಾರ ಮೈಸೂರಿನ ಸ್ನೇಹಮಯಿ ಕೃಷ್ಣ ಈ ಮೇಲ್ಮನವಿ ಅರ್ಜಿ ಸಲ್ಲಿಸಿದ್ದು, ಇನ್ನಷ್ಟೇ ವಿಚಾರಣೆಗೆ ಬರಬೇಕಾಗಿದೆ. ವಿಚಾರಣಾಧೀನ ನ್ಯಾಯಾಲಯಕ್ಕೆ ಸಿಆರ್‌ಪಿಸಿ ಸೆಕ್ಷನ್ 156(3) ಅಡಿ ಪ್ರಕರಣವನ್ನು ಸಿಬಿಐಗೆ ವಹಿಸುವ ಅಧಿಕಾರವಿಲ್ಲ. ಈ ಅಧಿಕಾರ ಹೈಕೋರ್ಟ್‌ಗೆ ಸಂವಿಧಾನದ 22ನೇ ವಿಧಿ ಮತ್ತು ಸುಪ್ರೀಂ ಕೋರ್ಟ್‌ಗೆ ಸಂವಿಧಾನದ 32 ಅಥವಾ 142ನೇ ವಿಧಿಯಡಿ ಮಾತ್ರ ಇದೆ ಎಂಬುದನ್ನು ಅರ್ಥೈಸಿಕೊಳ್ಳುವಲ್ಲಿ ಹೈಕೋರ್ಟ್ ವಿಫಲವಾಗಿದೆ. ಅಲ್ಲದೇ, ಪ್ರಕರಣದ ತನಿಖೆಯನ್ನು ಸಿಬಿಐ ಅಥವಾ ಬೇರಾವುದಾದರೂ ಸ್ವತಂತ್ರ ತನಿಖಾ ಸಂಸ್ಥೆ ನಡೆಸಬೇಕು ಎಂದು ಆರಂಭದಿಂದಲೂ ಕೋರುತ್ತಿರುವುದಾಗಿ ಸ್ನೇಹಮಯಿ ಕೃಷ್ಣ ವಿವರಿಸಿದ್ದಾರೆ.

ಸಿಬಿಐ ತನಿಖೆಗೆ ವಹಿಸುವಂತೆ ಕೋರಿ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ಫೆಬ್ರವರಿ 7ರಂದು ವಜಾ ಮಾಡಿತ್ತು. ಕಳೆದ ತಿಂಗಳು ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರು, ವಿಚಾರಣಾಧೀನ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಇದನ್ನು ಪ್ರಶ್ನಿಸಿ ಪ್ರತಿಭಟನಾ ಅರ್ಜಿ ಸಲ್ಲಿಸುವುದಾಗಿ ಸ್ನೇಹಮಯಿ ಕೃಷ್ಣ ವಿಚಾರಣಾ ನ್ಯಾಯಾಲಯದಲ್ಲಿ ವಾದಿಸಿದ್ದರು.

## ಮೊದಲ ಪುಟದಿಂದ

### ಸಾವಿರ ಕೋಟಿ ಸಾಲ!

ನೀಡಿದ್ದಾಗಿ ಆಕ್ಷೇಪಿಸಿದರು. ರಾಜ್ಯದ ಎಸ್‌ಸಿ, ಎಸ್‌ಟಿ ಸಮುದಾಯಗಳ ಹಣವನ್ನು ದುರುಪಯೋಗ ಮಾಡುವ ದುಷ್ಟ ಕಾಂಗ್ರೆಸ್ ಸರಕಾರದ ವಿರುದ್ಧ 14 ತಂಡಗಳನ್ನು ರಚಿಸಿ ಜನಾಂದೋಲನ ರೂಪಿಸಲಾಗಿದೆ. ಚುನಾವಣೆ ಪೂರ್ವದಲ್ಲಿ ಎಸ್‌ಸಿ, ಎಸ್‌ಟಿ ಸಮುದಾಯ ಸೇರಿ ಎಲ್ಲರಿಗೂ ನ್ಯಾಯ ಕೊಡುವುದಾಗಿ ಹಾಗೂ ಅಭಿವೃದ್ಧಿ ಮಾಡುವುದಾಗಿ ಕಾಂಗ್ರೆಸ್ ಹೇಳಿ ಅಧಿಕಾರಕ್ಕೆ ಬಂದಿದೆ ಎಂದು ವಿವರಿಸಿದರು.

ಕಾರ್ಯಕರ್ತರಿಗೆ ಶಕ್ತಿ ತುಂಬುವ ಚುನಾವಣೆ

ಬಿಬಿಎಂಪಿಯಲ್ಲಿ ಬಿಜೆಪಿ ಸ್ವಂತ ಶಕ್ತಿಯಲ್ಲಿ ಅಧಿಕಾರ ಪಡೆಯುವಂತಾಗಬೇಕಿದೆ. ಮುಂದಿನ ಬಿಬಿಎಂಪಿ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯು ಕಾರ್ಯಕರ್ತರಿಗೆ ಶಕ್ತಿ ತುಂಬಲಿದೆ. ನಾವೆಲ್ಲರೂ ಒಗ್ಗೂಡಿ ಕಾರ್ಯಕರ್ತರ ಚುನಾವಣೆ ಎದುರಿಸಿ ಗೆಲ್ಲಿಸಲಿದ್ದೇವೆ ಎಂದು ವಿಶ್ವಾಸದಿಂದ ತಿಳಿಸಿದರು. **ತಲೆ ಎತ್ತಿ ತಿರುಗಲಾರದ ಪರಿಸ್ಥಿತಿ: ಛಲವಾದಿ ನಾರಾಯಣಸ್ವಾಮಿ:** ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ದಲಿತರ ಹಣ ದುರ್ಬಳಕೆ ವಿರುದ್ಧ ಬಿಜೆಪಿ ರಾಜ್ಯಾದ್ಯಂತ ಜನಾಂದೋಲನ ರೂಪಿಸಿದೆ. ಬಿಜೆಪಿಯ ದಲಿತಪರ ಚಿಂತನೆ, ಅವರ ಪರವಾದ ಯೋಜನೆಗಳೇ ಕಾರಣ ಎಂದು ತಿಳಿಸಿದರು. ನಮ್ಮ ಪಕ್ಷದ ಅಧ್ಯಕ್ಷ ವಿಜಯೇಂದ್ರ ಅವರು ಈ ವಿಷಯವನ್ನು ತೀಕ್ಷ್ಣವಾಗಿ ಪರಿಗಣಿಸಿದ್ದಾರೆ. ಇದರಿಂದ ಕಾಂಗ್ರೆಸ್ ಪಕ್ಷ ತಲೆ ಎತ್ತಿ ತಿರುಗಲಾರದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿವರಿಸಿದರು.

ಕೌನ್ಸಿಲರ್ ಚುನಾವಣೆ ಹತ್ತಿರದಲ್ಲಿರುವಂತೆ ಕಾಣುತ್ತಿದೆ. ಕೋರ್ಟಿನ ಆದೇಶದ ಕಾರಣ ಚುನಾವಣೆ ನಡೆಯುವ ಸಾಧ್ಯತೆ ಇದೆ. ನಾವು ಜನರನ್ನು ಭೇಟಿ ಮಾಡಿ ಮನೆಮನೆಗೆ ಹೋಗಿ ಅವರನ್ನು ಪ್ರೇರೇಪಿಸಬೇಕು. ಬಿಜೆಪಿ ಕಾರ್ಯಕರ್ತರನ್ನು ನಾವು ಉತ್ತೇಜಿಸಬೇಕು ಎಂದು ಮನವಿ ಮಾಡಿದರು. ಈ ಹೋರಾಟಕ್ಕೆ ಜಯ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾನಪ್ಪ ವಜ್ಜಲ್, ಉದಯ್ ಗರುಡಾಚಾರ್, ರಘು, ಸಿಮೆಂಟ್ ಮಂಜು, ಭಾಗೀರಥಿ ಮರುಳಸಿದ್ದಯ್ಯ, ಮಾಜಿ ಶಾಸಕ ಹಾಲಪ್ಪ, ಪ್ರಕೋಷ್ಠಗಳ ಸಂಯೋಜಕ ದತ್ತಾತ್ರಿ, ಮುಖಂಡರಾದ ತಮ್ಮೇಶ್ ಗೌಡ, ಶರಣು ತಳ್ಳಿಕೇರಿ, ಉಮೇಶ್ ಶೆಟ್ಟಿ, ರವೀಂದ್ರ, ನಗರದ 3 ಜಿಲ್ಲೆಗಳ ಅಧ್ಯಕ್ಷರಾದ ಹರೀಶ್, ರಾಮಮೂರ್ತಿ, ಸಪ್ತಗಿರಿ ಗೌಡ ಹಾಗೂ ಪಕ್ಷದ ಪ್ರಮುಖರು, ಕಾರ್ಯಕರ್ತರು ಭಾಗವಹಿಸಿದ್ದರು.

### ನೋಟಿಸ್ ಜಾರಿ..!

ಅಂದಾಜು 658 ಕೋಟಿ ರೂ.ಗಳು ಬಾಕಿ ಉಳಿದಿವೆ ಎಂದು ಅಂದಾಜಿಸಲಾಗಿದೆ.

ನಾಗರಿಕ ಸಂಸ್ಥೆ ತನ್ನ ಆದಾಯವನ್ನು ಹೆಚ್ಚಿಸಲು ಹೆಣಗಾಡುತ್ತಿರುವಾಗ, ಎಲ್ಲಾ ತೆರಿಗೆ ಸುಸ್ತಿದಾರರ ವಿರುದ್ಧ ಅವರ ಸ್ಥಾನಮಾನವನ್ನು ಲೆಕ್ಕಿಸದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ.

ಪಾವತಿ ಮಾಡದಿದ್ದರೆ ಬಿಬಿಎಂಪಿ ಎಷ್ಟು ದೂರ ಹೋಗುತ್ತದೆ ಎಂಬ ಊಹಾಪೋಹಗಳು ಹೆಚ್ಚುತ್ತಿವೆ. ಅಧಿಕಾರಿಗಳು ಬಲವಾದ ಕ್ರಮಗಳನ್ನು ಜರುಗಿಸುವ ಎಚ್ಚರಿಕೆ ನೀಡಿದೆ. ಆದರೆ ಸರ್ಕಾರಿ ಆಸ್ತಿಗಳನ್ನು ವಶಪಡಿಸಿಕೊಳ್ಳುವ ನಿಟ್ಟಿನಲ್ಲಿ ಅದು ಎಷ್ಟು ಯಶಸ್ವಿಯಾಗುತ್ತದೆ ಎಂಬ ಯಕ್ಷ ಪ್ರಶ್ನೆಯಾಗಿದೆ. ನಾಗರಿಕ ಸಂಸ್ಥೆಯು ಒನ್–ಟೈಮ್ ಸೆಟಲ್ಮೆಂಟ್ (ಒಟಿಎಸ್) ಯೋಜನೆಯನ್ನು ಪರಿಚಯಿಸಿತ್ತು, ಇದು ಬಾಕಿಗಳ ಮೇಲಿನ ಚಕ್ರಬಡ್ಡಿಯನ್ನು ಮನ್ನಾ ಮಾಡಿತು ಮತ್ತು ಪಾವತಿಗಳನ್ನು ಉತ್ತೇಜಿಸಲು ದಂಡವನ್ನು ಶೇಕಡಾ 50 ರಷ್ಟು ಕಡಿಮೆ ಮಾಡಿತು ಮತ್ತು ಸರ್ಕಾರಿ ಕಚೇರಿಗಳಿಗೂ ಮುಕ್ತವಾಗಿತ್ತು. ಯೋಜನೆ ಮುಗಿಯುವ ಮೊದಲು ಯಾರೂ ಅದರ ಪ್ರಯೋಜನಗಳನ್ನು ಪಡೆಯಲಿಲ್ಲ.

### ಇತರರಿಗೆ ಅನ್ಯಾಯ

ವಿಪಕ್ಷಗಳು ಏನೇ ಹೇಳಿದರೂ ಇವರಿಗೆ ನಾಟುವುದಿಲ್ಲ; ಈ ನಿರ್ಧಾರವನ್ನು ನಾವು ಸದನದಲ್ಲಿ ಪ್ರಶ್ನಿಸುತ್ತೇವೆ ಎಂದರು.

ಇವರ ಯೋಗ್ಯತೆಗೆ ಕಳೆದ 20 ತಿಂಗಳಿನಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ ಕೊಟ್ಟಿಲ್ಲ; ಇವರ ಯೋಗ್ಯತೆಗೆ ಯಾವುದೇ ಶಾಸಕರ ವಿಧಾನಸಭಾ ಕ್ಷೇತ್ರಕ್ಕೆ ಅಭಿವೃದ್ಧಿಗೆ ಹಣ ಕೊಡಲು ಸಾಧ್ಯವಾಗಿಲ್ಲ. ಪರಿಶಿಷ್ಟ ಜಾತಿ, ಪಂಗಡಗಳಿಗೆ ಸರಕಾರಿ ಗುತ್ತಿಗೆಯಲ್ಲಿ ಮೀಸಲಾತಿ ಕೊಟ್ಟಿದ್ದಾರೆ. ಆದರೆ ಇವತ್ತು ಎಲ್ಲಿ ಕೆಲಸ ನಡೆಯುತ್ತಿದೆ ಎಂದು ಪ್ರಶ್ನಿಸಿದರು.

ಜಾತಿ ಹೆಸರು ಹೇಳಿ ರಾಜಕಾರಣ ಮಾಡುತ್ತಿರುವವರು, ಮಾಡಿದವರು ಕೇವಲ ಶಾಸಕರಾಗಿ, ಮಾಜಿ ಸಚಿವರಾಗಿ ಉಳಿದುಕೊಂಡಿದ್ದಾರೆ. ಎಲ್ಲ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಎಲ್ಲ ಸಮಾಜಗಳ ಧ್ವನಿಯಾಗಿ ಹೋರಾಟ ಮಾಡಿದ ಯಡಿಯೂರಪ್ಪ ಅವರಂಥ ನಾಯಕರು 4 ಬಾರಿ ಮುಖ್ಯಮಂತ್ರಿಯಾಗಿ ಮಾಜಿ ಮುಖ್ಯಮಂತ್ರಿಯಾಗಿದ್ದಾರೆ ಎಂದು ಪ್ರಶ್ನೆಗೆ ಉತ್ತರಿಸಿದರು.

ಕೇಂದ್ರದ ಗೃಹ ಸಚಿವ, ಉಕ್ಕಿನ ಮನುಷ್ಯ ಎಂದೇ ಖ್ಯಾತರಾದ ಮಾನ್ಯ ಅಮಿತ್ ಶಾ ಜೀ ಅವರು ನಾಡಿದ್ದು 7ರಂದು ತಮಿಳುನಾಡಿನಿಂದ ಕರ್ನಾಟಕಕ್ಕೆ ಬರಲಿದ್ದಾರೆ. ಬೆಂಗಳೂರಿನಲ್ಲಿ ಅವರು ವಿಶ್ವತೀರ್ಥ ಮಹಾಸ್ವಾಮೀಜಿ ಅವರ ಆಸ್ಪತ್ರೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ; ಯಾವುದೇ ರಾಜಕೀಯ ಸಭೆಗಳು ಇಲ್ಲ ಎಂದು ಅವರು ಇನ್ನೊಂದು ಪ್ರಶ್ನೆಗೆ ಉತ್ತರ ನೀಡಿದರು.

ರಾಜ್ಯದಲ್ಲಿ ಬೆಲೆ ಏರಿಕೆ ಮಾಡುವ ಸರ್ಕಾರವಿದೆ. ಅದಕ್ಕೆ ಎಲ್ಲಾ ವಸ್ತುಗಳ ಬೆಲೆ ಏರಿಕೆ ಆಗುತ್ತಿದೆ. ಹಾಲು ಸ್ಟ್ಯಾಂಪ್ ಡ್ಯೂಟಿ ವಿದ್ಯುತ್ ಮೀಟರ್ ಬೆಲೆ ಏರಿಕೆ ಮಾಡಿದೆ. ಇದರಿಂದ ಜನಸಾಮನ್ಯಾರಿಗೆ ಹೊರೆ ಆಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಸರ್ಕಾರ ಕಳೆದ 20 ತಿಂಗಳಿನಿಂದ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿಲ್ಲ. ಕಾಂಗ್ರೆಸ್ ನವರಿಗೆ ಶಾಸಕರಿಗೆ ಅನುದಾನ ಕೊಡಲು ಸಾಧ್ಯವಾಗಿಲ್ಲ. ಎಸ್ ಸಿ, ಎಸ್ ಟಿಯವರಿಗೆ ಟೆಂಡರ್ ಗೆ ಮೀಸಲಾತಿ ಕೊಟ್ಟಿದ್ದಾರೆ. ಆದರೆ ಎಲ್ಲಿ ಕೆಲಸದ ಟೆಂಡರ್ ಕರೆದಿದ್ದಾರೆ ಈ ನಡುವೆ ಮುಸ್ಲಿಮರಿಗೆ 4% ಮೀಸಲಾತಿ ಕೊಡಲು ಮುಂದಾಗಿದ್ದಾರೆ ಎಂದು ಹರಿಹಾಯ್ದರು.

### ಸ್ಟೀವ್ ಸ್ಮಿತ್ ವಿದಾಯ

ವಿಜೇತ ತಂಡಗಳ ಸದಸ್ಯರಾಗಿದ್ದರು. ಪ್ಯಾಟ್ ಕಮಿನ್ಸ್ ಗಾಯಗೊಂಡಿದ್ದ ಹಿನ್ನೆಲೆಯಲ್ಲಿ 2025ರ ಚಾಂಪಿಯನ್ಸ್ ಟ್ರೋಫಿಗೆ ಸ್ಟೀವ್ ಸ್ಮಿತ್ ಅವರನ್ನ ಆಸ್ಟ್ರೇಲಿಯಾ ತಂಡದ ನಾಯಕರನ್ನಾಗಿ ಮಾಡಲಾಗಿತ್ತು.

### ಡಿಕ್ಕಿ: ಮೂವರ ಸಾವು

ಅಪಘಾತದಿಂದಾಗಿ ಎರಡೂ ವಾಹನಗಳೂ ಜಖಂಗೊಂಡಿದ್ದು, ರಸ್ತೆ ಯಲ್ಲಿ ಕಲ್ಲಂಗಡಿ ಹಣ್ಣು ಬಿದ್ದು ಹರಡಿಕೊಂಡಿದೆ.

ಮತ್ತೊಂದು ಲಾರಿ ಕೂಡ ಸ್ವಲ್ಪ ಪ್ರಮಾಣದಲ್ಲಿ ಹಾನಿಗೊಂಡಿದ್ದು, ಅದರಲ್ಲಿದ್ದ ಚಾಲಕ ಕ್ಲೀನರ್‌ಗೆ ಸಣ್ಣಪುಟ್ಟ ಗಾಯಗಳಾಗಿವೆ. ಸುದ್ದಿ ತಿಳಿದು ಸ್ಥಳಕ್ಕೆ ಚಿತ್ರದುರ್ಗ ಡಿವೈಎಸ್ಪಿ ದಿನಕರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚಿತ್ರದುರ್ಗ ಗ್ರಾಮಾಂತರ ಠಾಣೆಯ ಇನ್ಸ್‌ಪೆಕ್ಟರ್ ಸುದ್ದಿ ತಿಳಿ ಯುತ್ತಿದ್ದಂತೆ ಸಿಬ್ಬಂದಿಗಳೊಂದಿಗೆ ದಾವಿಸಿ ಪರಿಹಾರ ಕಾರ್ಯಗಳಲ್ಲಿ ತೊಡಗಿದ್ದಾರೆ.

ಪ್ರಾಥಮಿಕ ತನಿಖೆ ಪ್ರಕಾರ ಲಾರಿಯ ಟೈಯರ್ ಪಂಚರ್ ಆದ ಕಾರಣ ಚಾಲಕ ಹಾಗೂ ಕ್ಲೀನರ್ ಚಕ್ರ ಬದಲಿಸುತ್ತಿದ್ದಾಗ ಈ ಘಟನೆ ನಡೆದಿದೆ. ಯಾವುದೇ ಸೂಚನೆ ನೀಡದ ಕಾರಣ ಹಿಂದಿನಿಂದ ಬರುತ್ತಿದ್ದ ವಾಹನಗಳಿಗೆ ಇದು ಕಾಣುತ್ತಿರಲಿಲ್ಲ ಎಂದು ಹೇಳಲಾಗಿದೆ. ಘಟನೆಯಿಂದಾಗಿ ಕೆಲಕಾಲ ಈ ಮಾರ್ಗದಲ್ಲಿ ವಾಹನಗಳ ಸಂಚಾರಕ್ಕೂ ಅಡ್ಡಿಯಾಗಿತ್ತು. ಕ್ರೈನ್ ಬಳಸಿ ವಾಹನಗಳನ್ನು ರಸ್ತೆ ಬದಿಗೆ ಸರಿಸಿ ವಾಹನ ಓಡಾಟಕ್ಕೆ ಅವಕಾಶ ಮಾಡಿಕೊಡಲಾಗಿತ್ತು.

### ಪ್ರತಿ ಸುಂಕ ಜಾರಿ: ಟ್ರಂಪ್

ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಪ್ರವಾಸ ಕೈಗೊಂಡ ವೇಳೆಯಲ್ಲೂ ಟ್ರಂಪ್ ಈ ವಿಚಾರವನ್ನು ಸ್ಪಷ್ಟಪಡಿಸಿದ್ದರು. ವಾಷಿಂಗ್ಟನ್‌ನ ಪ್ರತಿತೆರಿಗೆಯಿಂದ ಭಾರತವೂ ಹೊರತಾಗಿರಲಿಲ್ಲ. ಸುಂಕದ ವಿಚಾರವಾಗಿ ನನ್ನೊಂದಿಗೆ ಯಾರೂ ವಾದ ಮಾಡಲು ಸಾಧ್ಯವಿಲ್ಲ" ಎಂದಿದ್ದರು.

"ನಮ್ಮ ಉತ್ಪನ್ನಗಳ ಮೇಲೆ ಚೀನಾ ದುಪ್ಪಟ್ಟು ಸಂಕು ಹಾಕುತ್ತಿದೆ. ದಕ್ಷಿಣ ಕೊರಿಯಾ ಸರಾಸರಿ ನಾಲ್ಕು ಪಟ್ಟು ಸುಂಕ ಹಾಕುತ್ತಿದೆ. ನಾವು ದಕ್ಷಿಣ ಕೊರಿಯಾಗೆ ಮಿಲಿಟರಿ ಮತ್ತು ಇತರೆ ಹಲವು ರೀತಿಯಲ್ಲಿ ಸಹಕಾರ ನೀಡುತ್ತಿದ್ದೇವೆ. ಆದರೆ ಆಗುತ್ತಿರುವುದೇನು? ಈ ವ್ಯವಸ್ಥೆ ಅಮೆರಿಕಕ್ಕೆ ನ್ಯಾಯಯುವತವಾಗಿಲ್ಲ" ಎಂದು ಹೇಳಿದ್ದಾರೆ.

"ಹೀಗಾಗಿ ಏಪ್ರಿಲ್ 2ರಿಂದ ಪ್ರತಿ ಸುಂಕ ಜಾರಿಗೆ ಬರಲಿದೆ. ಅವರು ನಮ್ಮ ಮೇಲೆ ಹೇಗೆ ಸುಂಕ ಹಾಕುತ್ತಾರೋ ಅದರಂತೆ ನಾವೂ ಹಾಕಲಿದ್ದೇವೆ. ಅವರ ತೆರಿಗೆಗೆ ಪ್ರತಿಯಾಗಿ ನಮ್ಮ ತೆರಿಗೆ ಇರುತ್ತದೆ. ಒಂದು ವೇಳೆ ಅವರು ನಮ್ಮನ್ನು ಅವರ ಮಾರುಕಟ್ಟೆಯಿಂದ ಹೊರಗಿಡಲು ಹಣಕಾಸೇತರ ಸುಂಕ ಪದ್ಧತಿ ಬಳಸಿದರೆ, ನಾವೂ ನಮ್ಮ ಮಾರುಕಟ್ಟೆಯಿಂದ ಅವರನ್ನು ಹೊರಡಗಿಡಲು ಅದೇ ವಿಧಾನವನ್ನು ಬಳಸುತ್ತೇವೆ" ಎಂದು ಟ್ರಂಪ್ ಎಚ್ಚರಿಸಿದ್ದಾರೆ.

### ಭಾಸ್ಕರ್ ನೇಮಕ

ಸೇನಾ–ಯುಬಿಟಿ ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು ಮಂಗಳವಾರ ತಿಳಿಸಿದ್ದಾರೆ.

ಈ ಕುರಿತ ಪತ್ರವನ್ನು ವಿಧಾನಸಭಾ ಸ್ಪೀಕರ್ ರಾಹುಲ್ ನಾರ್ವೇಕರ್ ಅವರಿಗೆ ಸಲ್ಲಿಸಲಾಗಿದೆ. "ಶಿವಸೇನೆ(ಯುಬಿಟಿ) ಎಲ್‌ಒಪಿ ಹುದ್ದೆಗೆ ಹಕ್ಕು ಮಂಡಿಸಿದೆ. ನಾವು ಈ ಬಗ್ಗೆ ಸ್ಪೀಕರ್‌ಗೆ ಪತ್ರ ನೀಡಿದ್ದೇವೆ. ಅವರು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪರಿಗಣಿಸಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ನಮಗೆ ವಿಶ್ವಾಸವಿದೆ" ಎಂದು ಜಾಧವ್ ಹೇಳಿದ್ದಾರೆ. ಶಿವಸೇನೆ–ಯುಬಿಟಿ ವಿಧಾನಸಭೆಯಲ್ಲಿ 20 ಶಾಸಕರನ್ನು ಹೊಂದಿದ್ದು, ನಂತರ ಕಾಂಗ್ರೆಸ್ (16) ಮತ್ತು ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ–ಶರದ್ಚಂದ್ರ ಪವಾರ್(10) ಶಾಸಕರನ್ನು ಹೊಂದಿದೆ. ಇಲ್ಲಿಯವರೆಗೆ ಕಾಂಗ್ರೆಸ್ ಅಥವಾ ಎನ್ ಸಿಪಿ–ಶರದ್ಚಂದ್ರ ಪವಾರ್ ಅಧಿಕೃತವಾಗಿ ಪ್ರತಿಪಕ್ಷ ಸ್ಥಾನಕ್ಕೆ ಹಕ್ಕು ಮಂಡಿಸಿರಲಿಲ್ಲ.

### ಹಕ್ಕಿಜ್ವರ ಆತಂಕ ಬೇಡ,

ಕೋಳಿಮೊಟ್ಟೆ ಹಾಗೂ ಮಾಂಸ ಸೇವಿಸುವಾಗ ಕೆಲವು ಎಚ್ಚರಿಕೆಯನ್ನು ಅನುಸರಿಸಬೇಕು. ಮೊಟ್ಟೆ ಮತ್ತು ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ಬೇಯಿಸಬೇಕು. ಸೋಂಕು ಪೀಡಿತ ಕೋಳಿ ಫಾರಂ, ಮೃತ ಹಕ್ಕಿ ಅಥವಾ ಕೋಳಿಗಳ ಸಮೀಪಕ್ಕೆ ಹೋಗದಂತೆ ಎಚ್ಚರಿಕೆ ವಹಿಸುವಂತೆ ಅವರು ಸಲಹೆ ಮಾಡಿದ್ದಾರೆ.

ಇತ್ತೀಚಿಗೆ ಚಿಕ್ಕಬಳ್ಳಾಪುರದಲ್ಲಿ 36 ಹಾಗೂ ಬಳ್ಳಾರಿಯಲ್ಲಿ 8 ಸಾವಿರ ಕೋಳಿಗಳು ಹಕ್ಕಿಜ್ವರದಿಂದ ಸಾವನ್ನಪ್ಪಿದ್ದವು. ಇದರ ಬೆನ್ನಲ್ಲೆ ಆರೋಗ್ಯ ಇಲಾಖೆ ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಸಲಹೆ ನೀಡಿದೆ.

### ಅಧಿಕಾರಿ ಅಮಾನತು

ಇದಕ್ಕೆ ಬಿಜೆಪಿ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಳಿಕ ಕಲಾಪವನ್ನು ಸುಮಾರು 10 ನಿಮಿಷಗಳ ಕಾಲ ಮುಂದೂಡಲಾಗಿತ್ತು. ಭೋಜನ ವಿರಾಮದ ಬಳಿಕವೂ ಪ್ರತಿಪಕ್ಷ ನಾಯಕರ ಭಾಷಣ ಪ್ರಸಾರವಾಗಿರಲಿಲ್ಲ ಎಂದು ಹೇಳಿ ಪ್ರಸಾರದ ತುಣುಕು ತೋರಿಸಲಾಯಿತು ಇದನ್ನು ಗಂಭೀರವಾಗಿ ಪರಿಗಣಿಸಿದ್ದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಈ ಬಗ್ಗೆ ತನಿಖೆ ಕೈಗೊಂಡು ಸಂಬಂಧಪಟ್ಟ ಮುಖ್ಯಸ್ಥರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದ್ದರು. ಬಳಿಕ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು, ಸಂಬಂಧಪಟ್ಟ ಅಧಿಕಾರಿಯನ್ನು ಅಮಾನತುಗೊಳಿಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದರು. ಇದಕ್ಕೆ ಬಿಜೆಪಿ ಸದಸ್ಯರು ಕಿರಿಯ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳದೆ ಹಿರಿಯ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಇದಾದ ಕೆಲವು ನಿಮಿಷಗಳ ಬಳಿಕ ಸಮಸ್ಯೆ ಬಗೆಹರಿದಿತ್ತು ಪ್ರಸ್ತುತ ಇದರ ಬಗ್ಗೆ ಅಧಿಕಾರಿಯನ್ನು ಅಮಾನತು ಮಾಡಲಾಗಿದೆ.

### ವಿರೋಧಿಯಾಗಿದೆ

ಕರ್ತರಿಗೆ ಪತ್ರ ಬರೆದ ಸ್ಟಾಲಿನ್ ಅವರು ಈ ವಿಷಯದ ಬಗ್ಗೆ ಡಿಎಂಕೆ ಸ್ಥಾಪಕ ನಾಯಕ ಸಿ.ಎನ್. ಅಣ್ಣಾದೊರೈ ಅವರ ಅಭಿಪ್ರಾಯಗಳನ್ನು ನೆನಪಿಸಿಕೊಂಡಿದ್ದಾರೆ. ಹಿಂದಿಯನ್ನು ವಿರೋಧಿಸುವುದು ಪಕ್ಷದ ಉದ್ದೇಶವಲ್ಲ, ಆದರೆ ತಮಿಳು ಸೇರಿದಂತೆ ಭಾರತೀಯ ಭಾಷೆಗಳಿಗೆ ಸಮಾನ ಮಾನ್ಯತೆ ಪಡೆಯುವುದು ಪಕ್ಷದ ಉದ್ದೇಶ ಎಂದು ದಶಕಗಳ ಹಿಂದೆ ಅಣ್ಣಾ ಹೇಳಿದ್ದರು. ಪ್ರಧಾನಿ ನರೇಂದ್ರ ಮೋದಿ ಅವರು ತಮಿಳನ್ನು ಹೆಚ್ಚು ಗೌರವಿಸುತ್ತಾರೆ ಮತ್ತು ತ್ರಿಭಾಷಾ ಸೂತ್ರವು ರಾಜ್ಯಗಳ ಭಾಷೆಗಳ ಬೆಳವಣಿಗೆಗೆ ಇದೆ ಎಂದು ಬಿಜೆಪಿ ಹೇಳಿಕೊಳ್ಳುತ್ತಿದೆ. ಆದರೆ, ತಮಿಳು ಮತ್ತು ಸಂಸ್ಕೃತಕ್ಕೆ ನಿಧಿ ಹಂಚಿಕೆಯಲ್ಲಿನ ವ್ಯತ್ಯಾಸವು ಅವರು ತಮಿಳಿನ ಶತ್ರುಗಳು ಎಂದು ಸ್ಪಷ್ಟಪಡಿಸುತ್ತದೆ ಎಂದು ಸ್ಟಾಲಿನ್ ಆರೋಪಿಸಿದ್ದಾರೆ. ಕೇಂದ್ರ ಶಿಕ್ಷಣ ಸಚಿವಾಲಯದ ಅಂಕಿಅಂಶಗಳ ಪ್ರಕಾರ, 2014 ಮತ್ತು 2023 ರ ನಡುವಿನ ಅವಧಿಯಲ್ಲಿ ಕೇಂದ್ರ ಸರ್ಕಾರವು 2,435 ಕೋಟಿ ರೂ. ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯ ಮತ್ತು ರಾಷ್ಟ್ರೀಯ ಸಂಸ್ಕೃತ ವಿಶ್ವವಿದ್ಯಾಲಯ. ಇದೇ ಅವಧಿಯಲ್ಲಿ ಶಾಸ್ತ್ರೀಯ ತಮಿಳು ಕೇಂದ್ರೀಯ ಸಂಸ್ಥೆಗೆ ಕೇವಲ 167 ಕೋಟಿ ರೂ. ಸಂಸ್ಕೃತ ಮತ್ತು ಹಿಂದಿ ಭಾಷೆಗಳ ಪ್ರಚಾರಕ್ಕಾಗಿ ನಿಧಿ ಹಂಚಿಕೆ ಮತ್ತು ವೆಚ್ಚ ಹಲವು ಪಟ್ಟು ಹೆಚ್ಚಾಗಿದೆ. ಕೇಂದ್ರ ಸರ್ಕಾರವು ಭಾಷಾ ಪ್ರಾಬಲ್ಯದ ಭಾವನೆಯೊಂದಿಗೆ ಕಾರ್ಯನಿರ್ವಹಿಸುತ್ತಿದೆ ಮತ್ತು ಮತಗಳಿಗಾಗಿ ತಮಿಳಿಗೆ ಕೇವಲ ತುಟಿ ಬಿಚ್ಚುತ್ತಿದೆ ಎಂದು ಮುಖ್ಯಮಂತ್ರಿ ಆರೋಪಿಸಿದರು. ರಾಜ್ಯಕ್ಕೆ ನೀಡಬೇಕಾದ ಹಣವನ್ನು ಹಂಚಿಕೆ ಮಾಡದೆ ತಮಿಳುನಾಡಿಗೆ ದ್ರೋಹ ಬಗೆದಿರುವ ಬಿಜೆಪಿ ನೇತೃತ್ವದ ಕೇಂದ್ರವು ತಮಿಳು ಭಾಷೆಗೆ ಹಣವನ್ನು ಹಂಚಿಕೆ ಮಾಡದೆ ದ್ರೋಹ ಮಾಡುತ್ತಿದೆ ಮತ್ತು ಪ್ರಾಬಲ್ಯದ ಭಾಷೆಗಳು ಹಿಂದಿ ಮತ್ತು ಸಂಸ್ಕೃತದ ಮೂಲಕ ತಮಿಳು ಮತ್ತು ಇತರ ರಾಜ್ಯಗಳ ಭಾಷೆಗಳನ್ನು ನಾಶಪಡಿಸಲು ಪ್ರಯತ್ನಿಸುತ್ತಿದೆ ಎಂದಿದ್ದಾರೆ.

# ಜಾನುವಾರುಗಳಿಗೆ ನೀರು, ಮೇವು ಕೊರತೆಯಾಗದಂತೆ ಕ್ರಮಕ್ಕೆ ಡಿಸಿ ಸೂಚನೆ

**ಚಾಮರಾಜನಗರ:** ಬೇಸಿಗೆ ಸಮೀಪಿಸುತ್ತಿರುವುದರಿಂದ ಜಿಲ್ಲೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರು, ಮೇವಿನ ಲಭ್ಯತೆಗೆ ಕೊರತೆಯಾಗದಂತೆ ಸಮರ್ಪಕ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಬಾರಿ ಜನವರಿಯಿಂದ ಇದುವರೆಗೆ ವಾಡಿಕೆಗಿಂತ ಮಳೆ ಪ್ರಮಾಣ ಕಡಿಮೆಯಾಗಿದ್ದು, ಕುಡಿಯುವ ನೀರಿನ ಅಭಾವ ಉಂಟಾಗುವ ಸಂಭವವಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳನ್ನು ಪಟ್ಟಿ ಮಾಡಿ ಜನರಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಲಭ್ಯತೆ ಪರಿಶೀಲಿಸಿ ಬೋರೆವೆಲ್ ಕೊರೆಸುವ ವ್ಯವಸ್ಥೆ ಮಾಡಬೇಕು. ಅಗತ್ಯವಿದ್ದರೆ ಸ್ಥಳೀಯ ಪಂಚಾಯಿತಿ ವತಿಯಿಂದ ಟ್ಯಾಂಕರ್‌ಗಳಲ್ಲಿ ನೀರು ಪೂರೈಕೆಗೆ ಮುಂದಾಗುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಎಲ್ಲಾ ವಾರ್ಡ್ಗಳಲ್ಲಿ ಶುದ್ಧ ಕುಡಿಯುವ ನೀರಿನ (ಆರ್.ಓ ಪ್ಲಾಂಟ್) ಕೇಂದ್ರಗಳ ನೀರಿನ ಶುದ್ಧತೆಗಾಗಿ ನೀರಿನ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗೊಳಪಡಿಸಬೇಕು. ಅಂಗನವಾಡಿ, ಶಾಲೆ, ವಿದ್ಯಾರ್ಥಿನಿಲಯಗಳಲ್ಲಿ ಕುಡಿಯುವ ನೀರಿನ ಶುದ್ಧತೆ ಬಗ್ಗೆ ಪರಿಶೀಲಿಸಬೇಕು. ಎಲ್ಲಾ ಗ್ರಾಮಗಳಲ್ಲಿರುವ ಒವರ್‌ಹೆಡ್ ಟ್ಯಾಂಕ್‌ಗಳ ಸ್ವಚ್ಚತೆಗೆ ಆದ್ಯತೆ ನೀಡಬೇಕು. ಈ ಬಗ್ಗೆ ಕಂದಾಯಾಧಿಕಾರಿಗಳು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಂಬಂಧಿತ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಪ್ರಸ್ತುತ ಬಿಸಿಲಿನ ತಾಪ (ಹಿಟ್‌ವೇವ್) ಹೆಚ್ಚಾಗಿರುವುದರಿಂದ ಮಕ್ಕಳು, ಹಿರಿಯ ನಾಗರಿಕರು, ಆರೋಗ್ಯ ತೊಂದರೆಯಿಂದ ಬಳಲುತ್ತಿರುವವರು ಮಧ್ಯಾಹ್ನದ ಸಮಯದಲ್ಲಿ ಹೊರಗೆ ಬರುವುದನ್ನು ಕಡಿಮೆ ಮಾಡಬೇಕು. ಬಾಯಾರಿಕೆ ಇರಲಿ, ಇಲ್ಲದಿರಲಿ ಪ್ರತಿದಿನ 3 ಲೀಟರ್ ನೀರು ಕುಡಿಯಬೇಕು. ಬಿಸಿಲಿನ ತಾಪದಿಂದ (ಹಿಟ್‌ವೇವ್) ರಕ್ಷಣೆ ಪಡೆಯಲು ಜನರಿಗೆ ಸಲಹೆ ನೀಡಬೇಕು. ನರೇಗಾ ಯೋಜನೆಯಡಿ ಕೆಲಸ ಮಾಡುವವರಿಗೆ ನೆರಳಿನ ವ್ಯವಸ್ಥೆ ಕಲ್ಪಿಸಬೇಕು. ಕಟ್ಟಡ ಹಾಗೂ ಇಟ್ಟಿಗೆ ಕಾರ್ಮಿಕರು ಆದಷ್ಟೂ ಬಿಸಿಲಿನ ತಾಪದಿಂದ ರಕ್ಷಿಸಿಕೊಳ್ಳಬೇಕು. ಪಕ್ಷಿಗಳು ನೀರು ಕುಡಿಯಲು ಅನುಕೂಲವಾಗುವಂತೆ ಸಾರ್ವಜನಿಕರು ತಮ್ಮ ಮನೆಯ ಮೇಲ್ಭಾಗದಲ್ಲಿ ಹಾಗೂ ನೌಕರರು



ಸರ್ಕಾರಿ ಕಟ್ಟಡಗಳ ಮೇಲೆ ಮಣ್ಣಿನ ಟಬ್, ಮಡಿಕೆ, ಪಾತ್ರೆಗಳಲ್ಲಿ ನೀರು ತುಂಬಿಸಿಡಬೇಕು ಎಂದು ತಿಳಿಸಿದರು.

ಜಾನುವಾರುಗಳಿಗೆ ಮೇವಿಗೆ ಕೊರತೆಯಾಗದಂತೆ ಪಶುಪಾಲನಾ ಇಲಾಖೆ ಮೇವು ಬ್ಯಾಂಕ್ ತೆರೆಯಲು ಮುಂದಾಗಬೇಕು. ಗೋಶಾಲೆಗಳಿಗೆ ಸಮರ್ಪಕವಾಗಿ ಮೇವು ಪೂರೈಕೆ ಮಾಡಬೇಕು. ಹನೂರು ಭಾಗದ ಪಶುಪಾಲನಾ ಅಧಿಕಾರಿಗಳು ಟಾಸ್ಕ್ ಪೋರ್ಸ್ ಸಭೆ ನಡೆಸಿ ಮೇವಿನ ಕಿಟ್ ತಲುಪಿರುವ ಬಗ್ಗೆ ಅಧಿಕಾರಿಗಳು ಖಾತರಿಪಡಿಸಿಕೊಳ್ಳಬೇಕು. ಅಗತ್ಯವಿರುವೆಡೆ ಮೇವಿನ ಕಿರುಪೊಟ್ಟಣಗಳನ್ನು ಪೂರೈಸಬೇಕು ಎಂದ ಜಿಲ್ಲಾಧಿಕಾರಿಯವರು ಕಳೆದ ಬಾರಿ ದನಗಳು ಪ್ಲಾಸ್ಟಿಕ್ ತಿಂದು ಸಾವಿಗೀಡಾದ ಪ್ರಕರಣಗಳು ಮರುಕಳಿಸದಂತೆ ಎಚ್ಚರ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಚಾಮರಾಜನಗರ ಪಟ್ಟಣ ವ್ಯಾಪ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಪ್ಲಾಂಟ್‌ಗಳನ್ನು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಪಟ್ಟಣದ ಹಲವೆಡೆ ಚರಂಡಿಗಳಲ್ಲಿ ಕಟ್ಟಿಕೊಂಡಿರುವ ಕಸ ತೆರವುಗೊಳಿಸಬೇಕು. ಗುಂಡ್ಲುಪೇಟೆ ರಸ್ತೆ ಹಾಗೂ ಅಂಚೆಕಚೇರಿ ಮುಂಭಾಗ ರಸ್ತೆಬದಿಯಲ್ಲಿ ಕಸ ಸಂಗ್ರಹಣೆಯಾಗಿದ್ದು, 2ರಿಂದ 3 ದಿನದೊಳಗೆ ಸ್ವಚ್ಛಗೊಳಿಸಬೇಕು. ಅಲ್ಲದೆ ಪೌಲ್ಟ್ರಿ ಫಾರಂಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಸಂಬಂಧಪಟ್ಟವರಿಗೆ ತಿಳಿಸಬೇಕು ಎಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಜಿಲ್ಲಾ ಪಂಚಾಯತ್ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಅಬೀದ್, ನಗರಾಭಿವೃದ್ಧಿ ಕೋಶದ ಯೋಜನಾ ನಿದೇಶಕರಾದ ಎಂ.ವಿ. ಸುಧಾ, ನಗರಸಭೆ ಪೌರಾಯುಕ್ತರಾದ ಎಸ್. ರಾಮದಾಸ್, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಕೈಗಾರಿಕೆಗಳಿಗೆ ಭೂಮಿ ಕೊಡುವುದಿಲ್ಲ: ಭಕ್ತರಹಳ್ಳಿ ಬೈರೇಗೌಡ

**ಶಿಡ್ಲಘಟ್ಟ:** ಈ ಭಾಗದಲ್ಲಿ ಹೆಚ್ಚಾಗಿ ರೇಷ್ಮೆ, ವಾಣಿಜ್ಯ ಬೆಳೆಗಳಾದ ತರಕಾರಿ, ಹೂ ಹಾಗು ಹಣ್ಣುಗಳನ್ನು ಬೆಳೆಯುವ ಫಲವತ್ತಾದ ಭೂಮಿಯಾಗಿದ್ದು ಕೈಗಾರಿಕೆಗಳಿಗೆ ಭೂಮಿ ಕೊಡುವುದಿಲ್ಲ ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ಮಾರ್ಚ್ 12 ರಂದು ಬೆಂಗಳೂರಿನ ಫ್ರೀಡ್‌ಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ತಿಳಿಸಿದರು.

ತಾಲ್ಲೂಕಿನ ಜಂಗಮಕೋಟೆ ಬಳಿಯ ವೆಂಕಟರಮಣಸ್ವಾಮಿ ನಿವಾಸದಲ್ಲಿ ನಡೆದ ರೈತರ ಸಭೆಯಲ್ಲಿ ಅವರು ಮಾತನಾಡಿದರು.

ಕಾನೂನಿನ ಪ್ರಕಾರ ಎಬಿಸಿಡಿ ಯಂತೆ ನಾಲ್ಕು ವಿಭಾಗಗಳಾಗಿ ಭೂಮಿಯನ್ನು ವಿಂಗಡಿಸಲಾಗಿದೆ 'ಎ' ಮತ್ತು 'ಬಿ' ಭಾಗಗಳು ಕೃಷಿಗೆ ಫಲವತ್ತಾದ ಭೂಮಿ, ಈ ಭೂಮಿಯಲ್ಲಿ ಕೈಗಾರಿಕೆಗಳು ಸ್ಥಾಪನೆ ಮಾಡಬಾರದು ಎಂಬುದು ಅವರ



ಅಜೆಂಡಾದ ಕಾಫಿಯಲ್ಲೇ ಇದೆ.'ಸಿ' ಮತ್ತು 'ಡಿ' ಭಾಗದ ಭೂಮಿಗಳು ಇವು ಕೃಷಿಯೇತರ ಭೂಮಿ ಇವುಗಳಲ್ಲಿ ಕೈಗಾರಿಕೆಗಳು ಸ್ಥಾಪನೆ ಮಾಡಬಹುದು ಎಂದು ಸಾರ್ವಜನಿಕರಿಗೆ ತಿಳಿ ಹೇಳಬೇಕು ಎಂದರು.

ಫಲವತ್ತಾದ ಕೃಷಿಯ ಭೂಮಿಗಳನ್ನೆಲ್ಲಾ ಭೂ ಪರಿವರ್ತನೆ ಮಾಡಿಕೊಂಡು ರೈತರ ಬಳಿ ಇರುವ ಜಮೀನನ್ನು ವಶಕ್ಕೆ ಪಡೆಯುತ್ತಿದ್ದರೆ,ಬೆಳೆ ಎಲ್ಲಿ ಬೆಳೆಯೋದು ಜನರು ಬದುಕುವುದು ಊಟಕ್ಕಾಗಿ ಎಲ್ಲಾ ಜಮೀನುಗಳನ್ನು ತಗೆದುಕೊಂಡರೆ ರೈತ ಏನು ಬೆಳೆಯಬೇಕು ಎಂಬುದು ಇಲ್ಲಿನ ಜನರ ಪರಿಸ್ಥಿತಿ,ನಾನು ಸ್ಥಳೀಯವನಾಗಿದ್ದುಕೊಂಡು ಅಲ್ಪಸ್ವಲ್ಪ ಜಮೀನಿನಲ್ಲಿ ಬೆಳೆಗಳನ್ನ ಬೆಳೆದುಕೊಂಡು ಜೀವನ ಸಾಗಿಸುತ್ತಿದ್ದೇವೆ ,ಇದನ್ನೂ ಭೂ ಪರಿವರ್ತನೆ ಮಾಡಿಕೊಂಡು ಕೈಗಾರಿಕೀಕರಣ ಮಾಡುವುದಕ್ಕೆ ಗ ಹೊರಟಿರುವುದು ನ್ಯಾಯ ಸಮ್ಮತವಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಮಾಜಿ ಶಾಸಕ ರಾಜಣ್ಣ ಮಾತನಾಡಿ ಕೈಗಾರಿಕಾ ಪ್ರದೇಶಕ್ಕೆ ಈ ಭಾಗದ ಜಮೀನುಗಳನ್ನು ತೆಗೆದುಕೊಳ್ಳುವ ನಿರ್ಣಯವನ್ನು ಸರ್ಕಾರ ಕೈಬಿಡಬೇಕು ಎಂದು ಹೇಳಿದರು.

ಫಲವತ್ತಾದ ಭೂಮಿಯನ್ನು ಕೈಗಾರಿಕಾ ಪ್ರದೇಶವನ್ನಾಗಿ ಘೋಷಿಸಿರುವುದು ಖಂಡನೀಯ ಅಧಿಕಾರಿಗಳಾಗಲಿ,ಜನಪ್ರಧಿನಿದಿಗಳಾಗಲಿ ಸಂಬಂಧಿಸಿದ ರೈತರ ಜತೆ ಆಗು ಹೋಗುಗಳ ಬಗ್ಗೆ ಚರ್ಚಿಸದೇ ಏಕಾಏಕಿ ರೈತರಿಗೆ ನೋಟೀಸ್ ನೀಡಿ ರೈತರನ್ನು ಒಕ್ಕಲೇಬಿಸಬೇಡಿ ಎಂದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲ್ಲೂಕು ಅಧ್ಯಕ್ಷ ತಾದೂರು ಮಂಜುನಾಥ್, ಹಿರೇಬಲ್ಲ ಕೃಷ್ಣಪ್ಪ, ಸ್ಕೂಲ್ ದೇವರಾಜ್ ರೈತರು ಮುಖಂಡರು ಹಾಗು ಜಮೀನಿನ ಮಾಲಿಕರು ಪಾಲ್ಗೊಂಡಿದ್ದರು.

# ರಾತ್ರೋ ರಾತ್ರಿ ಮೋಟರ್ ಕೇಬಲ್ ಕಳ್ಳತನ ಮಾಡಿದ ಕಿಡಿಕೇಡಿಗಳು

**ಕೆ.ಆರ್.ಪೇಟೆ.:** ತಾಲ್ಲೂಕಿನ ಕಿಕ್ಕೇರಿ ಸಮೀಪದ ಹೊಡಕಹಳ್ಳಿ ಗ್ರಾಮದಲ್ಲಿ ರಾತ್ರೋ ರಾತ್ರಿ ಸುಮಾರು ಹತ್ತಕ್ಕೂ ಹೆಚ್ಚು ಕಡೆಗಳಲ್ಲಿ ಮೋಟರ್‌ನ ಕೇಬಲ್ ವೈರ್ ಅನ್ನು ಕಳ್ಳತನ ಮಾಡಿದ್ದು ಇದರಿಂದ ರೈತರು ಕಂಗಲಾಗಿದ್ದಾರೆ.



ಕಿಕ್ಕೇರಿ ಸಮೀಪದ ಹೊಡಕಹಳ್ಳಿ ಗ್ರಾಮದ ಕಾಳೇಗೌಡರ ಮಗ ಗಿರೀಶ ಎಂಬರ ತೋಟದಲ್ಲಿ ಇದ್ದ ನಾಲ್ಕು ಪಂಪ್‌ಸೆಟ್ ಕೇಬಲ್ ವೈರ್ ಅನ್ನು ಕತ್ತಿರಿಸಿಕೊಂಡು ಹೋಗಿದ್ದಾರೆ ಅಲ್ಲದೇ ಪಕ್ಕದ ವೈರಮುಡಿ ಎಂಬ ರೈತನ ಮೂರು ಕೊಳವೆಬಾವಿಗಳ ಕೇಬಲ್ ಸೇರಿದಂತೆ ಹಲವು ರೈತರ ತೋಟಗಳಿಗೆ ಕೀಡಿಕೇಡಿಗಳು ಸಂಚುಮಾಡಿ ಕೇಬಲ್ ವೈರ್ ಅನ್ನು ಕತ್ತರಿಸಿಕೊಂಡು ಉಳಿದ ವೈರ್ ಅನ್ನು ಕೊಳವೆ ಬಾವಿಯ ಒಳಗೆ ಹಾಕಿದ್ದಾರೆ. ಒಟ್ಟಾರೆ ಈ ಕಳ್ಳತನದಿಂದ ಹೊಡಕಹಳ್ಳಿ ಗ್ರಾಮದ ಸುತ್ತಮುತ್ತಲಿನ ರೈತರಲ್ಲಿ ಆತಂಕ ಎದುರಾಗಿದೆ. ಈ ವಿಚಾರವಾಗಿ ಕಿಕ್ಕೇರಿ ಪೋಲೀಸ್ ಠಾಣೆಗೆ ದೂರು ನೀಡಲಾಗಿದ್ದು ಪೋಲಿಸರು ಮುಂದಿನ ತನಿಖೆ ನಡೆಸುತ್ತಿದ್ದಾರೆ.

# ವಿಚಾರ ಸಂಕಿರಣ ಮತ್ತು ಕಾರ್ಯಾಗಾರ

**ಚಾಮರಾಜನಗರ:** ಹನೂರು ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆಮತ್ತು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಹನೂರು ತಾಲೂಕು ಘಟಕ ಇವರ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 ಮತ್ತು ತಿದ್ದುಪಡಿ ಅಧಿನಿಯಮಗಳು ಹಾಗೂ ನಾಗರಿಕ ಹಕ್ಕು ಸಂರಕ್ಷಣಾ ಅಧಿನಿಯಮ ಕುರಿತ ವಿಚಾರ ಸಂಕಿರಣ ಮತ್ತು ಕಾರ್ಯಾಗಾರವನ್ನು ಹನೂರು ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಲಾಗಿದೆ.

ಶಾಸಕರಾದ ಎಂ.ಆರ್. ಮಂಜುನಾಥ್ ಅವರು ಘನ ಉಪಸ್ಥಿತಿ ವಹಿಸುವರು. ಚೆನ್ನಾಲಿಂಗನಹಳ್ಳಿ ಜೇತವನ ಬುದ್ಧ ವಿಹಾರದ ಮನೋರಖ್ಖಿತ ಭಂತೇಜಿ ಅವರು ದಿವ್ಯ ಸಾನಿಧ್ಯ ವಹಿಸುವರು. ಕೊಳ್ಳೇಗಾಲ ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ತಹಶೀಲ್ದಾರ್ ಗುರುಪ್ರಸಾದ್ ಅವರು ಅಧ್ಯಕ್ಷತೆ ವಹಿಸುವರು.

ಹನೂರು ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಮಮ್ತಾಜ್ ಬಾನು, ಉಪಾಧ್ಯಕ್ಷರಾದ ಆನಂದ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಎನ್. ಮುನಿರಾಜು, ಕೊಳ್ಳೇಗಾಲ ಉಪವಿಭಾಗದ ಆರಕ್ಷಕ ಉಪಾಧೀಕ್ಷಕರಾದ ಧರ್ಮೇಂದ್ರ, ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ. ಎಂ. ಸವಿತಾ, ಹನೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಎ.ಎಂ. ಕೇಶವಮೂರ್ತಿ, ಹನೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ್ ಕುಮಾರ್, ಸದಸ್ಯರಾದ ಸಂಪತ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಅಂಬೇಡ್ಕರ್ ರವರ ವಿಚಾರ ವಾದಿಗಳಾದ ಮಹದೇವಕುಮಾರ್ ಅವರು ವಿಚಾರ ಮಂಡಿಸುವರು. ಕರ್ನಾಟಕ ರಾಜ್ಯ ಕಾರ್ಮಿಕ ವಿಭಾಗದ ಜಿ.ಸಿ. ಕಿರಣ್, ಮಾರ್ಟಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ರಾಮಲಿಂಗಂ, ಡಿ.ಎಸ್.ಎಸ್. (ಅಂಬೇಡ್ಕರ್‌ವಾದ) ರಾಜ್ಯ ಸಂಘಟನಾ ಸಂಚಾಲಕರಾದ ಕೆ. ದೊಡ್ಡಿಂದುವಾಡಿ ಸಿದ್ದರಾಜು, ಚಾಮರಾಜನಗರ ಮಹಿಳಾ ಘಟಕದ ಜಿಲ್ಲಾ ಸಂಚಾಲಕರಾದ ಭಾಗ್ಯಮ್ಮ, ಜಿಲ್ಲಾ ಸಂಚಾಲಕರಾದ ಹಿಂಡಯ್ಯ ಮಾಂಬಳ್ಳಿ, ಹನೂರು ತಾಲೂಕು ಸಂಚಾಲಕರಾದ ಮಾದೇಶ್ ಭೈರನಥ ಅವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಮಕ್ಕಳ ಕಲಿಕಾ ಬಲವರ್ಧನೆಗೆ ಕಲಿಕಾ ಹಬ್ಬಮುಖ್ಯ

**ಮುಳಬಾಗಿಲು:** ತಾಲ್ಲೂಕಿನ ಹೆಬ್ಬಣಿ ಗ್ರಾಮ ಪಂಚಾಯತಿಯ ಹೆಬ್ಬಣಿ ಕಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬವನ್ನು 1ರಿಂದ 5ನೇ ತರಗತಿಯವರೆಗೆ ಓದುತ್ತಿರುವ ಮಕ್ಕಳ ಕಲಿಕಾ ಬಲವರ್ಧನೆಗೆ ಕ್ಲಸ್ಟರ್ ಮಟ್ಟದಲ್ಲಿ ಕಲಿಕಾ ಹಬ್ಬ ಆಚರಿಸುವಂತೆ ಸಮಗ್ರ ಶಿಕ್ಷಣ ಕರ್ನಾಟಕ ಸೂಚನೆ ನೀಡಿದೆ ಎಂದು ಹೆಬ್ಬಣಿ ಕ್ಲಸ್ಟರ್ ನ ಸಿ ಆರ್ ಪಿ ಯಾದ ಕೆ.ಟಿ. ಬ್ರಹ್ಮಾನಂದ ರೆಡ್ಡಿ ರವರು ತಿಳಿಸಿದ್ದಾರೆ.

ಈ ಹಂತದಲ್ಲಿ ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಹೆಚ್ಚಿಸುವ ದೃಷ್ಟಿಯಿಂದ ಕಲಿಕಾ ಹಬ್ಬ ಆಯೋಜಿಸಬೇಕು ಎಂದು ಸಮಗ್ರ ಶಿಕ್ಷಣ ಕರ್ನಾಟಕ ಸೂಚಿಸಿದೆ.

ಕಥೆ ಹೇಳುವುದು, ಒಳಾಂಗಣ ಮತ್ತು ಹೊರಾಂಗಣದ ಮೋಜಿನ ಆಟಗಳು, ಸಂವಾದಾತ್ಮಕ ಅವಧಿಗಳು ಮತ್ತು ಕಲೆ ಕುಶಲತೆ ಆಧಾರಿತ ಸೃಜನಾತ್ಮಕ ಚಟುವಟಿಕೆಯನ್ನು ಆಯೋಜಿಸಿ ವಿದ್ಯಾರ್ಥಿಗಳಿಗೆ ಸಂತೋಷದಾಯಕ ಮತ್ತು ಅನುಭವಯುಕ್ತ ಕಲಿಕೆಯ ವಾತಾವರಣವನ್ನು ಪ್ರೇರೇಪಿಸುವಂತೆ ಸೂಚಿಸಲಾಗಿದೆ. ಕಲಿಕಾ ಹಬ್ಬದಲ್ಲಿ ಗಟ್ಟಿ ಓದು, ಕಥೆ ಹೇಳುವುದು, ಕೈಬರಹ, ಸಂತೋಷದಾಯಕ ಗಣಿತ, ನಿಧಿ ಹುಡುಕಾಟ, ಸ್ಮರಣಾ ಪರೀಕ್ಷೆ, ರಸ ಪ್ರಶ್ನೆ ಮುಂತಾದ ಚಟುವಟಿಕೆಯನ್ನು ಆಯೋಜಿಸುವಂತೆ ಸೂಚಿಸಲಾಗಿದೆ. ಬೆಳಗ್ಗೆಯಿಂದ ಸಂಜೆಯರೆಗೆ ಈ ಚಟುವಟಿಕೆ ನಡೆಯಲಿದ್ದು, ಪ್ರತಿ ಕ್ಲಸ್ಟರ್‌ಗೆ 15 ಸಾವಿರ ರೂ. ವೆಚ್ಚ ನಿಗದಿಪಡಿಸಲಾಗಿದೆ. ಫೆ.10ರೊಳಗೆ ಕಲಿಕಾ ಹಬ್ಬ ಆಯೋಜಿಸಬೇಕು, ಶಿಕ್ಷಣೇತರ



ಚಟುವಟಿಕೆಗೆ ಆಸ್ಪದ ನೀಡಬಾರದು ಎಂದು ಸೂಚನೆ ನೀಡಿದರು.

ಈ ಕಲಿಕಾ ಹಬ್ಬದಲ್ಲಿ ಹೆಬ್ಬಣಿ ಪಂಚಾಯತಿ ಎಲ್ಲಾ ಶಾಲಾ ಮಕ್ಕಳು ತಮ್ಮ ತಮ್ಮ ಪ್ರತಿಭೆಗಳನ್ನು ನೀಡುವುದರ ಮುಖಾಂತರ ಈ ಕಾರ್ಯಕ್ರಮಕ್ಕೆ ಮೆರಗನ್ನು ತಂದಿದರು. ವಿಶೇಷ ಅಂದರೆ ಸುನ್ನಪಕುಂಟೆ ಶಾಲೆಯ ಮಕ್ಕಳ ಗಾಂಧಾರ ಕಲೆಯನ್ನು ಪ್ರದಕ್ಷಣೆ ಮಾಡಿರುವುದು ವಿಶೇಷವಾಗಿದೆ ಎಂದು ಹೇಳಬಹುದು.

ಈ ಸಂದರ್ಭದಲ್ಲಿ ಗ್ರಾ. ಪಂ. ಕಾರ್ಯದರ್ಶಿಗಳಾದ ಮಂಜುನಾಥ್, ಈ ಶಾಲೆಯ ಎಸ್ ಡಿ ಎಮ್ ಸಿ ಅಧ್ಯಕ್ಷರಾದ ರಾಮ ಮೂರ್ತಿ, ಅರ್ ಕೆ ಹೆಚ್ ಎಸ್ ಪ್ರೌಢ ಶಾಲೆಯ ಶಿಕ್ಷಕರಾದ ಗಂಗಾಧರ್, ನಾಗವೇಣಿ, ಮಂಜುನಾಥ್, ಶಿವಕುಮಾರ್,ನಾಗಲಕ್ಷ್ಮಿ,ಸುರೇಂದ್ರ ರೆಡ್ಡಿ, ಹರೀಶ್, ವೆಂಕಟರತ್ನಯ್ಯ ಹಾಗೂ ಹೆಬ್ಬಣಿ ಕ್ಲಸ್ಟರ್ ಮಟ್ಟದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು, ಅತಿಥಿ ಶಿಕ್ಷಕರು, ವಿದ್ಯಾರ್ಥಿಗಳ ಪೋಷಕರು ಹಾಗೂ ವಿದ್ಯಾರ್ಥಿಗಳು, ಗ್ರಾಮಸ್ಥರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ ವೈಭವದ ಜಾತ್ರಾ ಮಹೋತ್ಸವ


## ಆದಿಚುಂಚನಗಿರಿಯಲ್ಲಿ ಸಂಭ್ರಮದ ಜಾತ್ರೆ ಅದ್ದೂರಿಯ ರಥೋತ್ಸವ ಭಕ್ತಾದಿಗಳ ಸಂಗಮ

**ನಾಗಮಂಗಲ:** ಪರಶಿವನ ತಪೋಭೂಮಿ, ದೇವಾನು ದೇವತೆಗಳು ನೆಲೆಸಿರುವ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕ್ಷೇತ್ರವಾದ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಜಾತ್ರಾ ಮಹೋತ್ಸವ ನಡೆಯಲಿದೆ.

ನಾಗಮಂಗಲ ತಾಲೂಕು ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ 7ರಿಂದ ಮಾರ್ಚ್ 15ರ ವರೆಗೆ ಒಂಬತ್ತು ದಿನಗಳ ಕಾಲ ಜಾತ್ರಾ ಮಹೋತ್ಸವ ನಡೆಯಲಿದೆ. ಈ ಪ್ರಯುಕ್ತ ಶ್ರೀಕ್ಷೇತ್ರದಲ್ಲಿ ವಿವಿಧ ಪೂಜಾ ಕೈಂಕರ್ಯ ಸೇರಿದಂತೆ ಹಲವು ಧಾರ್ಮಿಕ, ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಮಾರ್ಚ್ 7ರ ಬೆಳಗ್ಗೆ 6.30ಕ್ಕೆ ಶ್ರೀ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರು ನಂದಿ ಪೂಜೆ ಹಾಗೂ ಧರ್ಮಧ್ವಜಾರೋಹಣ ಮಾಡಲಿದ್ದಾರೆ. ಈ ಮೂಲಕ 9 ದಿನಗಳ ಜಾತ್ರಾ ಮಹೋತ್ಸವಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡುವರು. ಅದೇ ದಿನ ಬೆಳಗ್ಗೆ 10ಗಕ್ಕೆ ಸಭಾ ಕಾರ್ಯಕ್ರಮವೂ ನಡೆಯಲಿದೆ.

ಮಾರ್ಚ್ 8ರಸಂಜೆ6 ಗಂಟೆಗೆ ಸರ್ವಾಲಂಕೃತ ಶ್ರೀ ಚಂದ್ರಮೌಳೇಶ್ವರಸ್ವಾಮಿ ಉತ್ಸವ ನಡೆಯಲಿದೆ. ಮಾರ್ಚ್ 9ರ ಸಂಜೆ 6ಕ್ಕೆ ಸರ್ವಾಲಂಕೃತ ಶ್ರೀ



ಮಲ್ಲೇಶ್ವರಸ್ವಾಮಿಯ ಉತ್ಸವ ನಡೆಯಲಿದೆ. ಮಾರ್ಚ್ 10ರ ಬೆಳಗ್ಗೆ 9:30ಕ್ಕೆ ಸರಳ ಸಾಮೂಹಿಕ ವಿವಾಹ ಮತ್ತು ಹಿರಿಯ ದಂಪತಿಗಳಿಗೆ ಸನ್ಮಾನ ಸಮಾರಂಭ ಸಂಜೆ 6 ಗಂಟೆಗೆ ಸಿದ್ದೇಶ್ವರ ಸ್ವಾಮಿ ಉತ್ಸವ.

ಮಾ 11. ಬೆಳಿಗ್ಗೆ 7:30ಕ್ಕೆ ಶ್ರೀ ಕಾಲಭೈರವೇಶ್ವರ ಸ್ವಾಮಿಗೆ ಸುವರ್ಣಕವಚಾಲಂಕಾರ ಪೂಜೆ ಮತ್ತು ಶ್ರೀ ಗಂಗಾಧರೇಶ್ವರಸ್ವಾಮಿಗೆ ರಜತ ನಾಗಾಭರಣ ಅಲಂಕಾರ ಪೂಜೆ ನಡೆಯಲಿದೆ. ಸಂಜೆ 6ಕ್ಕೆ ಶ್ರೀ ಕಾಲಭೈರವೇಶ್ವರಸ್ವಾಮಿ ಹೂವಿನ ಪಲಕ್ಕಿ ಉತ್ಸವ ಮತ್ತು ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ ಮುತ್ತಿನ ಪಲ್ಲಕ್ಕಿ ಉತ್ಸವ ನಡೆಯಲಿದೆ.

ಮಾರ್ಚ್. 12ರ ಸಂಜೆ 6ಕ್ಕೆ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ ಜ್ವಾಲಾಪೀಠಾರೋಹಣ ಮತ್ತು ಸಿದ್ಧ ಸಿಂಹಾಸನ ಪೂಜೆ ನಡೆಯಲಿದೆ. ಹಾಗೂ ರಾತ್ರಿ 8ಕ್ಕೆ ಚಂದ್ರಮಂಡಲೋತ್ಸವ ಪೂಜೆ ನಡೆಯಲಿದೆ. ಮಾರ್ಚ್ 13ರ ಸಂಜೆ 6:30ಕ್ಕೆ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ ದಿವ್ಯಸಾನಿಧ್ಯದಲ್ಲಿ ಸರ್ವಧರ್ಮ ಸಮ್ಮೇಳನ ನಡೆಯಲಿದೆ. ರಾತ್ರಿ 8:00ಗೆ ಶ್ರೀ ಕಾಲಭೈರವೇಶ್ವರ ಸ್ವಾಮಿಯ ತಿರುಗಣಿ ಉತ್ಸವ, ರಾತ್ರಿ 9:00ಗೆ ಶ್ರೀ ಕಾಲಭೈರವೇಶ್ವರ ಸ್ವಾಮಿಗೆ ಪುಷ್ಕರಣಿಯಲ್ಲಿ ತೆಪ್ಪೋತ್ಸವ ರಾತ್ರಿ 9:30ಕ್ಕೆ ನಾಟಕ ಪ್ರದರ್ಶನಗಳು ನಡೆಯಲಿವೆ.

ಮಾರ್ಚ್ 14ರ ಮುಂಜಾನೆ ನಡೆಯಲಿರುವ ಬ್ರಾಹ್ಮಿ ಮೂಹೂರ್ತದಲ್ಲಿ ಶ್ರೀ ಗಂಗಾಧರೇಶ್ವರ ಸ್ವಾಮಿಯ ಮಹಾರಥೋತ್ಸವ ಹಾಗೂ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ ಅಡ್ಡ ಪಲ್ಲಕ್ಕಿ ಉತ್ಸವು ಬಹಳ ವಿಜೃಂಭಣೆಯಿಂದ ಜರುಗಲಿದೆ. ನಾಡಿನಾದ್ಯಂತ ಸಾವಿರಾರು ಭಕ್ತರು ಈ ರಥೋತ್ಸವಕ್ಕೆ ಸಾಕ್ಷಿಯಾಗಲಿದ್ದಾರೆ. ಹಾಗೆಯೇಸಂಜೆ 6ಕ್ಕೆ ವಿವಿಧ ಗ್ರಾಮಗಳ ನೂರಾರು ಗ್ರಾಮದೇವತೆಗಳ ಮೆರವಣಿಗೆ ಮುಖಾಂತರ ಗಿರಿ ಪ್ರದಕ್ಷಿಣೆ ನಡೆಯಲಿದೆ. ಬಳಿಕ ಸಂಜೆ 6ಕ್ಕೆ ಶ್ರೀ ಸೋಮೇಶ್ವರ ಸ್ವಾಮಿಯ ಉತ್ಸವ ಜರುಗಲಿದೆ.

ಮಾರ್ಚ್ 15ರಂದು ಬೆಳಿಗ್ಗೆ 9:00ಗಂಟೆಗೆಧರ್ಮಧ್ವಜಾವರೋಹಣ ಬೆಳಿಗ್ಗೆ 9:30 ಕ್ಕೆ ಬಿಂದು ಸರೋವರದಲ್ಲಿ ಅವಭೃತ ಸ್ನಾನಮಹಾಭಿಷೇಕ ಬೆಳಿಗ್ಗೆ 9:30ಕ್ಕೆ ಸಭಾ ಕಾರ್ಯಕ್ರಮದ ಮೂಲಕ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

# ಬಿಹಾರ:ತಾಲ್ಲೂಕು ಜಾನಪದ ನೃತ್ಯ ತಂಡಕ್ಕೆ ಪ್ರಥಮ



**ಶಿಡ್ಲಘಟ್ಟ:** ಬಿಹಾರದಲ್ಲಿ ಫೆಭ್ರವರಿ 02– ರಿಂದ ಮಾರ್ಚ್ –03 ರ ವರೆಗೆ ನಡೆದ ಅಖಿಲ ಭಾರತೀಯ ನಾಗರಿಕ ಸೇವೆಗಳ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿದ ತಾಲ್ಲೂಕು ಜಾನಪದ ನೃತ್ಯ ತಂಡ ಸಕ್ಸಸ್ ಟೀಮ್ ಪ್ರಥಮ ಬಹುಮಾನ ಪಡೆಯುವ ಮೂಲಕ ರಾಷ್ಟ್ರ ಮಟ್ಟದಲ್ಲಿ ರಾಜ್ಯದ, ಜಿಲ್ಲೆಯ ಹಾಗೂ ನಮ್ಮ ಶಿಡ್ಲಘಟ್ಟ ತಾಲ್ಲೂಕಿಗೆ ಕೀರ್ತಿ ತಂದಿದ್ದಾರೆ.

ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲಿ ತಾಲ್ಲೂಕಿನ ಚೌಡರೆಡ್ಡಿಹಳ್ಳಿ ಶಾಲೆಯ ಶಿಕ್ಷಕರಾದ ಕಿಶೋರ್ ಕುಮಾರ್ ಪ್ರಥಮ ಬಹುಮಾನ ಪಡೆಯುವ ಮೂಲಕ ತಾಲೂಕಿನ ಕೀರ್ತಿಯನ್ನು ಇಮ್ಮಡಿಗೊಳಿಸಿದ್ದಾರೆ.

ಜಾನಪದ ನೃತ್ಯ ತಂಡ ಸಕ್ಸಸ್ ಟೀಮ್‌ನ ಎನ್. ಸೌಮ್ಯ ಉಖಕಖ ದ್ಯಾವರಹಳ್ಳಿ ,ಉಷಾ ಉಖಕಖ ಪೆಂಡ್ಲಿವಾರಹಳ್ಳಿ, ಚೈತ್ರಾ ಏಕಖ ಬಶೆಟ್ಟಹಳ್ಳಿ, ಚೂಡಾಮಣಿ ಉಖಕಖ ಪಿಲ್ಲಗುಂಡ್ಲಹಳ್ಳಿ, ಸರಿತಾ ಅಖಕ ಭಕ್ತರಹಳ್ಳಿ, ಶೈಲಜಾ ಉಊಕಖ ಹೊಸಪೇಟೆ ಹಾಗೂ ಹೇಮಾವತಿ ರವರು ತಮ್ಮ ಬಿಡುವಿನ ವೇಳೆಯಲ್ಲಿ ಮತ್ತು ರಜಾ ದಿನಗಳಲ್ಲಿ ನಿರಂತರವಾಗಿ ನೃತ್ಯದ ಅಭ್ಯಾಸ ಮಾಡುವ ಮೂಲಕ ಅವಿರತ ಪ್ರಯತ್ನದಿಂದ ಈ ಸಾಧನೆ ಮಾಡಿದ್ದಾರೆ.

ಎರಡು ವರ್ಷದ ಹಿಂದೆ ತ್ರಿಪುರಾದಲ್ಲಿ ನಡೆದ ರಾಷ್ಟ್ರ ಮಟ್ಟದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಸ್ಪರ್ಧಿಸಿದ್ದರು,ಆದರೆ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಗೆಲ್ಲಲೇಬೇಕೆಂಬ ತಮ್ಮ ಗುರಿಯನ್ನು ಈ ಬಾರಿ ಚಿನ್ನದ ಪದಕ ಗೆಲ್ಲುವ ಮೂಲಕ ಈಡೇರಿಸಿಕೊಂಡಿದ್ದಾರೆ.

ವಿಜೇತರಾದವರನ್ನು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎನ್ ಸುಬ್ಬಾರೆಡ್ಡಿ,ಪ್ರಧಾನ ಕಾರ್ಯದರ್ಶಿ ಎಂ.ಕೆಂಪೇಗೌಡ , ಓಕಖ ನೌಕರರ ಸಂಘದ ಅಧ್ಯಕ್ಷ ವಿ.ಎನ್.ಗಜೇಂದ್ರ,ಕಾರ್ಯದರ್ಶಿ ಎಸ್.ಎ. ನರಸಿಂಹರಾಜು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ ಸರಸ್ವತಮ್ಮ, ಕಾರ್ಯದರ್ಶಿ ಸುಂದರಾಚಾರಿ ಹಾಗು ಶಿಕ್ಷಕರು ಅಭಿನಂದಿಸಿದ್ದಾರೆ.

# ಕುಡಿಯುವ ನೀರಿಗೆ ಹಾಹಾಕಾರ





**ಮಾಲೂರು:** ಮಾಲೂರು ಪಟ್ಟಣಕ್ಕೆ ಕೂಗಳತೆ ದೂರದಲ್ಲಿರುವ ನೀಲಕಂಠ ಅಗ್ರಹಾರ ಗ್ರಾಮದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ ಗ್ರಾಮದಲ್ಲಿ ಮೂಲ ಭೂತ ಸೌಕರ್ಯಗಳು ನೀಡೋದ್ರಲ್ಲಿ ರಾಜಕಾರಣಿಗಳು ಹಾಗೂ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ,

ತಾಲ್ಲೂಕಿನ ಅರಳೇರಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ನೀಲಕಂಠ ಅಗ್ರಹಾರ ಗ್ರಾಮದಲ್ಲಿ ಬೇಸಿಗೆ ಆರಂಭಕ್ಕೂ ಮುನ್ನವೇ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದ್ದು, ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸರ್ಕಾರಗಳು ಗ್ರಾಮೀಣ ಪ್ರದೇಶದ ಹಳ್ಳಿಗಳಿಗೆ ಮೊದಲ ಆದ್ಯತೆಯಂತೆ ಕುಡಿಯುವ ನೀರಿಗೆ ಗಮನ ಹರಿಸಿ ಎಂದು ಆದೇಶಿಸಿದ್ರು ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಂದ ಹಾಗೂ ವಾಟರ್ ಮ್ಯಾನ್ ನಿರ್ಲಕ್ಷ್ಯದಿಂದ ನೀಲಕಂಠ ಆಗ್ರಹಾರ ಗ್ರಾಮದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ಇನ್ನೂ ಪಟ್ಟಣದ ಕೂಗಳತೆ ದೂರದಲ್ಲಿರುವ ಈ ಕುಗ್ರಾಮದಲ್ಲಿ ಇಂದಿಗೂ ಸಹ ಮೂಲ ಭೂತ ಸೌಕರ್ಯಗಳಾದ ಕುಡಿಯುವ ನೀರು ಸ್ವಚ್ಛತೆ ಚರಂಡಿಗಳ ಸ್ವಚ್ಛತೆ ಸಮರ್ಪಕ ರಸ್ತೆಗಳು ಇಲ್ಲದೆ ಅಭಿವೃದ್ಧಿಯಲ್ಲಿ ಮರೀಚಿಕೆ ಯಾಗಿದೆ ಅರಳೇರಿ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಈ ಗ್ರಾಮಕ್ಕೆ ಇದುವರೆಗೂ ಭೇಟಿ ನೀಡದೇ ಬೇಜವಾಬ್ದಾರಿಯಿಂದ ನಡೆದುಕೊಂಡು ಮೂಲ ಭೂತ ಸೌಕರ್ಯ ಮರೀಚಿಕೆ ಯಾಗಿ ಗ್ರಾಮದಲ್ಲಿರುವ ಸಮಸ್ಯೆಗಳು ಬಗೆಹರಿಸುವಲ್ಲಿ ಅರಳೇರಿ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ವಿಫಲರಾಗಿದ್ದಾರೆ ಎಂದು ದೂರಿದರು.

ಗ್ರಾಮ ಪಂಚಾಯಿತಿ ಸದಸ್ಯ ಶಾಮಣ್ಣ ಮಾತನಾಡಿ, ಗ್ರಾಮದಲ್ಲಿ ಕೆಲವು ಮಹಿಳೆಯರು ಕೂಲಿನಾಲಿ ಮಾಡಿಕೊಂಡು ಜೀವನ ನಡೆಸುತ್ತಿದ್ದು, ನೀರಿಗಾಗಿ ಕೂಲಿ ಕೆಲಸಕ್ಕೆ ಹೋಗದೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಶುದ್ಧ ಕುಡಿಯುವ ನೀರಿನ ಸಮಸ್ಯೆ ಚರಂಡಿಗಳ ಸ್ವಚ್ಛತೆ ಕೈಗೊಳ್ಳುವಂತೆ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷರ ಗಮನಕ್ಕೆ ತಂದರು ಸಹ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಸಹ ಯಾವುದೇ ರೀತಿಯ ಪ್ರಯೋಜನವಾಗಿಲ್ಲ. ಈಗಲಾದರೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಎಚ್ಚೆತ್ತುಕೊಂಡು ಗ್ರಾಮದಲ್ಲಿ ಸ್ವಚ್ಛತೆ ಇಲ್ಲದೆ ರೋಗರುಜುನಗಳು ಬಾರದಂತೆ ಮುನ್ನೆಚ್ಚರಿಕೆವಹಿಸಿ ಸ್ವಚ್ಛತೆ ಕಾರ್ಯ ಕೈಗೊಳ್ಳಬೇಕು ಅಲ್ಲದೆ ಬೇಸಿಗೆ ಸಮೀಪಿಸಿರುವುದರಿಂದ ನೀರಿಗೆ ಅಹಕಾರ ಉಂಟಾಗಿದ್ದು, ಜಲಗಾರ ಸಮರ್ಪಕವಾಗಿ ನೀರು ಸರಬರಾಜು ಮಾಡಲು ಸೂಚಿಸುವಂತೆ ಒತ್ತಾಯಿಸಿದರು.

# ದೇಶದ ಅಭಿವೃದ್ಧಿಯಲ್ಲಿ ಸಿಂಹ ಪಾಲು ಕೃಷಿಕರದ್ದು



**ಮುಳಬಾಗಿಲು:** ದೇಶದ ಅಭಿವೃದ್ಧಿಯಲ್ಲಿ ಸಿಂಹ ಪಾಲು ಕೃಷಿ ಕ್ಷೇತ್ರದ್ದಾಗಿದೆ. ರೈತರ ಪರಿಶ್ರಮದಿಂದ ದೇಶಕ್ಕೆ ಅನ್ನ ನೀಡುತ್ತಿದ್ದಾರೆ, ಈ ವಲಯವನ್ನು ಆಳಿದ ಸರ್ಕಾರಗಳು, ಈಗ ಆಳುತ್ತಿರುವ ಸರ್ಕಾರಗಳು ನಿರ್ಲಕ್ಷಿಸಿದ ಪರಿಣಾಮ ಕೃಷಿಕ ಸಂಕಷ್ಟಕ್ಕೆ ಒಳಗಾಗಿದ್ದಾನೆ ಅವನಿದ್ದರೆ ಮಾತ್ರ ದೇಶ ಉಳಿದಿತ್ತು ಈ ಬಗ್ಗೆ ಅಧಿಕಾರಸ್ಥರು ಎಲ್ಲಾ ಹಂತಗಳಲ್ಲೂ ಅರಿತು ಕಾರ್ಯನಿರ್ವಹಿಸಬೇಕು ಅದಕ್ಕೆ ರೈತ ಜಾಗೃತಿ ಆಗಬೇಕಾಗಿದೆ ಎಂದು ಭಾರತೀಯ ಕಿಸಾನ್ ಸಂಘದ ದಕ್ಷಿಣ ಪ್ರಾಂತ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ. ಎನ್. ನಾರಾಯಣಸ್ವಾಮಿ ಹೇಳಿದ್ದಾರೆ.

ಇಲ್ಲಿನ ಕಿಸಾನ್ ಸಂಘದ ಕಾರ್ಯಾಲಯದಲ್ಲಿ ಮಂಗಳವಾರ ಏರ್ಪಡಿಸಿದ್ದ ಭಾರತೀಯ ಕಿಸಾನ್ ಸಂಘದ ಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ರಾಷ್ಟ್ರದ ಹಿತಚಿಂತಕ ದಿವಂಗತ ದತ್ತೋಪಂತ ಟೆಂಗಡಿ ರವರು ಕೃಷಿ ಮತ್ತು ರೈತರು ಉಳಿದರೆ ದೇಶ ಉಳಿದಿತ್ತು ಎಂಬ ದೃಷ್ಟಿಯಿಂದ ಸಂಘವನ್ನು ರೈತರಿಂದ ರೈತರಿಗಾಗಿ ರೈತರಗೋಸ್ಕರ ರೈತ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತದ ಅತಿ ರೈತ ಸಂಘಟನೆ ಭಾರತೀಯ ಕಿಸಾನ್ ಸಂಘ 1979 ಮಾರ್ಚ್ 4ರಂದು ರಾಜಸ್ಥಾನದ ಕೋಟಾ ಗ್ರಾಮದಲ್ಲಿ ಸ್ಥಾಪನೆ ಮಾಡಿದರು ದೇಶದ ಎಲ್ಲಾ ಕಡೇ ಇರುವ ಏಕೈಕ ರೈತ ಸಂಘಟನೆಯಾಗಿದೆ ಎಂದರು.

ಸಾವಯವ ಕೃಷಿ, ಗೋ ಸಂರಕ್ಷಣೆ, ಜಲ ಸಂರಕ್ಷಣೆ, ಪರಿಸರ ಸಂರಕ್ಷಣೆ ಕಾರ್ಯ ಮಾಡುತ್ತಾ ಸಮಾಜಕ್ಕೆ ವಿಷಮುಕ್ತ ಆಹಾರ ಒದಗಿಸಲು ಆಗಿನಿಂದಲೇ ಕಿಸಾನ್ ಸಂಘ ಕಾರ್ಯ ನಿರ್ವಹಿಸಿಕೊಂಡು ಬಂದಿದೆ, ಜೊತೆಗೆ ರೈತರಗಾಗುತ್ತಿರುವ ತೊಂದರೆಗಳ ಬಗ್ಗೆ ಧ್ವನಿ ಎತ್ತಿ ಹೋರಾಟ ಮಾಡುವ ಪೇರೇಪಣೆಯನ್ನು ನೀಡಿಕೊಂಡು ಬಂದಿದೆ ಎಂಬಮಾಹಿತಿ ನೀಡಿದರು.

ಸಾವಯವ, ನೈಸರ್ಗಿಕ ಕೃಷಿ, ಮಣ್ಣಿನ ಮಹತ್ವ ಮತ್ತು ಮಣ್ಣಿನ ಆರೋಗ್ಯದ ಬಗ್ಗೆ ಸಾವ್ಯ ಕೃಷಿ ತಜ್ಞ ತೊಂಡಹಳ್ಳಿ ಪ್ರಭಾಕರ್ ಮಾಹಿತಿ ನೀಡಿದರು. ಗ್ರಾಮ ವಿಕಾಸ್ ಪ್ರಾಂತೀಯ ಸಹ ಪ್ರಮುಖ್ ನಾರಾಯಣಪ್ಪ, ಕಿಸಾನ್ ಸಂಘದ ದಕ್ಷಿಣ ಪ್ರಾಂತ ಉಪಾಧ್ಯಕ್ಷ ಎ. ಅಪ್ಪಾಜಿ ಗೌಡ, ಜಿಲ್ಲಾಧ್ಯಕ್ಷ ಕೆ. ರಘುನಾಥ್ ರೆಡ್ಡಿ, ಖಜಾಂಚಿ ವಕೀಲ ವಿ. ಜಯಪ್ಪ, ನಿವೃತ್ತ ಮುಖ್ಯೋಪಾಧ್ಯಾಯ ಹಳೇಕುಪ್ಪ ಚಂಗರಾಯಪ್ಪ ಮಾತನಾಡಿದರು.

ಕಿಸಾನ್ ಸಂಘದ ತಾಲೂಕು ಅಧ್ಯಕ್ಷ ಉಗಣಿ ಆರ್. ನಾರಾಯಣಗೌಡ, ಖಜಾಂಚಿ ಕೆ. ಸಿ. ಹಳ್ಳಿ ಕೃಷ್ಣಪ್ಪ, ಉಪಾಧ್ಯಕ್ಷ ಮಿಟ್ಟೂರು ಶಂಕರಪ್ಪ, ತಿರುಮನಹಳ್ಳಿ ಚಂದ್ರಶೇಖರ್, ಮಹಿಳಾ ಪ್ರಮುಖ್ ಮುಡಿಯನೂರು ಜಯಲಕ್ಷ್ಮಮ್ಮ, ನಿವೃತ್ತ ಮುಖ್ಯ ಶಿಕ್ಷಕ ಯಲವಹಳ್ಳಿ ರಮೇಶ್, ಮುಖಂಡರಾದ ದೊಮ್ಮಸಂದ್ರ ತಮ್ಮಣ್ಣ, ಮಾರಾಂಡಹಳ್ಳಿ ನಾರಾಯಣಸ್ವಾಮಿ, ವೇಣುಗೋಪಾಲ್ ಮತ್ತಿತರರು ಇದ್ದರು.

# ಸ್ಥಗಿತಗೊಂಡ ಶುದ್ಧ ಕುಡಿಯುವ ನೀರಿನ ಘಟಕ

**ಮಾಲೂರು:** ತಾಲ್ಲೂಕಿನ ನಲ್ಲಾಂಡಹಳ್ಳಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ವಹಣೆ ಇಲ್ಲದೆ ಸ್ಥಗಿತಗೊಂಡು ಎಂಟು ತಿಂಗಳಾದರೂ ಸಹ ನಿರ್ವಹಣೆ ಮಾಡದೇ ಗ್ರಾಮ ಪಂಚಾಯಿತಿ ರಿಪೇರಿ ಮಾಡಿಸಿ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ನಿರ್ಲಕ್ಷ ವಹಿಸಿದ್ದಾರೆ ಎಂದು ಗ್ರಾಮಸ್ಥರು ದೂರಿದ್ದಾರೆ.

ತಾಲೂಕಿನ ರಾಜೇನಹಳ್ಳಿ ಗ್ರಾಮ ವ್ಯಾಪ್ತಿಯ ನಲ್ಲಾಂಡಳ್ಳಿ ಗ್ರಾಮದಲ್ಲಿ ಹತ್ತು ವರ್ಷಗಳ ಹಿಂದೆ ಶುದ್ಧ ಕುಡಿಯುವ ನೀರಿನ ಘಟಕ ಒಂದನ್ನು ಖಾಸಗಿ ಸಂಸ್ಥೆಯವರು ನಿರ್ಮಿಸಿ ಕೊಟ್ಟಿದ್ದರು. ಶುದ್ಧಕುಡಿಯುವ ನೀರಿನ ಘಟಕವನ್ನು ಮುನಿಸ್ವಾಮಿ ಗೌಡ ಎಂಬುವವರು ನಿರ್ವಹಣೆ ಮಾಡುತ್ತಿದ್ದರು ಆದರೆ ಎಂಟು ತಿಂಗಳ ಹಿಂದೆ ಶುದ್ಧ ಕುಡಿಯುವ ನೀರಿನ ಘಟಕವನ್ನು ರಾಜೇನಹಳ್ಳಿ ಗ್ರಾಮ ಪಂಚಾಯಿತಿ ವಶಕ್ಕೆ ನೀಡಲಾಗಿತ್ತು.

ಆದರೆ ಶುದ್ಧ ಕುಡಿಯುವ ನೀರಿನ ಘಟಕವು ದುರಸ್ತಿಯಾಗಿದ್ದ ಕಾರಣ ಶುದ್ಧ ಕುಡಿಯುವ ನೀರಿಗಾಗಿ ಎರಡು ಕಿಲೋಮೀಟರ್ ದೂರದಲ್ಲಿರುವ ತಿಪ್ಪಸಂದ್ರ ಹಾಗೂ ಐದು ಕಿಲೋಮೀಟರ್ ದೂರದಲ್ಲಿರುವ ಗ್ರಾಮಗಳಿಗೆ ದ್ವಿಚಕ್ರ ವಾಹನ ಇರುವವರು ಹೋಗಿ ನೀರನ್ನು ತರುತ್ತಾರೆ ದ್ವಿಚಕ್ರ ವಾಹನ ಇಲ್ಲದವರು ಓವರ್ ಟ್ಯಾಂಕಿನ ನೀರನ್ನೆ ಕುಡಿಯಲು ಬಳಸುತ್ತಾರೆ ಸಾವಿರದ ಇನ್ನೂರು ಅಡಿನಿಂದ ಬರುವ ನೀ ಕೊಳವೆಬಾವಿ ನೀರು ಫ್ಲೋರೈಡ್ ನೀರು ಈ ನೀರನ್ನೆ ಕೆಲವರಿಗೆ ಕಾಲುಗಳನ್ನು ಮೊಣಕಾಲು ನಾವು ಉಲ್ಬಣಗೊಂಡಿದೆ ಶುದ್ಧ ಕುಡಿಯುವ ನೀರಿನ ಘಟಕವನ್ನು ದುರಸ್ತಿ ಮಾಡುವಂತೆ ಗ್ರಾಮಸ್ಥರು ಗ್ರಾಮ ಪಂಚಾಯಿತಿಗೆ ದೂರು ನೀಡಿದರು.



ಯಾವುದೇ ಪ್ರಯೋಜನವಾಗಲಿಲ್ಲ ಸದಸ್ಯರು ಸಹ ಗಮನ ಹರಿಸುತ್ತಿಲ್ಲ. ಇದರಿಂದ ಗ್ರಾಮದಲ್ಲಿ ಕುಡಿಯುವ ನೀರಿಗೆ ಅಹಂಕಾರ ಉಂಟಾಗಿದ್ದು, ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನ ಆರಿಸಿ ಶುದ್ಧ ಕುಡಿಯುವ ನೀರಿನ ಘಟಕವನ್ನು ದುರಸ್ತಿಗೊಳಿಸಿ ಗ್ರಾಮದ ಜನತೆಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವಂತೆ ಒತ್ತಾಯಿಸಿದ್ದಾರೆ.

## ವಿಶೇಷ ಚೇತನ ಮಕ್ಕಳಿಗೆ ಅನ್ನದಾಸೋಹ

**ಆನೇಕಲ್:** ಶಾಂತಿಪುರ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಚಿಕ್ಕನಾಗಮಂಗಲ ಗುರು ವೆಂಕಟೇಶ್ ರವರ ಹುಟ್ಟು ಹಬ್ಬವನ್ನು ಆನೇಕಲ್ ಪಟ್ಟಣದ ಗ್ರಂಥಾಲಯದ ಆವರಣದಲ್ಲಿ ಇರುವಸಂವಿಧಾನ ಶಿಲ್ಪಿ ಡಾ॥ ಬಿ.ಆರ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮುಖೇನ ಹಾಗೂ ಆನೇಕಲ್ ಪಟ್ಟಣದ ಶ್ರೀ ಶನೇಶ್ವರ ಸ್ವಾಮಿ ದೆವಿವಸ್ಥಾನದ ಸಮೀಪ ಇರುವ ಸ್ನೇಹ ಭಾರತಿ ಬುದ್ಧಿ ವಿಶೇಷ ಚೇತನ ಮಕ್ಕಳ ಉಚಿತ ವಸತಿಯುತ ಪಾಠಶಾಲೆಯಲ್ಲಿ ಒಂದು ದಿನದ ಅನ್ನದಾಸೋಹ ಮಾಡುವ ಮುಖೇನ ಚಿಕ್ಕನಮಂಗಲ ವೆಂಕಟೇಶ್ ಗುರು ರವರ ಹುಟ್ಟುಹಬ್ಬವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ಪೂರು ಗ್ರಾಮ ಪಂಚಾಯಿತಿ ಸದಸ್ಯ ಹಾಲ್ದೇನಹಳ್ಳಿ ಮುನಿರಾಜು ಶೆಟ್ಟಿ, ಆನೇಕಲ್ ಪುರಸಭಾ ಸದಸ್ಯರಾದ ಚೇತನ್, ಬಿ. ನಾಗರಾಜು, ಕರ್ಪೂರು ಬನ್ನು ಮಂಜು, ವಿ.ಎಸ್.ಎಸ್.ಎನ್ ಬ್ಯಾಂಕ್ ನ ಅಧ್ಯಕ್ಷರಾದ ಚಿಕ್ಕ ಹಾಗಡೆ ತಿಲಕ್ ಗೌಡ, ವೆಂಕಟೇಶ್ ಮೂರ್ತಿ, ಮುಖಂಡರಾದ ಕಪನವೀನ್, ಹರೇಹಳ್ಳಿ ಮಂಜು, ಆನೇಕಲ್ ದೇವಿ ಪ್ರಸಾದ್ ಶೆಟ್ಟಿ, ತಿಮ್ಮರಾಜು ಗೌಡ, ಮಂಚನಹಳ್ಳಿ ರಾಜು,. ಚಂದ್ರು, ಕಾಂತರಾಜ್, ಮನು, ಹಾಗೂ ಮತ್ತಿತ್ತರರು ಹಾಜರಿದ್ದರು.



# ಸರ್ವರಿಗೂ ಅವಕಾಶ ನೀಡುವ ಪಕ್ಷ ಕಾಂಗ್ರೆಸ್



**ಕೆ.ಆರ್.ಪೇಟೆ:** ಕಾಂಗ್ರೆಸ್ ಪಕ್ಷ ಸರ್ವರಿಗೂ ಅವಕಾಶಗಳನ್ನು ನೀಡಿ ಕೆಲಸ ಮಾಡಲು ಅನುವು ಮಾಡಿಕೊಡುವ ಪಕ್ಷವಾಗಿದೆ ಎಂದು ಕಾಂಗ್ರೆಸ್ ಮುಖಂಡ ಹಾಗೂ ಮಿತ್ರ ಫೌಂಡೇಷನ್ ಅಧ್ಯಕ್ಷ ವಿಜಯ್ ರಾಮೇಗೌಡ ತಿಳಿಸಿದರು.

ಅವರು ಬೂಕನಕೆರೆಯ ತಮ್ಮ ನಿವಾಸದಲ್ಲಿ ತಾಲ್ಲೂಕು ಭೂ ನ್ಯಾಯಮಂಡಳಿ ನೂತನ ಸದಸ್ಯರಾಗಿ ನೇಮಕಗೊಂಡ ತಾ.ಪಂ ಮಾಜಿ ಸದಸ್ಯ ಮಾಧವಪ್ರಸಾದ್ ಹಾಗೂ ತಾಲ್ಲೂಕು ಕೆಡಿಪಿ ಸದಸ್ಯರಾಗಿ ನೇಮಕಗೊಂಡಿದ್ದ ಬೂಕನಕೆರೆ ಮಲ್ಲಿಕಾರ್ಜುನ್ ಅವರನ್ನು ಅಭಿನಂದಿಸಿ ಮಾತನಾಡಿದರು.

ಸ್ವತಂತ್ರ್ಯ ಭಾರತದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತನ್ನದೇ ಆದ ಇತಿಹಾಸವಿದೆ. ಈ ಹಿಂದಿನಿಂದಲೂ ಬಡವರ, ರೈತರ, ಹಿಂದುಳಿದವರ ಹಾಗೂ ಎಲ್ಲಾ ವರ್ಗದ ಜನರ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಿ ಜನಕಲ್ಯಾಣಕ್ಕಾಗಿ ಶ್ರಮಿಸಿದೆ. ಇದರ ಫಲವಾಗಿ ದೇಶದ ಜನತೆ ಹತ್ತಾರು ಬಾರಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಕೆಲಸ ಹಂಚಿಕೆಯ ವಿಷಯದಲ್ಲಿ ಪಕ್ಷದ ವರಿಷ್ಟರು ಸೂಕ್ತ ಸಮಯದಲ್ಲಿ ಸೂಕ್ತ ತೀರ್ಮಾನ ನೀಡಲಿದ್ದು ತಾಲ್ಲೂಕಿನ ಇಬ್ಬರು ಪಕ್ಷ ಸಂಘಟಕರಿಗೆ ಜವಾಬ್ದಾರಿ ನೀಡಿದೆ. ಮುಂದಿನ ದಿನಗಳಲ್ಲಿ ಕಾರ್ಯಕರ್ತರು ಪಕ್ಷವನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಅಧಿಕಾರಕ್ಕೆ ತರಲು ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಅಂಜನಿಗೌಡ, ನಾಟನಹಳ್ಳಿ ಭೀಮಣ್ಣ, ದೇವರಾಜು, ಮತ್ತಿಕೆರೆ ನಾಗಣ್ಣ, ಬಣ್ಣನಕೆರೆರವಿ, ವಿಜಯ್‌ರಾಮೇಗೌಡ ಆಪ್ತ ಸಹಾಯಕ ಬಸವರಾಜು ಸೇರಿದಂತೆ ಇತರರು ಹಾಜರಿದ್ದರು.

# ಪಕ್ಷದ ಬಲವರ್ಧನೆಗಾಗಿ ಎಲ್ಲರೂ ಕೈ ಜೋಡಿಸಿ

**ದೇವನಹಳ್ಳಿ:** ಮುಂದಿನ ದಿನಗಳಲ್ಲಿ ಬರಲಿರುವ ತಾ.ಪಂ.ಹಾಗೂ ಜಿ.ಪಂ.ಚುನಾವಣೆಗೆ ತಾಲೂಕಿನ ಪ್ರತಿಯೊಬ್ಬ ಮುಖಂಡ, ಕಾರ್ಯಕರ್ತರೊಂದಿಗೆ ಎಲ್ಲರೂ ಒಗ್ಗೂಡಿ ನನ್ನೊಂದಿಗೆ ಪಕ್ಷದ ಬಲವರ್ಧನೆಗಾಗಿ ಕೈಜೋಡಿಸಿ ಗೆಲುವಿಗೆ ಕಾರಣಕರ್ತರಾಗಬೇಕು ಎಂದು ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಹೇಳಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿಮಂದಿರ ದಲ್ಲಿ ಜೆಡಿಎಸ್ ಪಕ್ಷದಿಂದ ಪಿ.ಎಲ್.ಡಿ ಬ್ಯಾಂಕ್, ಟಿ.ಎ.ಪಿ.ಎಂ.ಎಸ್ ನಿರ್ದೇಶ ಕರು ಹಾಗೂ ಪುರಸಭೆ ಉಪಾಧ್ಯಕ್ಷರಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾಲೂಕಿನ ಸಹಕಾರಿ ಸಂಘಗಳಲ್ಲಿ ಚುನಾಯಿತರಾದ ನಿರ್ದೇಶಕರಿಗೆ ಸನ್ಮಾನಿಸಿದ್ದೇವೆ ಮುಂದಿನ ದಿನಗಳಲ್ಲಿ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಆಯ್ಕೆಯಾದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಹಾಗೂ ವಿ.ಎಸ್.ಎಸ್.ಎನ್ ನಿರ್ದೇಶಕರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತೇವೆ. ಸನ್ಮಾನ ಕಾರ್ಯಕ್ರಮದ ಏರ್ಪಡಿಸುತ್ತಿರುವುದು ಪಕ್ಷದ ಬಲವರ್ದನೆ ಹಾಗೂ ಸಂಘಟನೆಗಾಗಿ ಮುಂಬರುವ ಚುನಾವಣೆಯನ್ನು ದೃಷ್ಟಿಕೋನದಲ್ಲಿಟ್ಟುಕೊಂಡು ಎಲ್ಲರೂ ಒಗ್ಗಟ್ಟಿನಿಂದ ಚುನಾವಣೆಯಲ್ಲಿ ಸ್ಪರ್ಧಿಸಲು ಕಾರ್ಯಕರ್ತರನ್ನು ಹುರಿದುಂಬಿಸಲು ಈಗಿನಿಂದಲೇ ಪ್ರಾರಂಭಿಸುತ್ತಿದ್ದೇವೆ ಎಂದರು.

ಇದೆ ವೇಳೆ ಜೆಡಿಎಸ್ ಜಿಲ್ಲಾಧ್ಯಕ್ಷ ಮುನೇಗೌಡ, ತಾಲೂಕು ಅಧ್ಯಕ್ಷ ಆರ್. ಮುನೇಗೌಡ ,ಪ್ರಧಾನ ಕಾರ್ಯದರ್ಶಿ ಜಿ.ಎ.ರವೀಂದ್ರ, ಜೆಡಿಎಸ್ ಟೌನ್ ಅಧ್ಯಕ್ಷ ಮುನಿನಂಜಪ್ಪ, ಪುರಸಭೆ ಮಾಜಿ ಸದಸ್ಯ ವಿ.ಗೋಪಾಲ್, ಮುಖಂಡರುಗಳಾದ ದೊಡ್ಡಸಣ್ಣೆ ಮುನಿರಾಜು,ಎಸ್.ಎಲ್. ನಾರಾಯಣಸ್ವಾಮಿ , ಕಾಮೇನಹಳ್ಳಿ ರಮೇಶ್, ಪಟಾಲಪ್ಪ, ಭೀಮರಾಜು ಬಿ.ಎಸ್,ಎ .ದೇವರಾಜ್, ಹೊಸಹಳ್ಳಿ ಟಿ .ರವಿ ,ಜೊನ್ನಳ್ಳಿ ಮುನಿರಾಜು, ರಾಜಣ್ಣ.ಸಿ.ಎಸ್, ಎಂ.ಬಸವರಾಜು,ಚೌಡಪ್ಪನಹಳ್ಳಿ.ಎಂ. ಶಂಕರ್, ಹನುಮಪ್ಪ.ಬಿ.ಕೆ, ಆಶಾ,ಅನ್ನಪೂರ್ಣ,ಮೀನಾಕ್ಷಿ, ಪಿ.ಎಲ್.ಡಿ ಬ್ಯಾಂಕ್, ಟಿ.ಎ.ಪಿ.ಸಿ.ಎಂ.ಎಸ್‌ನ ನಿರ್ದೇಶಕರು ತಾಲೂಕಿನ ಮುಖಂಡರು ಕಾರ್ಯಕರ್ತರು ಭಾಗಿಯಾಗಿದ್ದರು.



# ನೇರ ಸಂದರ್ಶನ ನಾಳೆ

**ಚಾಮರಾಜನಗರ:** ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆ ಹಾಗೂ ಚಾಮರಾಜನಗರ ರಾಜ್ ಬಯೋ ಅರ್ಗಾನಿಕ್ಸ್ ಹಾಗೂ ವಿ.ಎಲ್.ಕೆ. ಅಗ್ರಿ ವೆಂಚರ್ ಮತ್ತು ಡೆವಲರ್ಸ್ ಇವರ ಸಹಯೋಗದಲ್ಲಿ ಮಾರ್ಕೆಟಿಂಗ್ ಅಸೋಸಿಯೇಟ್ ಹುದ್ದೆಗಳ ನೇಮಕಾತಿಗಾಗಿ ಮಾ.6 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಸಲಾಗುವುದು.

ರಾಜ್‌ಬಯೋ ಅರ್ಗಾನಿಕ್ಸ್ ಹಾಗೂ ವಿ.ಎಲ್.ಕೆ. ರಾಜ್ ಅಗ್ರಿ ವೆಂಚರ್ ಮತ್ತು ಡೆವಲರ್ಸ್ ಸಂಸ್ಥೆಯಲ್ಲಿ ಮಾರ್ಕೆಟಿಂಗ್ ಅಸೋಸಿಯೇಟ್ 25 ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿಯುಸಿ, ಯಾವುದೇ ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿರುವ 24 ವರ್ಷ ಮೇಲ್ಪಟ್ಟ ಯುವಕರು ಮತ್ತು 21 ವರ್ಷ ಮೇಲ್ಪಟ್ಟ ಯುವತಿಯರು ಸಂದರ್ಶನದಲ್ಲಿ ಭಾಗವಹಿಸಬಹುದು.

ಅಭ್ಯರ್ಥಿಗಳು ತಮ್ಮ ಸ್ವ ವಿವರ (ಬಯೊಡೇಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗಾಧಿಕಾರಿಗಳ ಕಚೇರಿ ಅಥವಾ ದೂ.ಸಂ 08226–224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರ ಪ್ರತಿಭಟನೆ

**ಯಳಂದೂರು:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೊಳ್ಳೇಗಾಲ ತಾಲೂಕು ಗುಂಡಾಲ್ ಜಲಾಶಯದ ಹಳೆ ಸ್ಥಿರ ಅಚ್ಚುಕಟ್ಟು ವ್ಯಾಪ್ತಿಯ ರೈತರ ಹಿತರಕ್ಷಣಾ ಸಂಘದ ಸದಸ್ಯರು ಕೈಗೊಂಡಿರುವ ಪಾದಯಾತ್ರೆ ಮಂಗಳವಾರ ಮಧ್ಯಾಹ್ನ ಪಟ್ಟಣ ತಲುಪಿತು.

ಪಟ್ಟಣದ ಎಸ್‌ಬಿಐ ವೃತ್ತದಲ್ಲಿ ಜಮಾವಣೆಗೊಂಡ ರೈತರು ರಾಜ್ಯ ಸರ್ಕಾರದ ವಿರುದ್ಧ, ಜಿಲ್ಲಾಡಳಿತದ ವಿರುದ್ಧ ದಿಕ್ಕಾರಗಳನ್ನು ಕೂಗಿ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರೈತ ಹಾಗೂ ಹಸಿರುಸೇನೆ ಏಕೀಕರಣದ ಜಿಲ್ಲಾಧ್ಯಕ್ಷ ಗೌಡಹಳ್ಳಿ ಸೋಮಣ್ಣ ಮಾತನಾಡಿ, ಸರ್ಕಾರಿ ಆಸ್ತಿಗಳನ್ನು ಒತ್ತುವರಿ ಮಾಡಲಾಗಿದೆ.

ಸಾವಿರಾರು ಎಕರೆ ಭೂಮಿ ಒತ್ತುವರಿಯಾಗಿದ್ದರೂ ಈ ಸಮಸ್ಯೆಯನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಪರಿಹರಿಸಿಲ್ಲ. ಇಂತಹ ಆರ್‌ಟಿಸಿ ದಾಖಲಾತಿಗಳನ್ನು ವಜಾಗೊಳಿಸಬೇಕು, ಸರ್ಕಾರಿ ಆಸ್ತಿಗಳನ್ನು ಮೂಲ ದಾಖಲಾತಿಯಂತೆ ಇ–ಸ್ವತ್ತು ಮಾಡಬೇಕು, ಕೊಳ್ಳೇಗಾಲ ತಾಲೂಕು ಟಗರಪುರ ಗ್ರಾಮದಿಂದ ಹನೂರಿನ ಗೋಪಿನಾಥಂ ವರೆಗಿನ ರೈತರ ಜಮೀನುಗಳಿಗೆ ಹಕ್ಕುಪತ್ರ ನೀಡಿ ಇ–ಸ್ವತ್ತನ್ನು ಮಾಡಿಕೊಡಬೇಕು. ರಾಜ್ಯ ಸರ್ಕಾರ ಶಿಕ್ಷಣಕ್ಕೆ ಒತ್ತು ನೀಡುತ್ತಿಲ್ಲ. ರಾಜ್ಯದ ರೈತರ ಹಿತದೃಷ್ಟಿಯಿಂದ ಸರ್ಕಾರ ಕೆಲಸ ಮಾಡುತ್ತಿಲ್ಲ. ತಮ್ಮ ಖಜಾನೆಯನ್ನು ತುಂಬಿಸಿಕೊಳ್ಳಲು ಜನರನ್ನು ಮದ್ಯದ ದಾಸರಾಗಿ ಮಾಡಲು ಹೊರಟಿದೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಯನ್ನು ಸರ್ಕಾರ ಕಡೆಗಣಿಸಿದೆ. ಜಿಲ್ಲೆಗೆ ಹೊಸ ನೀರಾವರಿ ಯೋಜನೆಯನ್ನು ತಂದು ಇಲ್ಲಿನ ರೈತರ ಹಿತ ಕಾಪಾಡಬೇಕು. ಜಿಲ್ಲೆಯ ವಿವಿಯನ್ನು ವಜಾಗೊಳಿಸುವ ನಿರ್ಣಯವನ್ನು ಕೈಬಿಡಬೇಕು ಎಂದು ಆಗ್ರಹಿಸಿ ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ ಪಾದಯಾತ್ರೆ ಮಾಡಲಾಗುತ್ತಿದ್ದು ಮಂಗಳವಾರ ಸಂಜೆ ಇದು ಸಂತೆಮರಹಳ್ಳಿಯಲ್ಲಿ ಪಾದಯಾತ್ರೆ ಮುಗಿಸಿ ಮತ್ತೆ ಬುಧವಾರ ಬೆಳಿಗ್ಗೆ ಚಾಮರಾಜನಗರಕ್ಕೆ ತಲುಪಿ ಜಿಲ್ಲಾಡಳಿತದ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಆಲ್ಕೆರೆ ಅಗ್ರಹಾರ ನಾಗರಾಜು, ಹಿರಿಯ ಹೋರಾಟಗಾರ ಬೊಕ್ಕಹಳ್ಳಿ ನಂಜುಂಡಸ್ವಾಮಿ, ಸೋಮಣ್ಣ, ದಶರಥ, ರಾಮಕೃಷ್ಣ, ವೀರಭದ್ರಸ್ವಾಮಿ ಸೇರಿದಂತೆ ಹಲವರು ಇದ್ದರು.




# ವಲಸಿಗರಿಗೆ ಪರವಾನಿಗೆ ನೀಡದಂತೆ ಮನವಿ

**ಶಿಡ್ಲಘಟ್ಟ:** ಹೊರ ರಾಜ್ಯಗಳಿಂದ ವಲಸೆ ಬಂದು ಕ್ಷೌರಿಕ ಅಂಗಡಿ ತೆರೆಯಲು ಅನುಮತಿ ಪರವಾನಿಗೆ ನೀಡದಂತೆ ತಡೆ ಹಿಡಿಯಬೇಕೆಂದು ಕಾರ್ಮಿಕ ಇಲಾಖೆಯ ವೃತ್ತ ನಿರೀಕ್ಷಕಿ ವಿಜಯಲಕ್ಷ್ಮಿ ಅವರಿಗೆ ಮನವಿಯನ್ನು ನೀಡಿದರು.

ಸುಮಾರು ವರ್ಷಗಳಿಂದ ವಂಶಪರಂಪರೆಯಾಗಿ ನಮ್ಮ ಕುಲ ವೃತ್ತಿಯಾದ ಕ್ಷೌರಿಕ ವೃತ್ತಿಯನ್ನು ನಂಬಿ ಸಾವಿರಾರು ಕುಟುಂಬಗಳು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಜೀವನ ಸಾಗುಸುತ್ತಿದ್ದು ಇತ್ತೀಚಿಗೆ ಕೆಲ ದಿನಗಳಿಂದ ನಗರದಲ್ಲಿ ಹಾಗೂ ಗ್ರಾಮೀಣ ಬಾಗದ ವ್ಯಾಪ್ತಿಯಲ್ಲಿ ಹೊರ ರಾಜ್ಯಗಳಿಂದ ಬಂದು ನಗರದಲ್ಲಿ ಹೊಸದಾಗಿ ಕ್ಷೌರಿಕ ಅಂಗಡಿಗಳನ್ನು ತೆರೆಯುತ್ತಿದ್ದು ಈ ಅಂಗಡಿಗಳಲ್ಲಿ ಕಾನೂನು ಬಾಹಿರ ಚಟುವಟಿಕೆ ನಡೆಸಬಹುದು ಎಂಬ ಅನುಮಾನವಿದೆ ಇದರ ಪರಿಣಾಮ ನಮ್ಮ ನಗರ ಸ್ಥಳಿಯರ ಮೇಲೆಯು ಬೀರುವ ಸಾದ್ಯತೆ ಇದ್ದು ಹೊರ ರಾಜ್ಯದಿಂದ ಬಂದು ಕ್ಷೌರಿಕ ಅಂಗಡಿಯಲ್ಲಿ ಯಾವ ಕೆಲಸ ಮಾಡುತ್ತಾರೊ ಗೊತ್ತಿಲ್ಲ ನಮ್ಮ ಕುಲ ವೃತ್ತಿಯ ಸಂಘವಾದ ಸವಿತಾ ಸಮಾಜದಲ್ಲಿ ಸದಸ್ಯತ್ವ ಪಡೆದಿಲ್ಲ ಇವರಿಗೆ ಕುಲ ವೃತ್ತಿಯ ಕಸುಬುವಿನ ಅನುಭವವಿಲ್ಲ ಇದರಿಂದ ನಮ್ಮ ವೃತ್ತಿ ಜೀವನದ ಮೇಲೆ ಜನ ಸಾಮಾನ್ಯರಿಗೆ ನಂಬಿಕೆ ಕಳೆದುಕೊಳ್ಳಬಹುದು ಇದರ ಪರಿಣಾಮದಿಂದ ನಮಗೆ ಕೆಲಸವಿಲ್ಲದೆ ಆರ್ಥಿಕ ಸಂಕಷ್ಟ ಹೆದರಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಆದ ಕಾರಣ ತಾವು ದಯವಿಟ್ಟು ಹೊರ ರಾಜ್ಯಗಳಿಂದ ಬಂದು ಕ್ಷೌರಿಕ ಅಂಗಡಿಗಳನ್ನು ತೆರೆಯಲು ಪರವಾನಿಗೆ ನೀಡಬಾರದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಸವಿತಾ ಸಮಾಜ ಅಧ್ಯಕ್ಷ ನಾರಾಯಣ ಸ್ವಾಮಿ, ಪದಾಧಿಕಾರಿಗಳಾದ ಪವನ್ ಕುಮಾರ್, ಲೋಕೇಶ್, ಬುಜ್ಜಿ ನಾಯಕ್, ಅನಿಲ್,ವೇಣು, ಅರವಿಂದ್, ಆನಂದ್,ನವೀನ್,ರಾಜಪ್ಪ, ನವೀನ್ ಮುಂತಾದವರು ಪಾಲ್ಗೊಂಡಿದ್ದರು.



# ಚಂಡೀಗಢದಲ್ಲಿ ಪ್ರತಿಭಟನೆಗೆ ಸಜ್ಜಾದ ಪಂಜಾಬ್ ರೈತರು



**ಚಂಡೀಗಢ:** ಸಂಯುಕ್ತ ಕಿಸಾನ್ ಮೋರ್ಚಾ ಅಡಿಯಲ್ಲಿ ಪಂಜಾಬ್ ರೈತ ಸಂಘಟನೆಗಳು ಇಂದು ಚಂಡೀಗಢ ಚಲೋಗೆ ಕರೆ ನೀಡಿವೆ. ಪಂಜಾಬ್ ಮತ್ತು ಹರಿಯಾಣದ ಜಂಟಿ ರಾಜಧಾನಿ ಚಂಡೀಗಢಕ್ಕೆ ತೆರಳಿ ಅನಿರ್ದಿಷ್ಟಾವಧಿ ಪ್ರತಿಭಟನೆಗೆ ಸಜ್ಜಾಗಿದ್ದು, ಒಂದು ವೇಳೆ ಪೊಲೀಸರು ತಡೆದರೆ, ಎಲ್ಲಿ ತಡೆಯುತ್ತಾರೋ ಅಲ್ಲಿಯೇ ಪ್ರತಿಭಟಿಸಲು ನಿರ್ಧರಿಸಿದ್ದಾರೆ.

ರೈತ ಪ್ರತಿಭಟನೆಯ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆಯಾಗಿ ಚಂಡೀಗಢ ಪೊಲೀಸರು ಎಲ್ಲಾ ಪ್ರವೇಶಗಳನ್ನು ಮುಚ್ಚಿದ್ದು, ಬಿಗಿ ಭದ್ರತೆ ಕೈಗೊಂಡಿದ್ದಾರೆ. ಈ ಮಾರ್ಗದಲ್ಲಿ ಸಂಚರಿಸದಂತೆ ಪ್ರಯಾಣಿಕರಿಗೆ ಸೂಚಿಸಿದ್ದಾರೆ.

ಭಾರತೀಯ ಕಿಸಾನ್ ಯೂನಿಯನ್ (ಏಕ್ತಾ-ಉಗ್ರಹಾನ್) ಅಧ್ಯಕ್ಷ ಜೋಗಿಂದರ್ ಸಿಂಗ್ ಉಗ್ರಹಾನ್ ರಸ್ತೆಗಳು, ಹೆದ್ದಾರಿಗಳು ಮತ್ತು ರೈಲುಗಳನ್ನು ತಡೆಯಲು ರೈತರಿಗೆ ಮನವಿ ಮಾಡಿದ್ದಾರೆ. ಹಾಗೆಯೇ ಎಲ್ಲಾ ರೈತ ಸಂಘಟನೆಗಳು ಚಂಡೀಗಢ ತಲುಪಿ ಮೋರ್ಚಾ ಸೇರುವ ಮೂಲಕ ಬೃಹತ್ ಪ್ರತಿಭಟನೆಗೆ ಮುಂದಾಗಬೇಕು ಎಂದು ತಿಳಿಸಿದ್ದಾರೆ. ಆದರೆ, ರೈತರ ಪ್ರತಿಭಟನೆಗೆ ಚಂಡೀಗಢದಲ್ಲಿ ಇನ್ನೂ ಸ್ಥಳಾವಕಾಶದ ಅನುಮತಿ ದೊರೆತಿಲ್ಲ. ಹೀಗಾಗಿ, ಅವರನ್ನು ನಗರದ ಪ್ರವೇಶದ ಪಾಯಿಂಟ್?ಗಳಲ್ಲೇ ತಡೆದು ನಿಲ್ಲಿಸುವ ಪ್ರಯತ್ನ ನಡೆಯಲಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.


ರೈತರ ಪ್ರವೇಶವನ್ನು ತಡೆಯುವ ಮೂಲಕ ಪಂಜಾಬ್ ಸರ್ಕಾರ ಪ್ರತಿಭಟನೆಯ ಹಕ್ಕನ್ನು ಹತ್ತಿಕ್ಕುತ್ತಿದೆ ಎಂದು ಎಸ್‌ಕೆಎಂ ಆರೋಪಿಸಿದೆ.

ಕೃಷಿ ನೀತಿಯ ಅನುಷ್ಠಾನ, ಭೂರಹಿತ ಕಾರ್ಮಿಕರು ಮತ್ತು ರೈತರಿಗೆ ಭೂ ವಿತರಣೆ, ರೈತರು ಮತ್ತು ಕಾರ್ಮಿಕರ ಸಾಲ ಮನ್ನಾ ಸೇರಿದಂತೆ ರೈತರು ಹಲವು ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟಿದ್ದಾರೆ.

ಮುಖ್ಯಮಂತ್ರಿ ಭಗವಂತ್ ಮಾನ್ ನೇತೃತ್ವದಲ್ಲಿ ಎಸ್‌ಕೆಎಂ ಜೊತೆ ನಡೆದ ಹಲವು ಗಂಟೆಗಳ ಮಾತುಕತೆ ವಿಫಲವಾಗಿದ್ದು, ಇದರ ಬೆನ್ನಲ್ಲೇ ರೈತ ಮುಖಂಡರ ನಿವಾಸಗಳ ಮೇಲೆ ದಾಳಿ ನಡೆಸಲಾಗಿದೆ.

ಈ ಕುರಿತು ಮಾತನಾಡಿರುವ ಉಗ್ರಹಾನ್, ಮುಖ್ಯಮಂತ್ರಿ ಜೊತೆಗಿನ ಚರ್ಚೆಗಳು ಸುಗಮವಾಗಿ ನಡೆಯುತ್ತಿತ್ತು. ನಮ್ಮ 18 ಬೇಡಿಕೆಗಳಲ್ಲಿ ಎಂಟು, ಒಂಬತ್ತು ಬೇಡಿಕೆಗಳ ಬಗ್ಗೆ ಚರ್ಚೆಯ ನಂತರ, ಸಿಎಂ ಮಾನ್ ಅವರು ತಾವು ಕಣ್ಣಿನ ಸೋಂಕಿನಿಂದ ಬಳಲುತ್ತಿದ್ದು, ತೆರಳಬೇಕಿದೆ ಎಂದು ಹೇಳಿ ಸಭೆಯಿಂದ ಹೊರನಡೆದರು ಎಂದರು.

# ಚೌಧರಿ ಅವರ ಹೇಳಿಕೆಯನ್ನು ಖಂಡಿಸಿ ಆಕ್ರೋಶ



**ಢಾಕಾ:** ಬಾಂಗ್ಲಾದೇಶದ ಮಧ್ಯಂತರ ಸರ್ಕಾರದಲ್ಲಿ ಗೃಹ ವ್ಯವಹಾರಗಳ ಸಲಹೆಗಾರರಾಗಿರುವ ಜಹಾಂಗೀರ್ ಆಲಂ ಚೌಧರಿ ಅವರು ಮಹಿಳೆಯರ ಬಗ್ಗೆ ಕೀಳಾಗಿ ಮಾತನಾಡಿದ್ದನ್ನು ಖಂಡಿಸಿ ದೇಶಾದ್ಯಂತ ದೊಡ್ಡ ಪ್ರಮಾಣದ ಪ್ರತಿಭಟನೆಗಳು ಭುಗಿಲೆದ್ದಿವೆ.

ಢಾಕಾದ ಲಾಲ್ಮಾಟಿಯಾದಲ್ಲಿ ಸಾರ್ವಜನಿಕವಾಗಿ ಧೂಮಪಾನ ಮಾಡಿದ ಇಬ್ಬರು ಯುವತಿಯರಿಗೆ ಕಿರುಕುಳ ನೀಡಿದ ಘಟನೆಯ ಬಗ್ಗೆ ಚೌಧರಿ ಅವರ ಹೇಳಿಕೆಯನ್ನು ಖಂಡಿಸಿ ಪ್ರತಿಭಟನೆಗಳು ನಡೆಯುತ್ತಿವೆ. 'ಅತ್ಯಾಚಾರ ಮತ್ತು ದಬ್ಬಾಳಿಕೆಯ ವಿರುದ್ಧ ಬಾಂಗ್ಲಾದೇಶ' ಬ್ಯಾನರ್ ಅಡಿಯಲ್ಲಿ ಪ್ರತಿಭಟನಾಕಾರರ ಗುಂಪು ಮಂಗಳವಾರ ಚೌಧರಿ ಅವರ ಪ್ರತಿಕೃತಿಯನ್ನು ದಹಿಸಿತು.

ತಕ್ಷಣ ವಜಾ ಮಾಡಿ ಎಂದು ಪ್ರೊಟೆಸ್ಟ್: ಘಟನಾ ಸ್ಥಳದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಸಂಸತ್ತಿನ ಕಟ್ಟಡದ ಕಡೆಗೆ ಜಾಥಾ ನಡೆಸಿ ಯೂನುಸ್ ನೇತೃತ್ವದ ಮಧ್ಯಂತರ ಸರ್ಕಾರದಿಂದ ಚೌಧರಿ ಅವರನ್ನು ತಕ್ಷಣ ವಜಾ ಮಾಡುವಂತೆ ಒತ್ತಾಯಿಸಿದರು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

"ನನಗೆ ತಿಳಿದು ಬಂದಿರುವಂತೆ ಇಬ್ಬರು ಯುವತಿಯರು ಧೂಮಪಾನ ಮಾಡುತ್ತಿದ್ದರು. ಪ್ರಾರ್ಥನೆಗೆ ಹೋಗುತ್ತಿದ್ದ ಕೆಲವರು ಇದನ್ನು ಆಕ್ಷೇಪಿಸಿದರು. ಆಗ ಯುವತಿಯರು ಅವರ ಮೇಲೆ ಚಹಾ ಎಸೆದರು ಎಂದು ಆರೋಪಿಸಲಾಗಿದೆ." ಎಂದು ಲೆಫ್ಟಿನೆಂಟ್ ಜನರಲ್ (ನಿವೃತ್ತ) ಜಹಾಂಗೀರ್ ಆಲಂ ಚೌಧರಿ ಹೇಳಿದ್ದರು.

ವಾಸ್ತವವಾಗಿ ಅಲ್ಲಿ ನಡೆದಿದ್ದೇನು: ಆದರೆ, ವಾಸ್ತವದಲ್ಲಿ ನಡೆದಿದ್ದು ಬೇರೆಯಾಗಿದೆ ಎಂದು ಪ್ರತಿಭಟನಾಕಾರರು ಹೇಳಿದ್ದಾರೆ. ರಸ್ತೆ ಬದಿಯ ಟೀ ಅಂಗಡಿಯಲ್ಲಿ ಧೂಮಪಾನ ಮಾಡಿದ್ದಕ್ಕಾಗಿ ಇಬ್ಬರು ಯುವತಿಯರಿಗೆ ಪುರುಷರ ಗುಂಪೊಂದು ದೈಹಿಕವಾಗಿ ಕಿರುಕುಳ ನೀಡಿದೆ. ಅಲ್ಲದೇ ಯುವತಿಯರನ್ನು ಜನಸಮೂಹವು ಸುತ್ತುವರೆದು ದೌರ್ಜನ್ಯವೆಸಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ. ಧೂಮಪಾನ ಮಾಡಿದ ಯುವತಿಯರಿಗೆ 10 ರಿಂದ 12 ಪುರುಷರು ಕಪಾಳಮೋಕ್ಷ ಮಾಡಿದ ಮತ್ತು ಥಳಿಸಿದ ವೀಡಿಯೊಗಳು ಸದ್ಯ ಇಂಟರ್‌ನೆಟ್‌ನಲ್ಲಿ ವೈರಲ್ ಆಗುತ್ತಿವೆ.

ಕಾನೂನು ಸುವ್ಯವಸ್ಥೆ ಕಾಪಾಡಲು ಸಲಹೆಗಾರರು ವಿಫಲ ಆರೋಪ; ಬಾಂಗ್ಲಾದೇಶದಾದ್ಯಂತ ಅತ್ಯಾಚಾರ, ಕೊಲೆ, ಗುಂಪು ಹಿಂಸಾಚಾರ ಮತ್ತು ನೈತಿಕ ಪೊಲೀಸ್‌ಗಿರಿ ಪ್ರಕರಣಗಳು ಹೆಚ್ಚುತ್ತಿದ್ದರೂ ಗೃಹ ಸಲಹೆಗಾರರು ಇವನ್ನು ನಿಯಂತ್ರಿಸುವಲ್ಲಿ ಅಸಮರ್ಥ ರಾಗಿದ್ದಾರೆ. ಪದೇ ಪದೆ ಮನವಿ ಮಾಡಿದರೂ ದೇಶದಲ್ಲಿ ದೇಶದಲ್ಲಿ ಕಾನೂನುಮತ್ತು ಸುವ್ಯವಸ್ಥೆ ಪರಿಸ್ಥಿತಿಯಲ್ಲಿ ಯಾವುದೇ ಸುಧಾರಣೆ ಕಂಡುಬಂದಿಲ್ಲ. ಅಪರಾಧಿಗಳ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂದು ಪ್ರತಿಭಟನಾ ಕಾರರು ಆರೋಪಿಸಿದ್ದಾರೆ ಎಂದು ಬಾಂಗ್ಲಾದೇಶದ ಪ್ರಮುಖ ಪತ್ರಿಕೆ ದಿ ಡೈಲಿ ಸ್ಟಾರ್ ವರದಿ ಮಾಡಿದೆ.

ಪೊಲೀಸರು ನಮ್ಮ ಮೇಲೆ ದಾಳಿ ಮಾಡಿದ್ದರಿಂದ ನಮ್ಮ ಕೆಲವು ಪ್ರತಿಭಟನಾ ಕಾರರು ಗಾಯಗೊಂಡಿದ್ದಾರೆ. ಗೃಹ ಸಲಹೆಗಾರರಿಗೆ ರಾಜೀನಾಮೆ ನೀಡಲು ಮತ್ತು ಕ್ಷಮೆಯಾಚಿಸಲು 24 ಗಂಟೆಗಳ ಗಡುವು ನೀಡಿದ್ದೆವು. ಆದರೆ ಹಾಗೆ ಮಾಡಲು ಅವರು ವಿಫಲರಾಗಿದ್ದಾರೆಈಗ ಸರ್ಕಾರವೇ ಅವರನ್ನು ವಜಾಮಾಡಬೇಕು" ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

# ಉಕ್ರೇನ್‌ಗೆ ಅಮೆರಿಕದ ಮಿಲಿಟರಿ ನೆರವು ತಾತ್ಕಾಲಿಕ ಸ್ಥಗಿತ

**ವಾಷಿಂಗ್ಟನ್:** ಉಕ್ರೇನ್‌ಗೆ ಅಮೆರಿಕದಿಂದ ನೀಡಲಾಗುತ್ತಿದ್ದ ಮಿಲಿಟರಿ ನೆರವನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಥಗಿತಗೊಳಿಸಿದ್ದಾರೆ ಎಂದು ಫಾಕ್ಸ್ ನ್ಯೂಸ್ ವರದಿ ಮಾಡಿದೆ. ಕಳೆದ ವಾರ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ ಸ್ಕಿ ಅವರೊಂದಿಗೆ ಓವಲ್ ಕಚೇರಿಯಲ್ಲಿ ನಡೆದ ವಾಗ್ವಾದದ ನಂತರ ಟ್ರಂಪ್ ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ವರದಿ ಹೇಳಿದೆ.



ಉಕ್ರೇನ್ ನಾಯಕರು ಅಮೆರಿಕದ ಬೆಂಬಲ ಮತ್ತು ಶಾಂತಿ ಸ್ಥಾಪನೆಗೆ ಹೆಚ್ಚಿನ ಬದ್ಧತೆ ತೋರಿಸುವವರೆಗೆ ಸದ್ಯ ಸಾಗಣೆಯಲ್ಲಿರುವ ಅಥವಾ ಪೋಲೆಂಡ್‌ನಲ್ಲಿರುವ ಶಸ್ತ್ರಾಸ್ತ್ರಗಳು ಸೇರಿದಂತೆ ಎಲ್ಲಾ ರೀತಿಯ ಸಹಾಯವನ್ನು ಟ್ರಂಪ್ ಆಡಳಿತವು ಸ್ಥಗಿತಗೊಳಿಸಿದೆ ಎಂದು ಫಾಕ್ಸ್ ನ್ಯೂಸ್ ಹೇಳಿದೆ. ಶಾಂತಿ ಮಾತುಕತೆಗಳಿಗಾಗಿ ವಿಶ್ವಾಸಾರ್ಹ ಬದ್ಧತೆಯನ್ನು ತೋರುವವರೆಗೂ ಉಕ್ರೇನ್‌ಗೆ ನೀಡಲಾಗುತ್ತಿರುವ ಎಲ್ಲಾ ರೀತಿಯ ನೆರವನ್ನು ತಡೆಹಿಡಿಯಲಾಗುವುದು ಎಂದು ಟ್ರಂಪ್ ಆಡಳಿತದ ಹಿರಿಯ ಅಧಿಕಾರಿಯೊಬ್ಬರು ಫಾಕ್ಸ್ ನ್ಯೂಸ್‌ಗೆ ತಿಳಿಸಿದ್ದಾರೆ.

"ಇದು ನೆರವಿನ ಶಾಶ್ವತ ಅಂತ್ಯವಲ್ಲ, ಇದೊಂದು ವಿರಾಮವಷ್ಟೇ. ಈ ಕುರಿತಾದ ಆದೇಶಗಳು ಈಗಷ್ಟೇ ಹೊರಬೀಳುತ್ತಿವೆ" ಎಂದು ಟ್ರಂಪ್ ಆಡಳಿತದ ಹಿರಿಯ ಅಧಿಕಾರಿಯೊಬ್ಬರು ಹೇಳಿದರು.

ಕಳೆದ ವಾರ, ಓವಲ್ ಕಚೇರಿಯಲ್ಲಿ ಉಕ್ರೇನ್ ಅಧ್ಯಕ್ಷರೊಂದಿಗಿನ ಮಾಧ್ಯಮ ಸಂವಾದದ ಸಮಯದಲ್ಲಿ ಟ್ರಂಪ್ ಜೆಲೆನ್‌ಸ್ಕಿ ವಿರುದ್ಧ ಕೆಲ ಕಠಿಣ ಪದಗಳನ್ನು ಬಳಸಿದ್ದರು. ಯುದ್ಧ ಮುಂದುವರಿಸಲು ಅಗತ್ಯವಾದ ಸಾಮರ್ಥ್ಯ ನಿಮ್ಮ ಬಳಿಯಿಲ್ಲ ಹಾಗೂ ರಷ್ಯಾ ವಿರುದ್ಧದ ನಿಮ್ಮ ಯುದ್ಧದಲ್ಲಿ ನಾವು ನಿಮಗೆ ನೀಡಿದ ಸಹಾಯಕ್ಕೆ ನೀವು ಕೃತಜ್ಞತೆಯಿಂದ ವರ್ತಿಸುತ್ತಿಲ್ಲ ಎಂದು ಟ್ರಂಪ್ ಜೆಲೆನ್‌ಸ್ಕಿಗೆ ನೇರವಾಗಿಯೇ ಹೇಳಿದ್ದರು.

ಇಬ್ಬರೂ ನಾಯಕರು ಪತ್ರಿಕಾಗೋಷ್ಠಿಯಲ್ಲಿಯೇ ನಿರಂತರ ವಾಗ್ವಾದ ನಡೆಸಿದ್ದರು. ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ತಮ್ಮ ದೇಶದ ವಿರುದ್ಧ ಯುದ್ಧ ಮುಂದುವರೆಸಿರುವುದರಿಂದ ಉಕ್ರೇನ್‌ಗೆ ಭದ್ರತಾ ಸಹಾಯ ಅಗತ್ಯವಾಗಿದೆ ಎಂದು ಜೆಲೆನ್‌ಸ್ಕಿ ಪತ್ರಿಕಾಗೋಷ್ಠಿಯಲ್ಲಿ ಪ್ರತಿಪಾದಿಸಿದ್ದರು.

ಯುಎಸ್ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಕೂಡ ಜೆಲೆನ್ ಸ್ಕಿ ಅವರ ಹೇಳಿಕೆಗೆ ಅಸಮ್ಮತಿ ವ್ಯಕ್ತಪಡಿಸಿದ್ದರು. "ಯುನೈಟೆಡ್ ಸ್ಟೇಟ್ಸ್ ಆಫ್ ಅಮೆರಿಕಾದ ಓವಲ್ ಕಚೇರಿಗೆ ಬಂದು ನಿಮ್ಮ ದೇಶ ವಿನಾಶವಾಗದಂತೆ ತಡೆಯಲು ಪ್ರಯತ್ನಿಸುತ್ತಿರುವ ಅಮೆರಿಕ ಸರ್ಕಾರದ ವಿರುದ್ಧವೇ ಆರೋಪಿಸುವುದು ಸರಿಯಲ್ಲ" ಎಂದು ಅವರು ಹೇಳಿದ್ದರು.

ಶಾಂತಿ ಸ್ಥಾಪಿಸಲು ಮತ್ತು ಯುದ್ಧದಿಂದಾಗುವ ಜೀವಹಾನಿ ತಡೆಗಟ್ಟಲು ಒಪ್ಪಂದದ ಅಗತ್ಯವನ್ನು ಒತ್ತಿ ಹೇಳಿದ ಟ್ರಂಪ್, ನಿಮಗೆ ನಾವು ಮಿಲಿಟರಿ ಸಹಾಯ ನೀಡಿರದಿದ್ದರೆ ಕೇವಲ ಎರಡು ವಾರಗಳಲ್ಲಿ ಈ ಯುದ್ಧ ಮುಗಿದು ಹೋಗುತ್ತಿತ್ತು ಎಂದು ಜೆಲೆನ್‌ಸ್ಕಿಗೆ ಹೇಳಿದರು. ಯುರೋಪಿಯನ್ ರಾಷ್ಟ್ರಗಳು ಸೇರಿದಂತೆ ಎಲ್ಲಾ ಸಂಬಂಧಿತ ಪಕ್ಷಗಳು ಮಾತುಕತೆಗೆ ಸಿದ್ಧರಿದ್ದರೆ ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿ ಒಪ್ಪಂದ ಮೂಡಿಸುವುದು ಸಾಧ್ಯ ಎಂದು ಟ್ರಂಪ್ ಸಲಹೆ ನೀಡಿದರು.

# ಅಪಹರಣಕಾರರಿಗೆ ಸಚಿವರ ನೇರ ಎಚ್ಚರಿಕೆ



**ಕೋಟಾ:** ಅಪಹರಣವಾದ ಅಪ್ರಾಪ್ತ ಬಾಲಕಿಯರನ್ನು ಮರಳಿಸದಿದ್ದರೆ, ಆರೋಪಿಗಳಿಗೆ ಸಂಬಂಧಿಸಿದ ಮನೆ, ಆಸ್ತಿ- ಪಾಸ್ತಿಯನ್ನು ಬುಲ್ಡೋಜರ್‌ನಿಂದ ನಾಶ ಮಾಡಲಾಗುವುದು" ಎಂದು ರಾಜಸ್ಥಾನದ ಶಿಕ್ಷಣ ಮತ್ತು ಪಂಚಾಯತ್ ರಾಜ್ ಸಚಿವ ಮದನ್ ದಿಲಾವರ್ ಅವರು ಎಚ್ಚರಿಕೆ ನೀಡಿದ್ದಾರೆ.

ಇತ್ತೀಚೆಗೆ ಸುಕೇತ್ ನಗರದಲ್ಲಿ ಮೂವರು ಅಪ್ರಾಪ್ತ ಮಕ್ಕಳನ್ನು ದುಷ್ಕರ್ಮಿಗಳು ಅಪಹರಣ ಮಾಡಿದ್ದಾರೆ ಎಂದು ತಿಳಿಸಿದಾಗ, "ಅಪರಾಧ ಕೃತ್ಯದಲ್ಲಿ ಭಾಗಿಯಾಗಿರುವ ಕಿಡಿಗೇಡಿಗಳು ಮಕ್ಕಳನ್ನು ವಾಪಸ್ ಕರೆತರಬೇಕು. ಇಲ್ಲವಾದಲ್ಲಿ ಅವರ ಮನೆಗಳ ಮೇಲೆ ಬುಲ್ಡೋಜರ್ ಹತ್ತಿಸಲಾಗುವುದು ಎಂದು ಗುಡುಗಿದರು.

ತುಂಬು ಸಭೆಯಲ್ಲಿ ಬಹಿರಂಗವಾಗಿ ಅಪರಾಧಿಗಳಿಗೆ ಎಚ್ಚರಿಕೆ ರವಾನಿಸಿದ ಸಚಿವರು, ಗೂಂಡಾಗಳೇ ಕೇಳಿಸಿಕೊಳ್ಳಿ. ಎರಡು-ಮೂರು ದಿನಗಳಲ್ಲಿ ಅಪ್ರಾಪ್ತೆಯನ್ನು ಬಿಡುಗಡೆ ಮಾಡದಿದ್ದರೆ, ನೀವು ಕೆಟ್ಟ ಪರಿಸ್ಥಿತಿಯನ್ನು ಎದುರಿಸಲಿದ್ದೀರಿ.

ನಿಮ್ಮ ಮನೆಗಳ ಮೇಲೆ ಬುಲ್ಡೋಜರ್ ಪ್ರಹಾರವಾಗಲಿದೆ. ಇಷ್ಟೇ ಅಲ್ಲ, ನಿಮ್ಮ ಎಲ್ಲ ಆಸ್ತಿ- ಪಾಸ್ತಿಗಳನ್ನು ನಾಶ ಮಾಡಲಾಗುವುದು. ಗೂಂಡಾಗಳ ಕುಟುಂಬಗಳೂ ಇದರಲ್ಲಿ ಭಾಗಿಯಾಗಿದ್ದರೆ, ಎಚ್ಚರಿಕೆ ವಹಿಸಿ ಎಂದು ಸೂಚನೆ ನೀಡಿದರು.

ನಾವೆಲ್ಲರೂ ಬಂಧುಗಳಂತೆ ಬದುಕುತ್ತಿದ್ದೇವೆ. ಇದರರ್ಥ ನಿಮ್ಮ ಗೂಂಡಾಗಿರಿ ಸಹಿಸಿಕೊಳ್ಳುತ್ತೇವೆ ಎಂದಲ್ಲ. ನಾವು ಮನಸ್ಸು ಮಾಡಿದರೆ, ನಿಮ್ಮನ್ನು ಅಧೋಗತಿಗೆ ತರಲಾಗುವುದು ಎಂದು ಹೇಳಿ, ಸ್ಥಳದಲ್ಲಿದ್ದ ಪೊಲೀಸ್ ಅಧಿಕಾರಿ ಮತ್ತು ಡಿಎಸ್‌ಪಿ ಅವರಿಗೆ ಇರುವ ಎಲ್ಲ ಕೆಲಸಗಳನ್ನು ಬಿಟ್ಟು ಕಾಣೆಯಾದ ಬಾಲಕಿಯರನ್ನು ಹುಡುಕುವಂತೆ ತಾಕೀತು ಮಾಡಿದರು.

ಪೊಲೀಸರಿಂದಲೂ ವಿವರಣೆ: ಸ್ಥಳದಲ್ಲಿದ್ದ ಸುಕೇತ್ ಪೊಲೀಸ್ ಠಾಣಾಧಿಕಾರಿ ಚೋಟು ಸಿಂಗ್ ಅವರನ್ನು ಎಷ್ಟು ಹುಡುಗಿಯರು ಕಾಣೆಯಾಗಿದ್ದಾರೆ ಎಂದು ಪ್ರಶ್ನಿಸಿದರು. ಮೂವರು ಎಂದು ಅಧಿಕಾರಿ ಹೇಳಿದರು. ಮಕ್ಕಳನ್ನು ಹುಡುಕಿ ತರಲು ಸ್ವಲ್ಪ ಸಮಯ ಬೇಕು ಎಂದು ಇದೇ ವೇಳೆ ಕೋರಿದರು. ಆರೋಪಿಗಳ ಮೊಬೈಲ್ ಸ್ಥಳವನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ. ತಂಡಗಳು ತನಿಖೆ ನಡೆಸುತ್ತಿವೆ. ಈ ಬಗ್ಗೆ ಉನ್ನತ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ ಎಂದರು. ಮಕ್ಕಳ ಪತ್ತೆಗೆ ರಚಿಸಲಾಗಿರುವ ತಂಡಗಳನ್ನು 20ಕ್ಕೆ ಹೆಚ್ಚಿಸಲು ಸೂಚಿಸಿ, ಒಂದು ವಾರದೊಳಗೆ ಅವರನ್ನು ಹುಡುಕುವಂತೆ ಆದೇಶಿಸಿದರು.

# ಬಿಹಾರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ



**ಪಾಟ್ನಾ:** ಬಿಹಾರ ಸಿಎಂ ನಿತೀಶ್ ಕುಮಾರ್ ದಣಿದಿದ್ದಾರೆ ಮತ್ತು ಅವರ ಸರ್ಕಾರ ನಿಷ್ಕ್ರಿಯವಾಗಿದೆ ಎಂದು ವಿರೋಧ ಪಕ್ಷದ ನಾಯಕ ತೇಜಸ್ವಿ ಯಾದವ್ ಇಂದು ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಬಿಹಾರ ವಿಧಾನಸಭೆಯ ಬಜೆಟ್ ಅಧಿವೇಶನದಲ್ಲಿ ಮಾತನಾಡಿದ ಅವರು, ಸರ್ಕಾರ ನಿಷ್ಕ್ರಿಯವಾಗಿದ್ದು, ವ್ಯವಸ್ಥೆ ನಿಷ್ಪ್ರಯೋಜಕವಾಗಿದೆ, ಸಿಎಂ ದಣಿದಿದ್ದಾರೆ ಮತ್ತು ಸಾಮಾನ್ಯ ಜನರು ಅಸಹಾಯಕರಾಗಿದ್ದಾರೆ ಎಂದು ಹೇಳಿದರು.

ಸಿಎಂ ನಿತೀಶ್ ಕುಮಾರ್ ಅವರು ಎರಡು ದಶಕಗಳ ಹಿಂದಿನ ಪರಿಸ್ಥಿತಿಗಳನ್ನು ನೆನಪಿಸಿಕೊಳ್ಳುತ್ತ ಪ್ರಸ್ತುತ ಸಮಸ್ಯೆಗಳ ಬಗ್ಗೆ ನೋಡುತ್ತಿಲ್ಲ. ಆ ಮೂಲಕ ರಾಜ್ಯದ ಪ್ರಸ್ತುತ ಸವಾಲುಗಳಿಗೆ ಉತ್ತರದಾಯಿತ್ವದಿಂದ ತಪ್ಪಿಸಿಕೊಳ್ಳುತ್ತಿದ್ದಾರೆ ಎಂದು ಯಾದವ್ ಆರೋಪಿಸಿದರು. ರಾಜ್ಯಪಾಲರ ಭಾಷಣವನ್ನು ಟೀಕಿಸಿದ ಅವರು, ಇದು ಪುನರಾವರ್ತಿತ ಭಾಷಣವಾಗಿದ್ದು, ಪ್ರಸ್ತುತ ಸರ್ಕಾರದ ಬಗ್ಗೆ ಉತ್ತಮ ಚಿತ್ರಣ ನೀಡಲು ಹಿಂದಿನ ಸರ್ಕಾರದ ಸಾಧನೆಗಳನ್ನು ಇದರಲ್ಲಿ ಸೇರಿಸಲಾಗಿದೆ ಎಂದರು.

ಮೂಲಸೌಕರ್ಯ ವೈಫಲ್ಯಗಳನ್ನು ಎತ್ತಿ ತೋರಿಸಿದ ಯಾದವ್, ಬಿಹಾರದಲ್ಲಿ ಆಗಾಗ ಸೇತುವೆಗಳು ಮತ್ತು ಕಲ್ವರ್ಟ್‌ಗಳು ಕುಸಿಯುತ್ತಿರುವುದನ್ನು ಪ್ರಸ್ತಾಪಿಸಿದ ಅವರು, ಯೋಜನೆಗಳ ಗುಣಮಟ್ಟ ಮತ್ತು ಮೇಲ್ವಿಚಾರಣೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಿದರು.

9 ಲಕ್ಷ ಲೀಟರ್ ಆಲ್ಕೋಹಾಲ್ ಅನ್ನು ಇಲಿಗಳು ಹಾಳು ಮಾಡಿವೆ ಎಂದು ವ್ಯಂಗ್ಯವಾಗಿ ನುಡಿದ ಅವರು ಸರ್ಕಾರವನ್ನು ಗೇಲಿ ಮಾಡಿದರು. ಕಾವ್ಯಾತ್ಮಕ ವಿಮರ್ಶೆಯ ಮೂಲಕ ಯಾದವ್, ಹಿಂದಿನ ಆಡಳಿತಗಳ ಬಗ್ಗೆ ಸರ್ಕಾರದ ಗೀಳನ್ನು ಟೀಕಿಸಿದರು. ಸರ್ಕಾರವು ಹಳೆಯ ಸಾಧನೆಗಳ ಬಗ್ಗೆಯೇ ಮಾತನಾಡುತ್ತಿದ್ದು, 2005 ರಿಂದ ಯಾವುದೇ ಪ್ರಗತಿ ಸಾಧಿಸಲು ವಿಫಲವಾಗಿದೆ ಎಂದು ಅವರು ಹೇಳಿದರು.

2005 ಕ್ಕಿಂತ ಮೊದಲು ಇದ್ದ ಆರು ವೈದ್ಯಕೀಯ ಕಾಲೇಜುಗಳೇ ಈಗಲೂ ಶೇಕಡಾ 90 ರಷ್ಟು ಜನಸಂಖ್ಯೆಗೆ ಸೇವೆ ಸಲ್ಲಿಸುತ್ತಿವೆ ಮತ್ತು ಲಾಲು ಪ್ರಸಾದ್ ಯಾದವ್ ಅವರ ಅಧಿಕಾರಾವಧಿಯಲ್ಲಿ ಬಡವರಿಗಾಗಿ ಹಲವಾರು ಮನೆಗಳು ಮತ್ತು ಮಾರುಕಟ್ಟೆಗಳನ್ನು ನಿರ್ಮಿಸಲಾಗಿತ್ತು ಎಂದು ಅವರು ಒತ್ತಿ ಹೇಳಿದರು.

ಲಾಲು ಪ್ರಸಾದ್ ಯಾದವ್ ಸೇರಿದಂತೆ ಹಿಂದಿನ ನಾಯಕರು ತಮ್ಮ ಹಿಂದಿನ ಸರ್ಕಾರಗಳನ್ನು ದೂಷಿಸದೇ ತಮ್ಮದೇ ಆಡಳಿತದ ಮೇಲೆ ಗಮನ ಹರಿಸಿದ್ದರು ಎಂದು ಪ್ರತಿಪಾದಿಸಿದ ಯಾದವ್, ಸತ್ಯಾಧಾರಿತ ಸಂವಾದದಲ್ಲಿ ತೊಡಗುವಂತೆ ಸಿಎಂ ನಿತೀಶ್ ಕುಮಾರ್ ಅವರಿಗೆ ಸವಾಲು ಹಾಕಿದರು.

1961 ರಿಂದ 1990 ರವರೆಗೆ ಬಿಹಾರದಲ್ಲಿ ಆಗಾಗ ನಾಯಕತ್ವ ಬದಲಾವಣೆ ಮತ್ತು ರಾಷ್ಟ್ರಪತಿ ಆಡಳಿತಗಳ ಮೂಲಕ ಮೂಲಕ ರಾಜಕೀಯ ಅಸ್ಥಿರತೆ ಉಂಟಾಗಿತ್ತು. ಇದು ಅಭಿವೃದ್ಧಿಗೆ ಅಡ್ಡಿಯಾಗಿತ್ತು ಎಂದು ಅವರು ಪ್ರತಿಪಾದಿಸಿದರು.

# ಐಇಡಿ ಸ್ಫೋಟ, ಮೂವರು ಯೋಧರಿಗೆ ಗಾಯ



**ಜಾರ್ಖಂಡ್:** ನಕ್ಸಲರು ಐಇಡಿ ಸ್ಫೋಟಗೊಳಿಸಿದ ಪರಿಣಾಮ ಜಾರ್ಖಂಡ್‌ನಲ್ಲಿ ಮೂವರು ಯೋಧರು ಗಾಯಗೊಂಡಿದ್ದಾರೆ. ಬಲಿಬಾ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಭದ್ರತಾ ಪಡೆಗಳು ನಕ್ಸಲ್ ವಿರೋಧಿ ಕಾರ್ಯಾಚರಣೆ ನಡೆಸುತ್ತಿದ್ದಾಗ ಈ ಘಟನೆ ನಡೆದಿದೆ. ಸ್ಫೋಟದ ನಂತರ, ಗಾಯಗೊಂಡ ಸೈನಿಕರನ್ನು ವೈದ್ಯಕೀಯ ಚಿಕಿತ್ಸೆಗಾಗಿ ರಾಂಚಿಗೆ ವಿಮಾನದ ಮೂಲಕ ಸಾಗಿಸಲಾಯಿತು.

ದಾಳಿಯನ್ನು ದೃಢಪಡಿಸಿದ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅಶುತೋಷ್ ಶೇಖರ್, ನಕ್ಸಲ್ ಚಟುವಟಿಕೆಗಳನ್ನು ಎದುರಿಸಲು ಭದ್ರತಾ ಪಡೆಗಳು ಈ ಪ್ರದೇಶದಲ್ಲಿ ಕಾರ್ಯಾಚರಣೆಯನ್ನು ತೀವ್ರಗೊಳಿಸುತ್ತಿವೆ.

ಮನೋಹರ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ಸಾರಂಡಾ ಅರಣ್ಯದ ಬಲಿವಾದಲ್ಲಿ ಸಿಆರ್‌ಪಿಎಫ್ 197 ಬೆಟಾಲಿಯನ್ ಸಿಬ್ಬಂದಿ ಶೋಧ ಕಾರ್ಯಾಚರಣೆಗೆ ಹೋದಾಗ ಈ ಘಟನೆ ನಡೆದಿದೆ ಎಂದು ಕೊಲ್ಹಾನ್ ಡಿಐಜಿ ಮನೋಜ್ ರತನ್ ಚೋಥೆ ಅವರನ್ನು ಉಲ್ಲೇಖಿಸಿ ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

ಛತ್ತೀಸ್‌ಗಢದಲ್ಲಿ ಸೈನಿಕರ ವಾಹನದ ಮೇಲೆ ನಕ್ಸಲರಿಂದ ಐಇಡಿ ಸ್ಫೋಟ; 9 ಜನ ಸಾವು

ಫೆಬ್ರವರಿ 27 ರಂದು ಪಲಮು ಜಿಲ್ಲೆಯಲ್ಲಿ ನಿಷೇಧಿತ ತೃತೀಯಾ ಸಮ್ಮೇಳನ ಪ್ರಸ್ತುತಿ ಸಮಿತಿಯನ ನಕ್ಸಲ್ ನಾಯಕ ಉಪೇಂದ್ರ ಭೂಯಾನ್ ಅವರನ್ನು ಜಾರ್ಖಂಡ್ ಪೊಲೀಸರು ಬಂಧಿಸಿದ ನಂತರ ಈ ಸ್ಫೋಟ ಸಂಭವಿಸಿದೆ. ಪೊಲೀಸರು ಆತನ ಬಳಿಯಿಂದ 652 ಕ್ಕೂ ಹೆಚ್ಚು ಗುಂಡುಗಳ ಬೃಹತ್ ಸಂಗ್ರಹವನ್ನು ವಶಪಡಿಸಿಕೊಂಡಿದ್ದಾರೆ, ಇವುಗಳನ್ನು ಸೆರ್ಬಿಯಾ ಮತ್ತು ಯುಎಸ್‌ಎಯಲ್ಲಿ ಮಾಡಲಾಗಿದೆ ಎಂದು ಪೊಲೀಸರು ಹೇಳಿಕೊಂಡಿದ್ದಾರೆ.

ಉಪೇಂದ್ರ ವಿಚಾರಣೆಯ ಸಮಯದಲ್ಲಿ ಪೊಲೀಸರಿಗೆ ತಿಳಿಸಿದ್ದು, ತನ್ನ ಬಳಿಯಿಂದ ವಶಪಡಿಸಿಕೊಂಡ ಗುಂಡುಗಳು ಮತ್ತು ಶಸ್ತ್ರಾಸ್ತ್ರಗಳನ್ನು TSPC ಯ ಉನ್ನತ ಕಮಾಂಡರ್‌ಗಳ ಸೂಚನೆಯ ಮೇರೆಗೆ ಸಂಗ್ರಹಿಸಲಾಗುತ್ತಿದೆ ಎಂದು ಹೇಳಿದ್ದ. ಗುಂಡುಗಳ ಮೇಲೆ ನಿರ್ದಿಷ್ಟ ಸಂಖ್ಯೆಗಳು ಮತ್ತು ಕೋಡ್‌ಗಳು ಕಂಡುಬಂದಿವೆ ಎಂದು ಪೊಲೀಸರು ಹೇಳಿಕೊಂಡಿದ್ದಾರೆ.

# ಭಾರತ ಮೂಲದ ನರ್ಸ್ ಮೇಲೆ ಹಲ್ಲೆ

**ಫ್ಲೋರಿಡಾ:** ಆಸ್ಪತ್ರೆಯಲ್ಲಿ ಭಾರತದ ಮೂಲದ ನರ್ಸ್ ಮೇಲೆ ವ್ಯಕ್ತಿಯೊಬ್ಬ ಹಲ್ಲೆ ನಡೆಸಿರುವ ಘಟನೆ ಅಮೆರಿಕದಲ್ಲಿ ನಡೆದಿದೆ. ಭಾರತದ ಮೂಲದ 67 ವರ್ಷದ ನರ್ಸ್ ಮೇಲೆ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ್ದು, ಭಾರತೀಯರು ಕೆಟ್ಟವರು ಎಂದು ಆ ದಾಳಿಕೋರ ಹೇಳಿದ್ದಾನೆ. ನರ್ಸ್‌ಗೆ ಮುಖದಲ್ಲಿ ಮುರಿತಗಳು ಉಂಟಾಗಿವೆ. ಈ ಘಟನೆ ಫೆಬ್ರವರಿ 18 ಫ್ಲೋರಿಡಾದ ಫಾರ್ಮ್ ಬಿ ಬಳಿಯ ಪ್ಯಾಮ್ ವೆಸ್ಟ್ ಆಸ್ಪತ್ರೆಯಲ್ಲಿ ನಡೆದಿದೆ.


ನರ್ಸ್ ಮೇಲಿನ ದಾಳಿಯ ನಂತರ, ಆರೋಗ್ಯ ಕಾರ್ಯಕರ್ತರು ಭದ್ರತೆಗಾಗಿ ಒತ್ತಾಯಿಸಿದ್ದಾರೆ. ಆಸ್ಪತ್ರೆಯಲ್ಲಿ ಹಲ್ಲೆಗೊಳಗಾದ ಭಾರತೀಯ ಮೂಲದ ನರ್ಸ್ ಹೆಸರು ಲೀಲಮ್ಮ ಲಾಲ್. ಲೀಲಮ್ಮ ಲಾಲ್ ಮೇಲೆ 33 ವರ್ಷದ ಸ್ಟೀಫನ್ ಎಂಬ ವ್ಯಕ್ತಿ ಹಲ್ಲೆ ನಡೆಸಿದ್ದಾನೆ.

ಆ ವ್ಯಕ್ತಿ ನರ್ಸ್ ಮೇಲೆ ಎಷ್ಟು ಕೆಟ್ಟದಾಗಿ ಹಲ್ಲೆ ನಡೆಸಿದ್ದಳೆಂದರೆ ಆಕೆಯ ಮುಖದ ಮೇಲೆ ಹಲವಾರು ಮುರಿತಗಳುಂಟಾಗಿದ್ದವು. ಆಕೆಯ ಕಾಲರ್ಬೋನ್ ಮುರಿದಿತ್ತು ಮತ್ತು ಆಕೆಯ ತಲೆಯಲ್ಲಿ ರಕ್ತಸ್ರಾವವಾಗಲು ಪ್ರಾರಂಭಿಸಿತು. ಸ್ಟೀಫನ್ ಸ್ಕ್ಯಾಂಟಲ್‌ಬರಿಯ ದಾಳಿ ಒಂದರಿಂದ ಎರಡು ನಿಮಿಷಗಳ ಕಾಲ ನಡೆದಿದ್ದು, ಆಸ್ಪತ್ರೆಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಕೂಡಲೇ ದಾಳಿಕೋರನನ್ನು ಬಂಧಿಸಲಾಗಿದ್ದು, ಕೊಲೆ ಯತ್ನದ ಆರೋಪ ಹೊರಿಸಲಾಗಿದೆ. ಆಘಾತಕಾರಿ ವಿಷಯವೆಂದರೆ ಲೀಲಮ್ಮ ಲಾಲ್ ಮೇಲೆ ಹಲ್ಲೆ ನಡೆಸಿದ ವ್ಯಕ್ತಿ ಸ್ವತಃ ರೋಗಿಯಾಗಿದ್ದು, ಆತ ಮಾನಸಿಕ ಅಸ್ವಸ್ಥನಾಗಿದ್ದ ಎಂದು ಹೇಳಲಾಗುತ್ತಿದೆ. ಆತನನ್ನು ಬಂಧಿಸಿದಾಗ ಶರ್ಟ್ ಮತ್ತು ಚಪ್ಪಲಿ ಧರಿಸಿರಲಿಲ್ಲ.

ಭಾರತೀಯರು ಕೆಟ್ಟವರು ಮತ್ತು ನಾನು ಭಾರತೀಯ ವೈದ್ಯರನ್ನು ಕೊಂದೆ ಎಂದು ಆರೋಪಿ ಹೇಳಿದ್ದಾನೆ. ಯಗೊಂಡ ನರ್ಸ್‌ನ ಮಗಳು ತನ್ನ ತಾಯಿಯ ಗಾಯಗಳ ತೀವ್ರತೆಯ ಬಗ್ಗೆ ವಿವರಿಸಿದ್ದಾಳೆ.

ಈ ಘಟನೆಯು ವೈದ್ಯಕೀಯ ವೃತ್ತಿಪರರ ಸುರಕ್ಷತೆಯ ಬಗ್ಗೆ ಕಳವಳವನ್ನು ವ್ಯಕ್ತಪಡಿಸಿದೆ, ಮೂರು ದಿನಗಳಲ್ಲಿ 10,000 ಕ್ಕೂ ಹೆಚ್ಚು ಜನರು ಬಿಗಿ ಭದ್ರತಾ ಕ್ರಮಗಳು ಮತ್ತು ಕಠಿಣ ಶಿಕ್ಷೆಯನ್ನು ಕೋರುವ ಅರ್ಜಿಗೆ ಸಹಿ ಹಾಕಿದ್ದಾರೆ. ಏತನ್ಮಧ್ಯೆ, ಪಾಮ್ ಬೀಚ್ ಕೌಂಟಿ ಶೆರಿಫ್ ಅವರು ಫೆಬ್ರವರಿ 18 ರಂದು ಮಧ್ಯಾಹ್ನ 1.20 ರ ಸುಮಾರಿಗೆ ಘಟನಾ ಸ್ಥಳಕ್ಕೆ ಆಗಮಿಸಿದರು ಮತ್ತು ಅಲ್ಲಿ ನರ್ಸ್ ಗಂಭೀರವಾಗಿ ಗಾಯಗೊಂಡಿರುವುದನ್ನು ಕಂಡಿದ್ದಾರೆ.



# ಆತ್ಮಾಹುತಿ ದಾಳಿ, 9 ಮಂದಿ ಬಲಿ, 6 ಭಯೋತ್ಪಾದಕರ ಹತ್ಯೆ

**ಪಾಕಿಸ್ತಾನ:** ವಾಯುವ್ಯ ಪಾಕಿಸ್ತಾನದ ಬನ್ನು ಕಂಟೋನ್ಮೆಂಟ್ ಅನ್ನು ಗುರಿಯಾಗಿಸಿಕೊಂಡು ನಡೆದ ಆತ್ಮಾಹುತಿ ದಾಳಿಯಲ್ಲಿ 9 ಮಂದಿ ಸಾವನ್ನಪ್ಪಿದ್ದು, 16 ಮಂದಿ ಗಾಯಗೊಂಡಿದ್ದಾರೆ. ಮೃತರಲ್ಲಿ 6 ಭಯೋತ್ಪಾದಕರೂ ಇದ್ದಾರೆ. ಸ್ಫೋಟಕಗಳು ತುಂಬಿದ್ದ ಎರಡು ವಾಹನಗಳು ಮಿಲಿಟರಿ ಗಡಿ ಗೋಡೆಗೆಡಿಕ್ಕಿ ಹೊಡೆದಾಗ ಈ ದಾಳಿ ಸಂಭವಿಸಿದೆ ಎಂದು ಪೊಲೀಸರು ದೃಢಪಡಿಸಿದ್ದಾರೆ.

ಹಫೀಜ್ ಗುಲ್ ಬಹದ್ದೂರ್ ಜೊತೆ ಸಂಬಂಧ ಹೊಂದಿರುವ ಜೈಶ್ ಅಲ್ ಫರ್ಸಾನ್ ಎಂಬ ಬಣವು ದಾಳಿಯ ಹೊಣೆಯನ್ನು ಹೊತ್ತುಕೊಂಡಿದೆ. ಈ ಗುಂಪು ತೆಹ್ರೀಕ್-ಇ-ತಾಲಿಬಾನ್ ಪಾಕಿಸ್ತಾನ್ ನೊಂದಿಗೆ ಸಂಬಂಧ ಹೊಂದಿರುವ ಹಲವಾರು ಬಣಗಳಲ್ಲಿ ಒಂದಾಗಿದೆ ಎಂದು ನಂಬಲಾಗಿದೆ.

ಆಸ್ಪತ್ರೆಯ ಮೂಲಗಳ ಪ್ರಕಾರ, ಸಾವನ್ನಪ್ಪಿದವರಲ್ಲಿ ಐದು ನಾಗರಿಕರು ಸೇರಿದ್ದಾರೆ, ಆದರೆ ಕಂಟೋನ್ಮೆಂಟ್‌ನ ಗಡಿ ಗೋಡೆಯ ಪಕ್ಕದಲ್ಲಿರುವ ಮಸೀದಿಯ ಅವಶೇಷಗಳಿಂದ ಇನ್ನೂ ನಾಲ್ಕು ಶವಗಳನ್ನು ಹೊರತೆಗೆಯಲಾಗಿದೆ. ಸ್ಫೋಟಗಳಿಂದಾಗಿ ಮಸೀದಿಗೆ ಭಾರೀ ಹಾನಿಯಾಗಿದೆ. ಗಾಯಗೊಂಡ 16 ಜನರನ್ನು ವೈದ್ಯಕೀಯ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಕಳುಹಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಕನಿಷ್ಠ ಐದರಿಂದ ಆರು ದಾಳಿಕೋರರು ಸೌಲಭ್ಯದೊಳಗೆ ನುಸುಳಲು ಪ್ರಯತ್ನಿಸಿದರು. ಆದಾಗ್ಯೂ, ಭದ್ರತಾ ಪಡೆಗಳು ತ್ವರಿತವಾಗಿ ಪ್ರತಿಕ್ರಿಯಿಸಿ ಎಲ್ಲಾ ಆರು ಭಯೋತ್ಪಾದಕರನ್ನು ತಟಸ್ಥಗೊಳಿಸಿದವು, ಹೆಚ್ಚಿನ ಸಾವುನೋವುಗಳನ್ನು ತಪ್ಪಿಸಿದೆವು ಎಂದು ಪೊಲೀಸ್ ಅಧಿಕಾರಿಗಳು ದೃಢಪಡಿಸಿದರು.

ದಾಳಿಯ ನಂತರ, ಸೇನಾ ಅಧಿಕಾರಿಗಳು ಕಂಟೋನ್ಮೆಂಟ್‌ಗೆ ಹೋಗುವ ಎಲ್ಲಾ ಪ್ರಮುಖ ಮಾರ್ಗಗಳನ್ನು ಮುಚ್ಚಿದರು, ಸ್ಫೋಟದ ಸ್ಥಳಕ್ಕೆ ಪ್ರವೇಶವನ್ನು ನಿರ್ಬಂಧಿಸಿದರು. ಹೆಚ್ಚಿನ ಘಟನೆಗಳನ್ನು ತಡೆಗಟ್ಟಲು ಪ್ರದೇಶದಾದ್ಯಂತ ಭದ್ರತೆಯನ್ನು ಹೆಚ್ಚಿಸಲಾಗಿದೆ.ಖೈಬರ್ ಪಖ್ತುಂಖ್ವಾ ಮುಖ್ಯಮಂತ್ರಿ ಅಲಿ ಅಮೀನ್ ಗಂಡಾಪುರ್ ಬನ್ನು ಆತ್ಮಹತ್ಯಾ ದಾಳಿಯನ್ನು ಖಂಡಿಸಿದರು ಮತ್ತು ಘಟನೆಯ ಬಗ್ಗೆ ವಿವರವಾದ ವರದಿಯನ್ನು ಕೋರಿದರು. ಪವಿತ್ರ ರಂಜಾನ್ ತಿಂಗಳಲ್ಲಿ ಇಂತಹ ಘಟನೆಗಳು ಅತ್ಯಂತ ಖಂಡನೀಯ ಮತ್ತು ದುರಂತ ಎಂದು ಹೇಳಿದರು.



# ವಿರಾಟ್ ದಾಖಲೆಗಳ ಸುರಿಮಳೆ

**ದುಬೈ:** ರನ್ ಮೆಷಿನ್ ಮಾತ್ರವಲ್ಲದೇ ಚುರುಕಿನ ಫೀಲ್ಡರ್ ಕೂಡಾ ಆಗಿರುವ ತಾರಾ ಕ್ರಿಕೆಟಿಗ ವಿರಾಟ್ ಕೊಹ್ಲಿ ಮತ್ತೆ ಹಲವು ದಾಖಲೆಗಳನ್ನು ಬರೆದಿದ್ದಾರೆ. ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಗರಿಷ್ಠ ಕ್ಯಾಚ್ ಪಡೆದ ಭಾರತೀಯ ಫೀಲ್ಡರ್ ಎಂಬ ಹೆಗ್ಗಳಿಕೆಗೆ ಅವರು ಪಾತ್ರರಾಗಿದ್ದಾರೆ.

ಮಂಗಳವಾರ ಆಸ್ಟ್ರೇಲಿಯಾ ವಿರುದ್ಧ ಪಂದ್ಯದಲ್ಲಿ ಜೋಶ್ ಇಂಗ್ಲಿಸ್ ಹಾಗೂ ನೇಥನ್ ಎಲ್ಲಿಸ್ ಕ್ಯಾಚ್ ಪಡೆದ ಕೊಹ್ಲಿ, ಅಂತಾರಾಷ್ಟ್ರೀಯ ಕ್ರಿಕೆಟ್‌ನ ಕ್ಯಾಚ್ ಸಂಖ್ಯೆಯನ್ನು 336ಕ್ಕೆ ಹೆಚ್ಚಿಸಿದರು. ಅವರು 549 ಪಂದ್ಯಗಳಲ್ಲಿ ಈ ಸಾಧನೆ ಮಾಡಿದ್ದಾರೆ. ಇದರೊಂದಿಗೆ 509 ಪಂದ್ಯಗಳಲ್ಲಿ 334 ಕ್ಯಾಚ್ ಪಡೆದಿದ್ದ ರಾಹುಲ್ ದ್ರಾವಿಡ್ ದಾಖಲೆ ಮುರಿದರು. ಅಂ.ರಾ. ಕ್ರಿಕೆಟ್‌ನಲ್ಲಿ ಗರಿಷ್ಠ ಕ್ಯಾಚ್ ಪಡೆದ ಫೀಲ್ಡರ್ ಎಂಬ ದಾಖಲೆ ಶ್ರೀಲಂಕಾದ ಮಹೇಲ ಜಯವರ್ಧನೆ ಹೆಸರಲ್ಲಿದೆ. ಅವರು 652 ಪಂದ್ಯಗಳಲ್ಲಿ 440 ಕ್ಯಾಚ್ ಪಡೆದಿದ್ದಾರೆ.

ಕೊಹ್ಲಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಅತಿ ಹೆಚ್ಚು(7) ಬಾರಿ ಅರ್ಧಶತಕ ಬಾರಿಸಿದ ಆಟಗಾರ ಎನಿಸಿಕೊಂಡಿದ್ದಾರೆ. ಶಿಖರ್ ಧವನ್, ರಾಹುಲ್ ದ್ರಾವಿಡ್, ಸೌರವ್ ಗಂಗೂಲಿ ತಲಾ 6 ಬಾರಿ ಈ ಸಾಧನೆ ಮಾಡಿದ್ದಾರೆ. ಇನ್ನು, ಐಸಿಸಿ ಟೂರ್ನಿಗಳಲ್ಲಿ ಗರಿಷ್ಠ 50+ ಸ್ಕೋರ್ ದಾಖಲೆಯನ್ನೂ ಕೊಹ್ಲಿ ನಿರ್ಮಿಸಿದ್ದಾರೆ. ಅವರು ಒಟ್ಟು 24 ಬಾರಿ ಈ ಸಾಧನೆ ಮಾಡಿದ್ದಾರೆ. ಸಚಿನ್ ತೆಂಡುಲ್ಕರ್ 23 ಬಾರಿ 50+ ರನ್ ಗಳಿಸಿದ್ದರು.

ಏಕದಿನ ಕ್ರಿಕೆಟ್‌ನಲ್ಲಿ ಗರಿಷ್ಠ ಕ್ಯಾಚ್ ಪಡೆದ ಫಿಲ್ಡರ್‌ಗಳ ಪೈಕಿ ಕೊಹ್ಲಿ ವಿಶ್ವ 2ನೇ ಸ್ಥಾನಕ್ಕೇರಿದ್ದಾರೆ. ಅವರು ಏಕದಿನದಲ್ಲಿ ಒಟ್ಟು 161 ಕ್ಯಾಚ್ ಪಡೆದಿದ್ದಾರೆ. ಈ ಮೂಲಕ ಆಸ್ಟ್ರೇಲಿಯಾದ ರಿಕಿ ಪಾಂಟಿಂಗ್(160) ರನ್ನು ಹಿಂದಿಕ್ಕಿದರು. ಜಯವರ್ಧನೆ 218 ಕ್ಯಾಚ್‌ಗಳೊಂದಿಗೆ ಅಗ್ರಸ್ಥಾನದಲ್ಲಿದ್ದಾರೆ. ಕೊಹ್ಲಿ ಏಕದಿನ ಕ್ರಿಕೆಟ್‌ನಲ್ಲಿ ಮತ್ತೊಂದು ಮೈಲುಗಲ್ಲು ಸಾಧಿಸಿದ್ದಾರೆ. ಎದುರಾಳಿ ತಂಡದ ವಿರುದ್ಧ ಗುರಿ ಬೆನ್ನತ್ತುವ ವೇಳೆ 8000 ರನ್ ಪೂರ್ಣಗೊಳಿಸಿದ ವಿಶ್ವದ ಕೇವಲ 2ನೇ ಆಟಗಾರ ಎನಿಸಿಕೊಂಡಿದ್ದಾರೆ. ಅವರು 166 ಪಂದ್ಯಗಳ 159 ಇನ್ನಿಂಗ್ಸ್‌ಗಳಲ್ಲಿ 00000 ರನ್ ಕಲೆಹಾಕಿದ್ದಾರೆ. ಸಚಿನ್ ತೆಂಡುಲ್ಕರ್ 232 ಇನ್ನಿಂಗ್ಸ್‌ಗಳಲ್ಲಿ 8720 ರನ್ ಗಳಿಸಿದ್ದು, ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ. ರೋಹಿತ್ ಶರ್ಮಾ 6115, ಶ್ರೀಲಂಕಾದ ಜಯಸೂರ್ಯ 5742 ರನ್ ಬಾರಿಸಿದ್ದಾರೆ.



## ಕಣ್ಣುಕುಕ್ಕಿದ 3ಡಿ ಡ್ರೆಸ್

ಬಾಲಿವುಡ್ ನಟಿ ಊರ್ವಶಿ ರೌಟೇಲಾ ತಮ್ಮ ಮಾತು, ಸೋಶಿಯಲ್ ಮೀಡಿಯಾ ಪೋಸ್ಟ್, ವಿವಾದಗಳಿಂದಲೇ ಸುದ್ದಿಯಾಗಿದ್ದಾರೆ. ಇದೀಗ ಊರ್ವಶಿ ರೌಟೇಲಾ ಡ್ರೆಸ್ ಎಲ್ಲರ ಗಮನಸೆಳೆದಿದೆ. ಪ್ಯಾರಿಸ್‌ನಲ್ಲಿ ಊರ್ವಶಿ ರೌಟೇಲಾ ಅವರ 3ಡಿ ಫ್ಲೋರಲ್ ಡ್ರೆಸ್ ಇದೀಗ ಎಲ್ಲರ ಗಮನಸೆಳೆದಿದೆ.

ದಿಟ್ಟ ಹೇಳಿಕೆಗಳಿಗೆ ಹೆಸರುವಾಸಿಯಾದ ನಟಿ, ಈ ವರ್ಷ ಸಾಮಾಜಿಕ ಮಾಧ್ಯಮದಲ್ಲಿ ಟ್ರೆಂಡಿಂಗ್ ಆಗಿದ್ದಾರೆ. ತಮ್ಮ ವಿಶೇಷ ಡ್ರೆಸ್ ಮೂಲಕ ಸದ್ದು ಮಾಡುತ್ತಿದ್ದಾರೆ. ಇದು ಯಾವ ರೀತಿಯ ಡ್ರೆಸ್ ಎಂದು ಹಲವರು ಪ್ರಶ್ನಿಸಿದ್ದಾರೆ. ಆದರೆ ಇದೇ ವೇಳೆ ಡ್ರೆಸ್ ಕುರಿತು ಭಾರಿ ಮೆಚ್ಚುಗೆ ವ್ಯಕ್ತವಾಗಿದೆ. ಇತ್ತೀಚೆಗೆ ಊರ್ವಶಿ ಅಭಿನಯದ ಡಾಕು ಮಹಾರಾಜ್ ಚಿತ್ರದ ಊರ್ವಶಿ ದೃಶ್ಯಗಳನ್ನು ನೆಟ್‌ಫ್ಲಿಕ್ ತೆಗೆದು ಹಾಕಿದೆ ಅನ್ನೋದು ಭಾರಿ ವಿವಾದಕ್ಕೆ ಕಾರಣವಾಗಿತ್ತು. ಇದೀಗ ಊರ್ವಶಿ ಡ್ರೆಸ್ ಮೂಲಕ ಮತ್ತೆ ಚರ್ಚೆಗೆ ಗ್ರಾಸವಾಗಿದ್ದಾರೆ. ಊರ್ವಶಿ 'ಬ್ಲ್ಯಾಕ್ ರೋಸ್' ಎಂಬ ತೆಲುಗು ಚಿತ್ರದಲ್ಲಿ ಬ್ಯುಸಿಯಾಗಿದ್ದಾರೆ ಮತ್ತು 'ವೆಲ್ಕಮ್ ಟು ಜಂಗಲ್' ಚಿತ್ರದ ಭಾಗವಾಗಿದ್ದಾರೆ.

## 'ಸಿಕಂದರ್' ಮೊದಲ ಹಾಡಿನ ಟೀಸರ್ ಅನಾವರಣ

2025ರ ಈದ್‌ಗೆ ಅಭಿಮಾನಿಗಳಿಗೆ ಭರ್ಜರಿ ಮನರಂಜನೆ ಕೊಡಲು ಭಾಯ್‌ಜಾನ್ ಸಲ್ಮಾನ್ ಖಾನ್ ಸಜ್ಜಾಗಿದ್ದಾರೆ. ಹೌದು, ಈ ಈದ್‌ಗೆ ಸಲ್ಲು ಅಭಿನಯದ ಬಹುನಿರೀಕ್ಷಿತ ಆ್ಯಕ್ಷನ್ ಸಿನಿಮಾ 'ಸಿಕಂದರ್' ಚಿತ್ರಮಂದಿರಗಳನ್ನು ತಲುಪಲಿದೆ. ಈಗಾಗಲೇ ಅನಾವರಣಗೊಂಡಿರುವ ಪೋಸ್ಟರ್ಸ್, ಟೀಸರ್‌ಗಳು ಅಭಿಮಾನಿಗಳಲ್ಲಿ ಸಿನಿಮಾ ನೋಡುವ ಕುತೂಹಲವನ್ನು ಹೆಚ್ಚಿಸಿದೆ. ಇದೀಗ ಚಿತ್ರದ ಮೊದಲ ಹಾಡು ಬಿಡುಗಡೆಗೆ ಸಜ್ಜಾಗಿದೆ.



ಸಿಕಂದರ್‌ನ ಫಸ್ಟ್ ಸಾಂಗ್ 'ಝೋಹ್ರಾ ಜಬೀನ್'ನ ಟೀಸರ್ ಅನಾವರಣಗೊಂಡಿದೆ. ರಂಜಾನ್‌ನ ಎರಡನೇ ದಿನ ಟೀಸರ್ ಬಿಡುಗಡೆ ಮಾಡುವ ಮೂಲಕ ಅಭಿಮಾನಿ ಬಳಗಕ್ಕೆ ಉಡುಗೊರೆ ನೀಡಿದೆ. ಝೋಹ್ರಾ ಜಬೀನ್ ಪಾರ್ಟಿ ಥೀಮ್ ಸಾಂಗ್ ಆಗಿದ್ದು, ಸಂಪೂರ್ಣ ಹಾಡಿಗಾಗಿ ಅಭಿಮಾನಿಗಳು ಕಾತರರಾಗಿದ್ದಾರೆ. ನಾಳೆ ಸಾಂಗ್ ರಿಲೀಸ್ ಆಗಲಿದೆ.

ಝೋಹ್ರಾ ಜಬೀನ್ ಟೀಸರ್‌ನಲ್ಲಿ ಸಲ್ಮಾನ್ ಖಾನ್ ಕಂಪ್ಲೀಟ್ 'ಭಾಯ್‌ಜಾನ್' ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಸಲ್ಲು ಬ್ಲ್ಯಾಕ್ ಕುರ್ತಾ ಪೈಜಾಮ ಧರಿಸಿದ್ದು ಸಖತ್ ಡ್ಯಾಶಿಂಗ್ ಆಗಿ ಕಾಣಿಸಿಕೊಂಡಿದ್ದಾರೆ. ಮತ್ತೊಂದೆಡೆ, ನ್ಯಾಷನಲ್ ಕ್ರಶ್ ಎಂದೇ ಜನಪ್ರಿಯರಾಗಿರುವ ರಶ್ಮಿಕಾ ಮಂದಣ್ಣ ಆಕರ್ಷಕ ನೋಟದಲ್ಲಿ ಕಾಣಿಸಿಕೊಂಡಿದ್ದಾರೆ. ಬ್ಲ್ಯಾಕ್ ಬ್ಯೂಟಿಫುಲ್ ಔಟ್‌ಫಿಟ್‌ಲ್ಲಿ ಬೆರಗುಗೊಳಿಸುವ ನೋಟ ಬೀರಿದ್ದಾರೆ. ಬಹುಭಾಷೆಗಳಲ್ಲಿ ಛಾಪು ಮೂಡಿಸಿರುವ ರಶ್ಮಿಕಾ ಮಂದಣ್ಣ ಇಂಡಿಯನ್ ಸೂಪರ್ ಸ್ಟಾರ್ ಸಲ್ಮಾನ್ ಖಾನ್ ಜೊತೆ ಇದೇ ಮೊದಲ ಬಾರಿಗೆ ಸ್ಕ್ರೀನ್ ಶೇರ್ ಮಾಡಿದ್ದಾರೆ. 'ಸಿಕಂದರ್' ಒಂದು ಮಾಸ್ ಆ್ಯಕ್ಷನ್ ಸಿನಿಮಾವಾಗಿದ್ದು, ಬ್ಲಾಕ್‌ಬಸ್ಟರ್ 'ಗಜಿನಿ' ನಿರ್ದೇಶಕ ಎ.ಆರ್.ಮುರುಗದಾಸ್ ಆ್ಯಕ್ಷನ್ ಕಟ್ ಹೇಳಿದ್ದಾರೆ. ಸಾಜಿದ್ ನಾಡಿಯಾಡ್ವಾಲಾ ಬಿಗ್ ಬಜೆಟ್‌ನಲ್ಲಿ ನಿರ್ಮಿಸಿದ್ದಾರೆ. 2024ರ ಹಿಟ್ ಸಿನಿಮಾ ಕಿಕ್ ಬಳಿಕ ಸಲ್ಮಾನ್ ಖಾನ್ ಜೊತೆ ಮತ್ತೊಮ್ಮೆ ಕೈ ಜೋಡಿಸಿದ್ದಾರೆ. ಇತ್ತೀಚೆಗೆ ಬಿಡುಗಡೆಯಾಗಿರೋ ಟೀಸರ್‌ನಲ್ಲಿ ಚಿತ್ರದ ಉಳಿದ ತಾರಾಗಣವನ್ನೂ ಬಹಿರಂಗಪಡಿಸಲಾಗಿದೆ. ಬಾಹುಬಲಿ ಚಿತ್ರದಲ್ಲಿ ಕಟ್ಟಪ್ಪ ಪಾತ್ರ ನಿರ್ವಹಿಸಿದ್ದ ದಕ್ಷಿಣ ಭಾರತದ ಜನಪ್ರಿಯ ನಟ ಸತ್ಯರಾಜ್, ಸಿಕಂದರ್‌ನಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಕನ್ನಡ ಸಿನಿಮಾ ಮೂಲಕ ವೃತ್ತಿಜೀವನ ಆರಂಭಿಸಿರುವ ರಶ್ಮಿಕಾ ಮಂದಣ್ಣ ಅವರೀಗ ಬಹುಭಾಷೆಗಳಲ್ಲಿ ತಮ್ಮ ಛಾಪು ಮೂಡಿಸಿದ್ದಾರೆ. ಅದೂ ಕೂಡಾ ಬಿಗ್ ಸ್ಟಾರ್ಸ್ ಜೊತೆಯೇ ತೆರೆ ಹಂಚಿಕೊಳ್ಳುತ್ತಿರೋದು ಹೆಮ್ಮೆಯ ವಿಷಯ. ಇತ್ತೀಚೆಗಷ್ಟೇ ತೆರೆಕಂಡಿರುವ 'ಛಾವಾ' ಭರ್ಜರಿ ಯಶಸ್ಸು ಕಂಡಿದ್ದು, 2025ರ ಸೂಪರ್ ಹಿಟ್ ಸಿನಿಮಾವಾಗಿ ಹೊರಹೊಮ್ಮಿದೆ. ಫೆಬ್ರವರಿ 14ರಂದು ಬಿಡುಗಡೆ ಆಗಿರುವ ಚಿತ್ರದಲ್ಲಿ ವಿಕ್ಕಿ ಕೌಶಲ್ ಜೊತೆ ನಟಿಸಿದ್ದು, ಭಾರತದಲ್ಲಿ ಈಗಾಗಲೇ 400 ಕೋಟಿಗೂ ಅಧಿಕ ಕಲೆಕ್ಷನ್ ಮಾಡಿದೆ. 2024ರ ಡಿಸೆಂಬರ್‌ನಲ್ಲಿ ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ 'ಪುಷ್ಪ 2: ದಿ ರೂಲ್' ಸಾವಿರ ಕೋಟಿಗೂ ಅಧಿಕ ಕಲೆಕ್ಷನ್ ಮಾಡಿದೆ. ಈ ಚಿತ್ರದಲ್ಲಿ ಸೌತ್ ಸೂಪರ್ ಸ್ಟಾರ್ ಅಲ್ಲು ಅರ್ಜುನ್ ಜೊತೆ ಸ್ಕ್ರೀನ್ ಶೇರ್ ಮಾಡಿದ್ದರು. 2023ರ ಕೊನೆಗೆ ಬಂದ ಅನಿಮಲ್‌ನಲ್ಲಿ ಬಾಲಿವುಡ್ ಸ್ಟಾರ್ ಹೀರೋ ರಣ್‌ಬೀರ್ ಕಪೂರ್ ಜೊತೆ ತೆರೆ ಹಂಚಿಕೊಂಡಿದ್ದರು. ಈ ಸಿನಿಮಾ ಕೂಡಾ ಬ್ಲಾಕ್‌ಬಸ್ಟರ್ ಹಿಟ್ ಆಗಿದೆ. ಸದ್ಯ ಸಿಕಂದರ್ ಕೂಡಾ ಬಿಗ್ ಹಿಟ್ ಕೊಡುವ ಭರವಸೆಯಿದೆ.



## ಉಪವಾಸ ಮುರಿದ ಮೊಹಮ್ಮದ್ ಶಮಿ

ಟೀಂ ಇಂಡಿಯಾ ವೇಗಿ ಮೊಹಮ್ಮದ್ ಶಮಿ ದೇಶಕ್ಕಾಗಿ ತಮ್ಮ ರಂಜಾನ್ ಉಪವಾಸ ಮುರಿದಿದ್ದಾರೆ. ಹೌದು, ಚಾಂಪಿಯನ್ಸ್ ಟ್ರೋಫಿ ಸೆಮಿಫೈನಲ್ ಪಂದ್ಯದಲ್ಲಿ ಟೀಂ ಇಂಡಿಯಾ ವೇಗಿ ಮೊಹಮ್ಮದ್ ಶಮಿ ಉತ್ತಮ ಪ್ರದರ್ಶನ ನೀಡಲು ಉಪವಾಸ ಮುರಿದಿದ್ದಾರೆ.

ದೇಶಕ್ಕಾಗಿ ಶಮಿ ತೆಗೆದುಕೊಂಡ ನಿರ್ಧಾರಕ್ಕೆ ಭಾರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಸೋಶಿಯಲ್ ಮೀಡಿಯಾದಲ್ಲಿ ಮೊಹಮ್ಮದ್ ಶಮಿ ನಡೆಯನ್ನು ಕೊಂಡಾಡಿದ್ದಾರೆ. ಪಂದ್ಯದ ನಡುವೆ ಮೊಹಮ್ಮದ್ ಶಮಿ ಎನರ್ಜಿ ಜ್ಯೂಸ್ ಕುಡಿಯುತ್ತಿರುವ ವಿಡಿಯೋಗಳು ಹರಿದಾಡುತ್ತಿದೆ. ಇದೇ ವಿಡಿಯೋಗೆ ಕಮೆಂಟ್ ಮಾಡುತ್ತಿದ್ದಾರೆ.

ಸದ್ಯ ಪವಿತ್ರ ರಂಜಾನ್ ತಿಂಗಳ ಉಪವಾಸ. ಎಲ್ಲಾ ಮುಸ್ಲಿಮರು ಉಪವಾಸ ಮಾಡುತ್ತಾರೆ. ಪ್ರವಾದಿ ಮೊಹಮ್ಮದರ ಆಶಯ, ಹಾಗೂ ಇಸ್ಲಾಂ ಆಚರಣೆಯಂತೆ ಅಷ್ಟೇ ಕಟ್ಟುನಿಟ್ಟಾಗಿ ಉಪವಾಸ ಮಾಡುತ್ತಾರೆ. ಹೀಗಿದ್ದರೂ ಮೊಹಮ್ಮದ್ ಶಮಿ ದೇಶಕ್ಕಾಗಿ ಉಪವಾಸ ಮುರಿದಿದ್ದಾರೆ. ಟೀಂ ಇಂಡಿಯಾದ ಪ್ರಮುಖ ವೇಗಿಯಾಗಿರುವ ಮೊಹಮ್ಮದ್ ಶಮಿ ಮೇಲೆ ಜವಾಬ್ದಾರಿ ಹೆಚ್ಚಿದೆ. ಹೀಗಾಗಿ ಶಮಿ ಉಪವಾಸ ಮುರಿದು ಟೀಂ ಇಂಡಿಯಾಣಟಿಜಜಜಿಟಿಜಜಗಿ ಉತ್ತಮ ದಾಳಿ ಸಂಘಟಿಸಿದ್ದಾರೆ. ಮೊಹಮ್ಮದ್ ಶಮಿ ನಡೆಗೆ ಸೋಶಿಯಲ್ ಮೀಡಿಯಾದಲ್ಲಿ ಪ್ರಶಂಸೆಗಳು ವ್ಯಕ್ತವಾಗುತ್ತಿದೆ. ದೇಶಕ್ಕಾಗಿ ಉಪಸವಾಸ ಮುರಿದ ಶಮಿಗೆ ಅಭಿನಂದನೆಗಳ ಮಹಾಪೂರವೇ ಹರಿದು ಬಂದಿದೆ. ಟೀಂ ಇಂಡಿಯಾ ಸೈನಿಕ ಎಂದು ಬಣ್ಣಿಸಿದ್ದಾರೆ.

ಮೊಹಮ್ಮದ್ ಶಮಿ ಎಷ್ಟು ದಿನ ಉಪವಾಸ ಮುರಿಯುತ್ತಾರೆ. ಬಳಿಕ ಅಷ್ಟು ದಿನ ಮುಂದವರಿಸಬಹುದು. ಕ್ರೀಡಾಪಟುಗಳಿಗೆ, ಕೆಲವರಿಗೆ ಅನಿವಾರ್ಯ ಕಾರಣಗಳಿಂದ ಉಪವಾಸ ಮಾಡಲು ಸಾಧ್ಯವಾಗುದಿಲ್ಲ.ಅವರು ತಮ್ಮ ಪೂರ್ವನಿಗದಿತ ಸೇವೆ ಬಳಿಕ ಉಪವಾಸ ಮುಂದುವರಿಸಬಹುದು ಎಂದು ಹಲವರು ಸಲಹೆ ನೀಡಿದ್ದಾರೆ.

ಉಪವಾಸ ಮುರಿದು ಸೆಮಿಫೈನಲ್ ಪಂದ್ಯ ಆಡಿದ ಮೊಹಮ್ಮದ್ ಶಮಿ ಆಸ್ಟ್ರೇಲಿಯಾ ವಿರುದ್ಧ ಉತ್ತಮ ಹೋರಾಟ ನೀಡಿದ್ದಾರೆ. ಮೊಹಮ್ಮದ್ ಶಮಿ ಪ್ರಮುಖ 3 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಆರಂಭದಲ್ಲೇ ಟ್ರಾವಿಸ್ ಹೆಡ್ ಕ್ಯಾಚ್ ಕೈಚೆಲ್ಲಿದರೂ, ಬಳಿಕ ಮಾರಕ ದಾಳಿ ಮೂಲಕ ಪ್ರಮುಖ ವಿಕೆಟ್ ಕಬಳಿಸಿ ಟೀಂ ಇಂಡಿಯಾ ಯಶಸ್ಸಿನಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದರು. ಕೂಪರ್ ಕೊನೊಲೆ ಖಾತೆ ಆರಂಭಿಸುವ ಮೊದಲೇ ಶಮಿ ದಾಳಿಗೆ ಔಟಾದರು.

ಇನ್ನು ಅಬ್ಬರಿಸಿದ ಸ್ಟೀವ್ ಸ್ಮಿತ್ ಕೆಲ ಹೊತ್ತು ಕ್ರೀಸ್‌ನಲ್ಲಿದ್ದರೂ ಆಸ್ಟ್ರೇಲಿಯಾ ಬೃಹತ್ ಮೊತ್ತ ಪೇರಿಸುತಿತ್ತು. ಆದರೆ ಮೊಹಮ್ಮದ್ ಶಮಿ ಉತ್ತಮ ದಾಳಿ ಸಂಘಟಿಸಿ ಸ್ಮಿತ್ ವಿಕೆಟ್ ಕಬಳಿಸಿದರು. ಸ್ಮಿತ್ 73 ರನ್ ಸಿಡಿಸಿ ನಿರ್ಗಮಿಸಿದರು.

ಇನ್ನು ನ್ಯಾಥನ್ ಎಲ್ಲಿಸ್ ವಿಕೆಟ್ ಕಬಳಿಸಿ ಶಮಿ ಟೀಂ ಇಂಡಿಯಾ ಯಶಸ್ಸಿನಲ್ಲಿ ಕಾರಣರಾಗಿದ್ದಾರೆ. ಆಸ್ಟ್ರೇಲಿಯಾ ವಿರುದ್ಧದ ಸೆಮಿಫೈನಲ್ ಪಂದ್ಯದಲ್ಲಿ ಗರಿಷ್ಠ ವಿಕೆಟ್ ಕಬಳಿಸಿದ ಹೆಗ್ಗಳಿಕೆಗೂ ಮೊಹಮ್ಮದ್ ಶಮಿ ಪಾತ್ರರಾಗಿದ್ದಾರೆ. ಇಂಜುರಿಯಿಂದ ಟೀಂ ಇಂಡಿಯಾ ಹೊರಗುಳಿದಿದ್ದ ಮೊಹಮ್ಮದ್ ಶಮಿ ಚಾಂಪಿಯನ್ಸ್ ಟ್ರೋಫಿ ಮೂಲಕ ಕಮ್‌ಬ್ಯಾಕ್ ಮಾಡಿದ್ದರು. ಶಮಿ ಅದ್ಭುತ ಬೌಲಿಂಗ್ ದಾಳಿಯಿಂದ ಟೀಂ ಇಂಡಿಯಾ ಇದೀಗ ಚಾಂಪಿಯನ್ಸ್ ಟ್ರೋಫಿ ಫೈನಲ್ ಪ್ರವೇಶಿಸಿದೆ.

ಆಸ್ಟ್ರೇಲಿಯಾ ವಿರುದ್ಧದ ಸೆಮಿಫೈನಲ್ ಪಂದ್ಯದಲ್ಲಿ ಟೀಂ ಇಂಡಿಯಾ, ಆಸ್ಟ್ರೇಲಿಯಾ ವಿರುದ್ಧ 4 ವಿಕೆಟ್ ಗೆಲುವು ದಾಖಲಿಸಿದೆ. ಈ ಮೂಲಕ ಫೈನಲ್ ಪ್ರವೇಶಿಸಿದೆ. ಲೀಗ್ ಪಂದ್ಯದಲ್ಲಿ ಬಾಂಗ್ಲಾದೇಶ, ಪಾಕಿಸ್ತಾನ ಹಾಗೂ ನ್ಯೂಜಿಲೆಂಡ್ ತಂಡವನ್ನು ಮಣಿಸಿದ ಭಾರತ ಸೆಮಿಫೈನಲ್ ಪ್ರವೇಶಿಸಿತ್ತು. ಇದೀಗ ಆಸ್ಟ್ರೇಲಿಯಾ ಸೋಲಿಸಿ ಫೈನಲ್‌ಗೆ ಲಗ್ಗೆ ಇಟ್ಟಿದೆ. ಮಾರ್ಚ್ 9 ರಂದು ಫೈನಲ್ ಪಂದ್ಯ ನಡೆಯಲಿದೆ. ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಪಂದ್ಯ ಆಯೋಜಿಸಲಾಗಿದೆ. ಸೌತ್ ಆಫ್ರಿಕಾ ಹಾಗೂ ನ್ಯೂಜಿಲೆಂಡ್ ನಡುವಿನ 2ನೆ ಸೆಮಿಫೈನಲ್ ಗೆದ್ದ ತಂಡ ಟೀಂ ಇಂಡಿಯಾ ವಿರುದ್ಧ ಫೈನಲ್ ಆಡಲಿದೆ.

# ಅನುಶ್ರೀ ನಿರೂಪಣೆಗೆ ವಿರೋಧ

## ಮುಟ್ಟಿನೋಡಿಕೊಳ್ಳುವಂತೆ ಟಾಂಗ್ ಕೊಟ್ಟ ಬ್ಯೂಟಿ!



ಕನ್ನಡ ಕಿರುತೆರೆಯಲ್ಲಿ ಯಾವುದೇ ವೇದಿಕೆಯಾದರೂ ಸಹ ಹರಳುಹುರಿದಂತೆ ನಿರರ್ಗಳವಾಗಿ ಮಾತನಾಡುತ್ತಾ, ಮೇಲೆ ಎಲ್ಲರನ್ನೂ ತನ್ನವರಂತೆ ಕಾಣುತ್ತಾ ಜನರಿಗೆ ಮನರಂಜನೆ ನೀಡುವ ಆಂಕರ್ ಅನುಶ್ರೀ ಅವರ ನಿರೂಪಣೆಯನ್ನು ಕಿತ್ತುಕೊಳ್ಳಲು ಕೆಲವರು ಹುನ್ನಾರ ಮಾಡಿದ್ದಾರೆ. ಹೀಗಾಗಿ, ತನ್ನ ಆಂಕರಿಂಗ್ ಮಾಡುವುದನ್ನು ವಿರೋಧಿಸಿದವರಿಗೆ ನಟಿ ಮತ್ತು ಆಂಕರ್ ಅನುಶ್ರೀ ಮುಟ್ಟಿನೋಡಿಕೊಳ್ಳುವಂತೆ ತಿರುಗೇಟು ಕೊಟ್ಟಿದ್ದಾರೆ.

ಕಾಮಿಡಿ ಕಿಲಾಡಿ ಕಾರ್ಯಕ್ರಮದ ಸ್ಪರ್ಧಿಗಳಾದ ಜಗ್ಗಪ್ಪ, ಸೂರಜ್, ನಯನಾ ಹಾಗೂ ಅನುಶ್ರೀ ಅವರು ಕುಳಿತು ಮಾತನಾಡುವಾಗ, ಅನುಶ್ರೀ ಆಂಕರಿಂಗ್ ಮಾಡುವುದಕ್ಕೆ ವಿರೋಧ ಮಾಡಿದವರ ಬಗ್ಗೆ ಮಾತನಾಡಿದ್ದಾರೆ. ಈ ವೇಳೆ, 'ನಾನು ಎಲ್ಲಿಯೇ ನಿರೂಪಣೆಗೆ ಹೋದರೂ ಇವಳು ಬಿಟ್ಟರೆ ಬೇರೆ ಯಾರು ಇಲ್ಲವೇ ನಿಮಗೆ. ಇವಳನ್ನು ಬಿಟ್ಟರೆ ಬೇರೆ ಆಂಕರ್ ಸಿಗುವುದಿಲ್ಲವೇ ಎಂದು ಕೇಳುತ್ತಾರೆ. ಅಂಥವರಿಗೆ ನಾನು ಹೇಳೋದಿಷ್ಟೇ.. ನಾನು ಕೆಲಸ ಮಾಡ್ತೀನಿ ಗುರು. ಅವರವರ ಕೆಲಸವನ್ನು ಪಡೆಯುವುದು ಅವರ ಟ್ಯಾಲೆಂಟಿನ ಮೇಲೆ. ಅದನ್ನು ಮೊದಲು ನೀವು ತಿಳಿದುಕೊಳ್ಳಿ. ಈಗ ನಯನಾ ಇದಾಳೆ, ನಯನ ಕೆಲಸ ಗಿಟ್ಟಿಸಿಕೊಂಡಿದ್ದಾಳೆ ಎಂದರೆ ಅದು ನಯನಾ ಟ್ಯಾಲೆಂಟ್. ಇದೀಗ ನಾನು ನಯನಾ ಅಥವಾ ಬೇರೆಯವರ ಬಗ್ಗೆ ಮಾತನಾಡುತ್ತಿಲ್ಲ. ನನ್ನ ಬಗ್ಗೆ ಬಂದ ಕಾಮೆಂಟ್‌ಗಳ ಬಗ್ಗೆ ನಾನು ಇದೀಗ ಸ್ಪಷ್ಟನೆಯನ್ನು ಕೊಡುತ್ತಿದ್ದೇನೆ ಎಂದಿದ್ದಾರೆ.

ನಿಮಗೆ ಇವಳನ್ನು ಬಿಟ್ರೇ ಬೇರೆ ಆಂಕರ್ ಇಲ್ವಾ ಎಂದು ಕೇಳುವವರು ಇಲ್ಲಿ ಕೇಳಿ.. ನನಗೆ ಟಾಕ್ ಬ್ಯಾಕ್ ಕೊಡಬೇಡಿ.. ನನಗೆ ಸ್ಕ್ರಿಪ್ಟ್ ಕೊಡಬೇಡಿ ಆದರೂ ನಾನು ಆಂಕರಿಂಗ್ ಮಾಡುತ್ತೇನೆ. 10 ಗಂಟೆ ನಾನು ವೇದಿಕೆ ಮೇಲೆ ಕಾರ್ಯಕ್ರಮವನ್ನು ನಡೆಸಿಕೊಡುತ್ತೇನೆ. ನಾನು ಇದನ್ನು ಎಲ್ಲಿಯೂ ಹೇಳಿಕೊಂಡಿಲ್ಲ, ಯಾರ ಮುಂದೆಯೂ ಮಾತನಾಡಿಲ್ಲ. ಇಲ್ಲಿ ನಾವೆಲ್ಲರೂ ಒಂದು ಫ್ಯಾಮಿಲಿ ತರಹ ಇರುವುದರಿಂದ ನಾನು ನಿಮ್ಮ ಮುಂದೆ ಹೇಳಿಕೊಳ್ಳುತ್ತಿದ್ದೇನೆ ಎಂದು ಹೇಳಿಕೊಂಡರು.

ನನಗೆ ಟಾಕ್ ಬ್ಯಾಕ್ ಬೇಡ, ಸ್ಕ್ರಿಪ್ಟ್ ಬೇಡ, ಯಾರು ಬರ್ತಾರೆ, ಏನು ಎಂದು ಒಂಚೂರೂ ಮಾಹಿತಿ ಕೊಡಬೇಕು. ಆದರೂ ಆಂತಹ ಕಾರ್ಯಕ್ರಮವನ್ನು 10 ಗಂಟೆಗಳ ಕಾಲ ನಿರರ್ಗಳವಾಗಿ ನಡೆಸಿಕೊಡ್ತೀನಿ. ಇದು ಗೊತ್ತಿರುವುದರಿಂದ ನಮ್ಮ ಚಾನೆಲ್‌ನವರು, ಕೆಲವೊಂದು ವ್ಯಕ್ತಿ ಅಥವಾ ಸಂಸ್ಥೆಗಳು ಏ.. ಅವಳು ಮಾಡ್ತಾಳೆ ಬಿಡೋ ಎಂದು ಹೇಳಿ ನನ್ನನ್ನು ಕರೆದು ವೇದಿಕೆ ಮೇಲೆ ನಿರೂಪಣೆಗೆ ಬಿಡುತ್ತಾರೆ. ಏನಿಲ್ಲ ಎಂದರೂ ಮಾಡುತ್ತಾಳೆ, ಕಾರ್ಯಕ್ರಮಕ್ಕೆ ಹಾಕೊಳ್ಳಿ ಪರವಾಗಿಲ್ಲ ಎಂದು ಹೇಳುತ್ತಾರೆ. ಇದು ಹೆಂಗೆ ಗೊತ್ತಾ ಮನೆಯಲ್ಲಿ ಕುಳಿತುಕೊಂಡು ಕಾರ್ಯಕ್ರಮವನ್ನು ನೋಡುವಂತಹ ಜನಕ್ಕೆ ಗೊತ್ತಿದೆ. ಅವರು ತುಂಬಾ ಕಾರ್ಯಕ್ರಮವನ್ನು ತುಂಬಾ ಎಂಜಾಯ್ ಮಾಡುತ್ತಿರುತ್ತಾರೆ. ಈ ಮೊಬೈಲ್‌ನಲ್ಲಿ ಮೆಸೇಜ್ ಮಾಡುವಂತಹವರಿಗೆ ಗೊತ್ತಿರೊಲ್ಲ. ಏಕೆಂದರೆ ಅವರಿಗೆ ಮಾಡೋದಕ್ಕೆ ಕೆಲಸ ಇರೋದಿಲ್ವಲ್ಲ, ಅದಕ್ಕೆ ಹೀಗೆ ಕಾಮೆಂಟ್‌ಗಳನ್ನು ಮಾಡುತ್ತಾರೆ ಎಂದು ತಿರುಗೇಟು ನೀಡಿದರು.

ಇಲ್ಲಿ ಜಗ್ಗ ಹೇಳಿದ್ದು ಕೂಡ ಸರಿಯಾಗಿದೆ. ಜನರ ಮನಸ್ಸನ್ನು ಒಮ್ಮೆ ಗೆದ್ದುಬಿಟ್ಟರೆ ಸಾಕು. ಅವನಿಗೆ ಬದುಕು ಇರೋದೇ ಇಲ್ಲವಾ? ನಿಜವಾಗಿ ಹೇಳಬೇಕೆಂದರೆ ಗೆದ್ದವರಿಗೆ ಕಷ್ಟಗಳು ಜಾಸ್ತಿ ಎಂದು ಅನುಶ್ರೀ ಅವರು ತಮಗಾದ ನೋವಿನ ಅನುಭವವನ್ನು ಹಂಚಿಕೊಂಡಿದ್ದಾರೆ.

ಇದೇ ವೇಳೆ 'ಎಷ್ಟು ವರ್ಷದಿಂದ ನೀವೇ ಆಂಕರಿಂಗ್ ಮಾಡ್ತೀರಾ ಹೊಸಬರಿಗೆ ಅವಕಾಶ ಮಾಡಿಕೊಡಿ ಎಂದು ಕೇಳುವವರ ಸಂಖ್ಯೆ ಹೆಚ್ಚಾಗಿದೆ. ಯಾರಾದರೂ ಹೊಸಬರಿಗೆ ಅವಕಾಶ ಕೊಟ್ಟುಬಿಡಿ. ಹೊಸದಾಗಿ ಏನಾದರೂ ಮಾಡಿ ಎಂದು ಹೇಳುತ್ತಾರೆ ಎಂದು ಕಾಮಿಡಿ ಕಿಲಾಡಿಗಳು ನಟಿ ನಯನಾ ತಮ್ಮ ಅಳಲನ್ನೂ ತೋಡಿಕೊಂಡಿದ್ದಾರೆ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878